According to the orders of Wakf Tribunal the Self Style committee has submitted a proposal for the Constitution of Managing Committee. A public Notice dt.13.7.2004 was issued calling objections / suggestions. Since there was objection that the office bearers in the proposed Managing committee are unauthorized occupants of the Wakfs properties belonging to the Mosque, the Committee was not constituted besides the Karnataka Public Premises (Eviction of unauthorized occupants) Act 1974 has been invoked for eviction of unauthorized occupants and cases under the Act have also been filed against some of the office bearers of self styled committee.

Whereas this subject was placed before the Board in its meeting held on 7.8.2008 and the Board resolved vide subject No.1 (Sl.No.3) of the Board Meeting held on 7.8.2008 to appoint Mr.Raeeq Mulla Retd. Deputy Commissioner of Police as Admimistrator of the above institution in view of the vacancy in the office of the Muthawalli for non Constitution of the Regular Committee and in view of the fact that the proposed office bearers are all unauthorized occupants of the property belonging to the Wakf Institution. Hence this Order.

Order No.40/MSC/BNU/80 Bangalore, Dated: 21st August 2008

In view of the facts stated in the Preamble to the Order, the Madeena Masjid, Bamboo Bazar Sultanji Gunta Road Shivajinagar, is hereby taken under direct management under section 65 of Wakf act 1995 and Mr Rafeeq Mulla. Retd. Deputy Commissioner of Police is hereby appointed as an Administrator of said Wakf to manage the day to day affairs of the said Wakf. He should submit the Bye-laws for approval.

Chief Executive Officer,
Karnataka State Board of Wakfs.

P.D. 91

POLICE DEPARTMENT

(Form-1)

(See Rule 9)

Notification

Shri/Smt **E. Ravi** Working as **APC 142, C.A.R.** in the Police Department of / Office of **CITY ARMED RESERVE, MYSORE CITY** is permitted to change his/her Name to **RAVI RAJSHEKHAR**

Signature and Designation of the
Appointing Authority

P.D. 122

ಪೊಲೀಸ್ ಇಲಾಖೆ

CRESIP - 2008

(Common Recruitment Examination for Sub-Inspectors of Police)

(ISO:9001-2000 ಪ್ರಮಾಣಿತ ನೇಮಕಾತಿ ಪ್ರಕ್ರಿಯೆ)

ಅಧಿಸೂಚನೆ ಸಂಖ್ಯೆ.27/ನೇಮಕಾತಿ/2008-09, ದಿನಾಂಕ: 10ನೇ ಸೆಪ್ಟೆಂಬರ್ 2008

ವಿಷಯ: ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) / ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಸೇವೆಯಲ್ಲಿರುವವರು ಒಳಗೊಂಡಂತೆ ಮತ್ತು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ರಾಜ್ಯ ಗುಪ್ತವಾರ್ತೆ) ಹುದ್ದೆಗಳಿಗೆ ನೇರ ನೇಮಕಾತಿ ಕುರಿತು.

ಕರ್ನಾಟಕ ರಾಜ್ಯದ, ಪೊಲೀಸ್ ಇಲಾಖೆಯಲ್ಲಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) / ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಸೇವೆಯಲ್ಲಿರುವವರು ಒಳಗೊಂಡಂತೆ ಮತ್ತು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ರಾಜ್ಯ ಗುಪ್ತವಾರ್ತೆ) ಹುದ್ದೆಗಳ ನೇರ ನೇಮಕಾತಿಗಾಗಿ ಕರ್ನಾಟಕ ರಾಜ್ಯ ಪೊಲೀಸ್ ಲಿಪಿಕ ನೌಕರರ ಸೇವೆಗಳು ಸೇರಿದಂತೆ (ನೇಮಕಾತಿ) ನಿಯಮಗಳು 2004, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಆಯ್ಕೆ ಮೂಲಕ ನೇರ ನೇಮಕಾತಿ) ನಿಯಮಾವಳಿ 1973ರ ಹಾಗೂ ಮೇಲೆ ತಿಳಿಯಪಡಿಸಿದ ನಿಯಮಗಳಿಗೆ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಅನುಸಾರ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. ಅರ್ಜಿ ಸಲ್ಲಿಸುವ ವಿಧಾನ: ಈ ಬಾರಿ ಅರ್ಜಿಗಳನ್ನು 17 ಕೇಂದ್ರಗಳಲ್ಲಿ ಮಾರಾಟ ಮಾಡುವುದಲ್ಲದೇ ಆನ್-ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರವೂ ಸಹ ಕರೆಯಲಾಗಿದೆ.

ಶುಲ್ಕ :

ಅಭ್ಯರ್ಥಿಗಳು ಈ ಕೆಳಕಂಡ ವರ್ಗಗಳಿಗೆ ಸೇರಿದವರಾಗಿದ್ದರೆ, ಅದರ ಮುಂದೆ ನಮೂದಿಸಿರುವ ಅರ್ಜಿ / ಪರೀಕ್ಷಾ ಶುಲ್ಕವನ್ನು ಪಾವತಿಸುವುದು	ಆನ್-ಲೈನ್		ಖುದ್ದಾಗಿ	
	ಅರ್ಜಿ ಶುಲ್ಕ	ಪರೀಕ್ಷಾ ಶುಲ್ಕ	ಅರ್ಜಿ ಶುಲ್ಕ	ಪರೀಕ್ಷಾ ಶುಲ್ಕ
ಪ.ಜಾ, ಪ.ಪಂ, ಪ್ರವರ್ಗ-1	ರೂ.75/-	ರೂ.100/-	ರೂ.150/-	ರೂ.100/-
ಇತರೆ	ರೂ.75/-	ರೂ.250/-	ರೂ.150/-	ರೂ.250/-
ಬ್ಯಾಂಕ್ ಶುಲ್ಕ	ರೂ.25/-	-	-	-

ಟಿಪ್ಪಣಿ: ಒಮ್ಮೆ ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ನೇಮಕಾತಿ ಸಮಿತಿಯು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಮೇಲಿನ ಕಾಲಂಗಳಲ್ಲಿ ಅಭ್ಯರ್ಥಿಗೆ ಅನ್ವಯಿಸುವ ಅರ್ಜಿ ಶುಲ್ಕ ಮತ್ತು ಪರೀಕ್ಷಾ ಶುಲ್ಕವನ್ನು **ನಗದು ರೂಪದಲ್ಲಿ ಮಾತ್ರ** (ಆನ್-ಲೈನ್ ಮುಖೇನ ಕ್ರೆಡಿಟ್/ಡೆಬಿಟ್ ಕಾರ್ಡ್‌ನಲ್ಲಿ ಪಾವತಿಸುವವರನ್ನು ಹೊರತುಪಡಿಸಿ) ಪಾವತಿಸತಕ್ಕದ್ದು. (ಪಾವತಿಸುವ ವಿವರಗಳನ್ನು ಈ ಕೆಳಗೆ ಸೂಚಿಸಲಾಗಿದೆ). ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.

ಆನ್-ಲೈನ್ (On-line) ಮುಖಾಂತರ :

ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in/cresip08 ಅಥವಾ www.karnatakastatepolice.org ಮೂಲಕ ಅರ್ಜಿಯನ್ನು ಪಡೆದುಕೊಂಡು (Download), ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು. ಈ ಅರ್ಜಿಯ ಜೊತೆಗೆ ಫೋಟೋವನ್ನು (Soft Copy - less than 100 KB) ಕಡ್ಡಾಯವಾಗಿ ಸೇರಿಸಿ, ಕಂಪ್ಯೂಟರ್ ಮುಖೇನ ಅಪ್‌ಲೋಡ್ (Upload) ಮಾಡುವುದು. ಇಲ್ಲವಾದಲ್ಲಿ ಅಂತಹ ಅರ್ಜಿಗಳನ್ನು ಸ್ವೀಕರಿಸಲು ಅವಕಾಶವಿರುವುದಿಲ್ಲ. ಅಭ್ಯರ್ಥಿಗಳು ನೀಡಿರುವ ವಿವರಗಳು ಎಲ್ಲ ರೀತಿಯಿಂದಲೂ ಸಮರ್ಪಕವಾಗಿದ್ದು ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ ಅರ್ಜಿಯನ್ನು ಸಲ್ಲಿಸಲು ಅವಕಾಶವಿರುತ್ತದೆ. ಅರ್ಹ ಅಭ್ಯರ್ಥಿಯು Submit ಬಟನ್‌ಅನ್ನು ಒತ್ತಿದರೆ ಅರ್ಜಿ ಸಂಖ್ಯೆ ಸೃಜನೆಯಾಗುತ್ತದೆ. ಈ ಸಂಖ್ಯೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ

ಬರೆದಿಟ್ಟುಕೊಳ್ಳತಕ್ಕದ್ದು. (ಭರ್ತಿ ಮಾಡಿದ ಆನ್–ಲೈನ್ ಅರ್ಜಿಯ ಪ್ರತಿಯನ್ನು ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು. ಈ ಅರ್ಜಿ ಸಂಖ್ಯೆಯು ಮುಂದಿನ ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ). ಅರ್ಜಿ ಶುಲ್ಕ ಮತ್ತು ಪರೀಕ್ಷಾ ಶುಲ್ಕವನ್ನು ಕ್ರೆಡಿಟ್ / ಡೆಬಿಟ್ ಕಾರ್ಡ್ ಮುಖೇನ ಪಾವತಿಸತಕ್ಕದ್ದು. ಕ್ರೆಡಿಟ್ / ಡೆಬಿಟ್ ಕಾರ್ಡ್‌ನ್ನು ಸಂಬಂಧಿಸಿದ ಬ್ಯಾಂಕ್ ಅಂಗೀಕರಿಸಿದಲ್ಲಿ ಮಾತ್ರ ಅರ್ಜಿ ಸಲ್ಲಿಸಿದಂತಾಗುತ್ತದೆ. ಕ್ರೆಡಿಟ್ / ಡೆಬಿಟ್ ಕಾರ್ಡ್ ಇಲ್ಲವಾದಲ್ಲಿ ನಗದು ರೂಪದಲ್ಲಿಯೂ ಸಹ ಪಾವತಿಸಬಹುದು. ಈ ಮೊತ್ತವನ್ನು ಪಾವತಿಸುವ ಸಲುವಾಗಿ Cash Payment Option ಆಯ್ಕೆ ಮಾಡಿದಾಗ ಒಂದು ತ್ರಿಪ್ರತಿ (Triplicate) ಚಲನ್ ತಯಾರಾಗುತ್ತದೆ. ಅಭ್ಯರ್ಥಿಯು ಈ ಚಲನ್‌ಅನ್ನು ಪ್ರಿಂಟ್ ಮಾಡಿಕೊಂಡು ಅದನ್ನು ತ್ರಿಪ್ರತಿಯಲ್ಲಿ ಭರ್ತಿ ಮಾಡಿ ಹತ್ತಿರದ ಸ್ಟೇಟ್ ಬ್ಯಾಂಕ್ ಆಫ್ ಮೈಸೂರು ಅಥವಾ ಸ್ಟೇಟ್ ಬ್ಯಾಂಕ್ ಆಫ್ ಹೈದರಾಬಾದ್ (SBM ಬ್ಯಾಂಕ್ ದೊರಕದಿದ್ದ ಪಕ್ಷದಲ್ಲಿ) ಅಥವಾ ಆಕ್ಸಿಸ್ (AXIS Bank) ಬ್ಯಾಂಕಿನಲ್ಲಿ ಅರ್ಜಿ ಶುಲ್ಕ (75 ರೂ.), ಬ್ಯಾಂಕ್ ಶುಲ್ಕ (25 ರೂ.) ಒಟ್ಟು ರೂ.100/– ಹಾಗೂ ಪರೀಕ್ಷಾ ಶುಲ್ಕವನ್ನು (100 ರೂ. ಅಥವಾ 250 ರೂ. – ಅಭ್ಯರ್ಥಿಗೆ ಅನ್ವಯಿಸುವಂತೆ) ತುಂಬಿ ಅಭ್ಯರ್ಥಿಯು ಚಲನ್ ಮೇಲೆ ಬ್ಯಾಂಕ್ ಶಾಖೆಯ ಮೊಹರು ಪಡೆದರೆ ನಗದು ಮುಖೇನ ಅರ್ಜಿ ಸಲ್ಲಿಸಿದಂತಾಗುತ್ತದೆ. ಆನ್–ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ದಿನಾಂಕ 15.09.2008 ರಂದು ಬೆಳಿಗ್ಗೆ 10–00 ಗಂಟೆಯಿಂದ ದಿನಾಂಕ 27.09.2008 ರಂದು ಮಧ್ಯಾಹ್ನ 12–00 ಗಂಟೆಯವರೆಗೆ ಸಲ್ಲಿಸತಕ್ಕದ್ದು. ಅರ್ಜಿ ಶುಲ್ಕ ಮತ್ತು ಪರೀಕ್ಷಾ ಶುಲ್ಕವನ್ನು ಬ್ಯಾಂಕ್‌ನ ಕಛೇರಿಯ ವೇಳೆಯಲ್ಲಿ ಮಾತ್ರ ಪಾವತಿಸತಕ್ಕದ್ದು.

ಖುದ್ದಾಗಿ ಅರ್ಜಿ ಪಡೆದು ಸಲ್ಲಿಸುವ ಅಭ್ಯರ್ಥಿಗಳು:

ಅರ್ಜಿ ಶುಲ್ಕ ರೂ.150/– ಗಳ **ನಗದು ರೂಪದಲ್ಲಿ** ಪಾವತಿಸಿ ದಿನಾಂಕ 15.09.2008 ರಿಂದ 27.09.2008 ರವರೆಗೆ ಬೆಳಿಗ್ಗೆ 10–00 ಗಂಟೆಯಿಂದ ಸಾಯಂಕಾಲ 5–00 ಗಂಟೆಯವರೆಗೆ ಎಲ್ಲಾ ಕೆಲಸದ ದಿನಗಳಂದು (Working Days) ಅರ್ಜಿಯನ್ನು ಈ ಕೆಳಗೆ ನಮೂದಿಸಿರುವ ಪೊಲೀಸ್ ಕಛೇರಿಗಳಲ್ಲಿ ಪಡೆದುಕೊಳ್ಳಬಹುದಾಗಿದೆ. ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಿದ ಅರ್ಜಿಗಳನ್ನು ರೂ. 250/– ಗಳ ಪರೀಕ್ಷಾ ಶುಲ್ಕದೊಂದಿಗೆ **ನಗದು ರೂಪದಲ್ಲಿ** ದಿನಾಂಕ 27.09.2008 ರಂದು ಸಾಯಂಕಾಲ 6–00 ಗಂಟೆಯೊಳಗೆ ಅಥವಾ ಅದಕ್ಕಿಂತ ಮುಂಚಿತವಾಗಿ **ಅರ್ಜಿಯನ್ನು ಖರೀದಿಸಿದ ಕಛೇರಿಯಲ್ಲಿಯೇ** ಅಭ್ಯರ್ಥಿ ಖುದ್ದಾಗಿ ಸಲ್ಲಿಸಬಹುದಾಗಿರುತ್ತದೆ. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1 ಅಭ್ಯರ್ಥಿಗಳಿಗೆ ರೂ. 100/– ಗಳನ್ನು ಪರೀಕ್ಷಾ ಶುಲ್ಕವಾಗಿ ನಿಗದಿಪಡಿಸಲಾಗಿದೆ. ನಮೂದಿಸಿದ ಪರೀಕ್ಷಾ ಶುಲ್ಕವನ್ನು ಪಾವತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

1. ಪೊಲೀಸ್ ಆಯುಕ್ತರು, ಬೆಂಗಳೂರು ನಗರ	10. ಪೊಲೀಸ್ ಅಧೀಕ್ಷಕರು, ದ.ಕ.ಜಿಲ್ಲೆ, ಮಂಗಳೂರು
2. ಪೊಲೀಸ್ ಆಯುಕ್ತರು, ಮೈಸೂರು ನಗರ	11. ಪೊಲೀಸ್ ಅಧೀಕ್ಷಕರು, ಉಡುಪಿ ಜಿಲ್ಲೆ
3. ಪೊಲೀಸ್ ಆಯುಕ್ತರು, ಹುಬ್ಬಳ್ಳಿ–ಧಾರವಾಡ ನಗರ	12. ಪೊಲೀಸ್ ಅಧೀಕ್ಷಕರು, ಉ.ಕ. ಜಿಲ್ಲೆ, ಕಾರವಾರ
4. ಪೊಲೀಸ್ ಅಧೀಕ್ಷಕರು, ಗುಲ್ಬರ್ಗಾ ಜಿಲ್ಲೆ	13. ಪೊಲೀಸ್ ಅಧೀಕ್ಷಕರು, ದಾವಣಗೆರೆ ಜಿಲ್ಲೆ
5. ಪೊಲೀಸ್ ಅಧೀಕ್ಷಕರು, ರಾಯಚೂರು ಜಿಲ್ಲೆ	14. ಪೊಲೀಸ್ ಅಧೀಕ್ಷಕರು, ಬಳ್ಳಾರಿ ಜಿಲ್ಲೆ
6. ಪೊಲೀಸ್ ಅಧೀಕ್ಷಕರು, ಬೆಳಗಾವಿ ಜಿಲ್ಲೆ	15. ಪೊಲೀಸ್ ಅಧೀಕ್ಷಕರು, ಶಿವಮೊಗ್ಗ ಜಿಲ್ಲೆ
7. ಪೊಲೀಸ್ ಅಧೀಕ್ಷಕರು, ಬಿಜಾಪೂರ ಜಿಲ್ಲೆ	16. ಪೊಲೀಸ್ ಅಧೀಕ್ಷಕರು, ಕೋಲಾರ ಜಿಲ್ಲೆ
8. ಪೊಲೀಸ್ ಅಧೀಕ್ಷಕರು, ಹಾಸನ ಜಿಲ್ಲೆ	17. ಪೊಲೀಸ್ ಅಧೀಕ್ಷಕರು, ತುಮಕೂರು ಜಿಲ್ಲೆ
9. ಪೊಲೀಸ್ ಅಧೀಕ್ಷಕರು, ಕೊಡಗು ಜಿಲ್ಲೆ	

ಸೂಚನೆ: ಆನ್‌ಲೈನ್ ಅರ್ಜಿ ಅಥವಾ ಮೇಲ್ಕಾಣಿಸಿದ ಕಛೇರಿಗಳಿಂದ ಖರೀದಿಸಿದ ಅರ್ಜಿಗಳನ್ನು ಮಾತ್ರ ಸ್ವೀಕರಿಸಲಾಗುವುದು. ಜೆರಾಕ್ಸ್ ಮಾಡಿದ ಇಲ್ಲವೇ ಖಾಸಗಿ ವ್ಯಕ್ತಿಗಳಿಂದ ಕೊಂಡಂತಹ ಅರ್ಜಿಗಳು ಸ್ವೀಕೃತಿಗೆ ಅನರ್ಹವಾಗುತ್ತದೆ. ಕೊರಿಯರ್ / ಪೋಸ್ಟ್ ಮುಖಾಂತರ ಕಳುಹಿಸಲಾಗುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಆನ್‌ಲೈನ್ ಮುಖಾಂತರ ಭರ್ತಿ ಮಾಡಿದ ಹಾಗೂ ಖುದ್ದಾಗಿ ಕೌಂಟರ್‌ನಲ್ಲಿ ನೀಡುವ ಅರ್ಜಿಗಳನ್ನು ಮಾತ್ರ ಸ್ವೀಕರಿಸಲಾಗುವುದು.

ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು, ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಬದಲಾವಣೆ ಮಾಡಲಾಗುವುದು.

1) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) – 259 ಹುದ್ದೆಗಳು

2) ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ – 33 ಹುದ್ದೆಗಳು

3) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) ಸೇವೆಯಲ್ಲಿರುವವರಿಗೆ – 33 ಹುದ್ದೆಗಳು
4) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ರಾಜ್ಯ ಗುಪ್ತವಾರ್ತೆ) – 25 ಹುದ್ದೆಗಳು

ಒಟ್ಟು – **350 ಹುದ್ದೆಗಳು**

ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್), ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹಾಗೂ ಸೇವೆಯಲ್ಲಿರುವವರ ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಕಂಡಂತಿದೆ:

ಎ) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) – 259 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಕಂಡಂತಿದೆ:

ವರ್ಗ	ಒಟ್ಟು ಹುದ್ದೆಗಳ ಸಂಖ್ಯೆ	ಗ್ರಾಮೀಣ ಅಭ್ಯರ್ಥಿ	ಮಾಜಿ ಸೈನಿಕರು	ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ	ಕನ್ನಡ ಮಾಧ್ಯಮ	ಇತರರು
ಸಾಮಾನ್ಯ ವರ್ಗ	129	32	13	07	06	71
ಪರಿಶಿಷ್ಟ ಜಾತಿ	40	10	04	02	02	22
ಪರಿಶಿಷ್ಟ ಪಂಗಡ	08	02	01	-	01	04
ಪ್ರವರ್ಗ–1	11	02	01	01	-	07
ಪ್ರವರ್ಗ–2ಎ	39	10	03	02	02	22
ಪ್ರವರ್ಗ–2ಬಿ	10	02	01	01	-	06
ಪ್ರವರ್ಗ–3ಎ	10	02	01	01	-	06
ಪ್ರವರ್ಗ–3ಬಿ	12	04	01	-	01	06
ಒಟ್ಟು	**259**	**64**	**25**	**14**	**12**	**144**

ಬಿ) ಮಹಿಳಾ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ – 33 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಕಂಡಂತಿದೆ:

ವರ್ಗ	ಒಟ್ಟು ಹುದ್ದೆಗಳ ಸಂಖ್ಯೆ	ಗ್ರಾಮೀಣ ಅಭ್ಯರ್ಥಿ	ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ	ಕನ್ನಡ ಮಾಧ್ಯಮ	ಇತರರು
ಸಾಮಾನ್ಯ ವರ್ಗ	17	04	01	01	11
ಪರಿಶಿಷ್ಟ ಜಾತಿ	05	01	-	01	03
ಪರಿಶಿಷ್ಟ ಪಂಗಡ	01	01	-	-	-
ಪ್ರವರ್ಗ–1	01	-	-	-	01
ಪ್ರವರ್ಗ–2ಎ	04	01	-	-	03
ಪ್ರವರ್ಗ–2ಬಿ	02	01	-	-	01
ಪ್ರವರ್ಗ–3ಎ	02	01	-	-	01
ಪ್ರವರ್ಗ–3ಬಿ	01	-	-	-	01
ಒಟ್ಟು	**33**	**09**	**01**	**02**	**21**

ಸಿ) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) ಸೇವೆಯಲ್ಲಿರುವವರು – 33 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಕಂಡಂತಿದೆ:

ವರ್ಗ	ಒಟ್ಟು ಹುದ್ದೆಗಳ ಸಂಖ್ಯೆ	ಗ್ರಾಮೀಣ ಅಭ್ಯರ್ಥಿ	ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ	ಕನ್ನಡ ಮಾಧ್ಯಮ	ಇತರರು
ಸಾಮಾನ್ಯ ವರ್ಗ	17	04	01	01	11
ಪರಿಶಿಷ್ಟ ಜಾತಿ	05	01	01	-	03
ಪರಿಶಿಷ್ಟ ಪಂಗಡ	01	-	-	-	01
ಪ್ರವರ್ಗ–1	02	01	-	-	01
ಪ್ರವರ್ಗ–2ಎ	05	01	01	-	03
ಪ್ರವರ್ಗ–2ಬಿ	01	-	-	-	01

ವರ್ಗ	ಒಟ್ಟು ಹುದ್ದೆಗಳ ಸಂಖ್ಯೆ	ಗ್ರಾಮೀಣ ಅಭ್ಯರ್ಥಿ	ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ	ಕನ್ನಡ ಮಾಧ್ಯಮ	ಇತರರು
ಪ್ರವರ್ಗ–3ಎ	01	-	-	-	01
ಪ್ರವರ್ಗ–3ಬಿ	01	01	-	-	-
ಒಟ್ಟು	**33**	**08**	**03**	**01**	**21**

ಡಿ) ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ರಾಜ್ಯ ಗುಪ್ತವಾರ್ತೆ) – 25 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಕಂಡಂತಿದೆ:

ವರ್ಗ	ಒಟ್ಟು ಹುದ್ದೆಗಳ ಸಂಖ್ಯೆ	ಗ್ರಾಮೀಣ ಅಭ್ಯರ್ಥಿ	ಮಾಜಿ ಸೈನಿಕರು	ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ	ಕನ್ನಡ ಮಾಧ್ಯಮ	ಇತರರು
ಸಾಮಾನ್ಯ ವರ್ಗ	12	03	01	-	-	08
ಪರಿಶಿಷ್ಟ ಜಾತಿ	04	01	-	-	-	03
ಪರಿಶಿಷ್ಟ ಪಂಗಡ	01	-	-	-	-	01
ಪ್ರವರ್ಗ–1	01	-	-	-	-	01
ಪ್ರವರ್ಗ–2ಎ	04	01	-	-	-	03
ಪ್ರವರ್ಗ–2ಬಿ	01	-	-	-	-	01
ಪ್ರವರ್ಗ–3ಎ	01	-	-	-	-	01
ಪ್ರವರ್ಗ–3ಬಿ	01	-	-	-	-	01
ಒಟ್ಟು	**25**	**05**	**01**	**-**	**-**	**19**

ಟಿಪ್ಪಣಿ :–

1) ಅಭ್ಯರ್ಥಿಗಳು ಹುದ್ದೆಯ ಆಯ್ಕೆ ಕುರಿತು ತಮ್ಮ ಆದ್ಯತೆಗಳನ್ನು (Preference) ನಿಖರವಾಗಿ ನಮೂದಿಸುವುದು, ಹಾಗೇನಾದರೂ ಆದ್ಯತೆಯನ್ನು ನಮೂದಿಸದಿದ್ದಲ್ಲಿ ಸಮಿತಿಯು ತೆಗೆದುಕೊಳ್ಳುವ ತೀರ್ಮಾನವೇ ಅಂತಿಮವಾಗಿರುತ್ತದೆ.

2) ಗ್ರಾಮೀಣ, ಮಾಜಿ ಸೈನಿಕರು, ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ ಮತ್ತು ಕನ್ನಡ ಮಾಧ್ಯಮ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಮೇಲೆ ನಮೂದಿಸಿರುವ ಅದೇ ಪ್ರವರ್ಗದ ಇತರ ಅಭ್ಯರ್ಥಿಗಳಿಂದ ತುಂಬಲಾಗುವುದು.

2. ಅರ್ಹತೆಗಳು:

(1) **ಅರ್ಹತಾ ಷರತ್ತುಗಳು** :

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ, ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

(2) **ವಯೋಮಿತಿ:**

ಎ) ಸಾಮಾನ್ಯ ಮತ್ತು ಮಹಿಳಾ ಅಭ್ಯರ್ಥಿಗಳಿಗೆ:

ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 27.09.2008 ಕ್ಕೆ ಅಭ್ಯರ್ಥಿಗೆ ಕನಿಷ್ಠ 21 ವರ್ಷ ವಯಸ್ಸಾಗಿರಬೇಕು ಹಾಗೂ ಈ ಕೆಳಕಂಡ ವಯಸ್ಸು ಮೀರಿರಬಾರದು.

ಅ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 26 ವರ್ಷಗಳು.

ಆ) ಇತರೆ ಅಭ್ಯರ್ಥಿಗಳಿಗೆ ಗರಿಷ್ಠ 24 ವರ್ಷಗಳು.

ಇ) ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದು ಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ ಅವರಿಗೆ ಅವರು ಸೇವೆ ಸಲ್ಲಿಸಿದ ಸೇವಾವಧಿಯ ಜೊತೆಗೆ ಹೆಚ್ಚುವರಿ ಮೂರು ವರ್ಷಗಳ ರಿಯಾಯಿತಿಯನ್ನು ನೀಡಲಾಗುವುದು.

ಬಿ) ಸೇವಾನಿರತ ಅಭ್ಯರ್ಥಿಗಳಿಗೆ:

ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 27.09.2008ಕ್ಕೆ ಅಭ್ಯರ್ಥಿಗೆ ಈ ಕೆಳಕಂಡ ವಯಸ್ಸು ಮೀರಿರಬಾರದು–

ಅ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 40 ವರ್ಷಗಳು.

ಆ) ಇತರೆ ಅಭ್ಯರ್ಥಿಗಳಿಗೆ ಗರಿಷ್ಠ 35 ವರ್ಷಗಳು.

ಟಿಪ್ಪಣಿ: ಪೊಲೀಸ್ ಇಲಾಖೆಯ ಯಾವುದೇ ವೃಂದದಲ್ಲಿ 8 ವರ್ಷಗಳು ಕನಿಷ್ಠ ಸೇವೆಯನ್ನು ಸಹಾಯಕ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ / ಮುಖ್ಯ ಪೇದೆ / ಪೊಲೀಸ್ ಪೇದೆಯಾಗಿ ಹೊಂದಿರಬೇಕು.

ಸಿ) ಮಾಜಿ ಸೈನಿಕ ಅಭ್ಯರ್ಥಿಗಳಿಗೆ:

ಕರ್ನಾಟಕ ಸರ್ಕಾರವು ಅಧಿಸೂಚನೆ ಸಂಖ್ಯೆ. ಹೆಚ್‌ಟಿಡಿ/62/ಪೊಸಅ/2003, ದಿನಾಂಕ 11.12.2003 ರನ್ವಯ ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದುಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ "ಅವರು ಸೇವೆ ಸಲ್ಲಿಸಿದ ಅವಧಿ" ಯ ಜೊತೆಗೆ ಹೆಚ್ಚುವರಿ ಮೂರು ವರ್ಷಗಳ ರಿಯಾಯಿತಿಗಳನ್ನು ನೀಡಲಾಗುವುದು. ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

ಮಾಜಿ ಸೈನಿಕರ ಬಗ್ಗೆ ವಿವರಣೆ:

(i) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಅಯೋಧನಾಗಿ) ಸೇವೆ ಸಲ್ಲಿಸಿದ ವ್ಯಕ್ತಿ, ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ: ಮತ್ತು

(ಅ) ಅಂತಹ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು.

ಅಥವಾ

(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

ಅಥವಾ

(ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.

1. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
2. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
3. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

ವಿವರಣೆ: ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

(ii) ಭಾರತ ಸರ್ಕಾರದ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ.36034/27/84–ಸಿಬ್ಬಂದಿ (ಎಸ್‌ಸಿಟಿ), ದಿನಾಂಕ 02.05.1985 ರನ್ವಯ ಮಾಜಿ ಸೈನಿಕರು ಅವರಿಗೆ ನೀಡಿರುವ ಪ್ರಯೋಜನವಾದ ಪುನರ್ ನೇಮಕವನ್ನು ಉಪಯೋಗಿಸಿಕೊಂಡು ಒಂದು ಬಾರಿ ಸರ್ಕಾರಿ ಹುದ್ದೆಗೆ ಆಯ್ಕೆಯಾದಲ್ಲಿ ಅಂತಹ ಮಾಜಿ ಸೈನಿಕರ ಸ್ಥಾನವು ಸರ್ಕಾರಿ ಉದ್ಯೋಗದ ಪುನರ್ ನೇಮಕಕ್ಕೆ ರದ್ದಾಗುತ್ತದೆ. ಕರ್ನಾಟಕ ಸರ್ಕಾರದ ಪತ್ರ ಸಂಖ್ಯೆ.ಒಇ/90/ಪೊಸಿಅ/2005, ದಿನಾಂಕ 02.02.2006ರ ಪತ್ರದಲ್ಲಿ ದಿನಾಂಕ 02.05.1985ರ ಕೇಂದ್ರ ಸರ್ಕಾರದ ಅಧಿಕೃತ ಜ್ಞಾಪನದಲ್ಲಿನ ಮಾರ್ಗಸೂಚಿಯನ್ವಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ. **(ಈ ಕಾರಣದಿಂದ ಮಾಜಿ ಸೈನಿಕರು ಕಡ್ಡಾಯವಾಗಿ ಅರ್ಜಿಯ (OMR) ಕಾಲಂ 8ಎ ಭರ್ತಿ ಮಾಡತಕ್ಕದ್ದು)**

(iii) ಈ ಅರ್ಜಿಯನ್ನು ಸಲ್ಲಿಸುವ ಕೊನೆಯ ದಿನಾಂಕದ ನಂತರ ಯಾವೊಬ್ಬ ಮಾಜಿ ಸೈನಿಕ ಸರ್ಕಾರಿ ನೌಕರಿಯೊಂದಕ್ಕೆ ಮಾಜಿ ಸೈನಿಕ ಮೀಸಲಾತಿ ಪಡೆದು ಸೇರಿದರೆ, ಅಂತಹ ಮಾಜಿ ಸೈನಿಕ ತಾನು ನೌಕರಿ ಸೇರಿದ ಬಗ್ಗೆ ಸದಸ್ಯ ಕಾರ್ಯದರ್ಶಿಗಳ ಕಛೇರಿಗೆ ಮಾಹಿತಿ ನೀಡತಕ್ಕದ್ದು. ಇಂತಹ ಅಭ್ಯರ್ಥಿಯು ಮಾಜಿ ಸೈನಿಕ ಮೀಸಲಾತಿಗೆ ಅನರ್ಹನಾಗುತ್ತಾನೆ.

(iv) ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

3. <u>ವಿದ್ಯಾರ್ಹತೆ:</u>

ಯು.ಜಿ.ಸಿ. ಇಂದ ಮಾನ್ಯತೆ ಪಡೆದಿರುವ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ, ಅಂದರೆ 27.09.2008ಕ್ಕೆ ಹೊಂದಿರಬೇಕು. (ಮಾಜಿ ಸೈನಿಕ ಅಭ್ಯರ್ಥಿಗಳು ಸೈನ್ಯದಲ್ಲಿ ನೀಡಿದ ಪದವಿ ಪ್ರಮಾಣ ಪತ್ರವನ್ನು ದಿನಾಂಕ 27.09.2008ರೊಳಗೆ ಹೊಂದಿದ್ದರೆ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಮಾತ್ರ ಪರಿಗಣಿಸಲಾಗುವುದು).

ಸೇವಾನಿರತ ಅಭ್ಯರ್ಥಿಗಳಿಗೆ ವಿದ್ಯಾರ್ಹತೆ ಮತ್ತು ಅನುಭವ:

ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿ ಜೊತೆಯಲ್ಲಿ ಪೊಲೀಸ್ ಇಲಾಖೆಯ ಯಾವುದೇ ವೃಂದದಲ್ಲಿ 8 ವರ್ಷಗಳ ಕನಿಷ್ಠ ಸೇವೆಯನ್ನು ಸಹಾಯಕ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ / ಮುಖ್ಯ ಪೇದೆ / ಪೊಲೀಸ್ ಪೇದೆಯಾಗಿ ಪೂರ್ಣಗೊಳಿಸಿರಬೇಕು. (ಸೇವಾನಿರತ ಅಭ್ಯರ್ಥಿಗಳು ಮಾಹಿತಿ ಸೂಚಿಯ ಪುಟ ಸಂಖ್ಯೆ–27 ಮತ್ತು 28 ರಲ್ಲಿರುವ ಅನುಬಂಧ–'ಎ' & 'ಬಿ' ಅನ್ನು ಕಡ್ಡಾಯವಾಗಿ ಮಾಡಿಸಿಟ್ಟುಕೊಂಡಿರತಕ್ಕದ್ದು)

<u>ಟಿಪ್ಪಣಿ :</u>

(1) ಡಿಪ್ಲೊಮಾ ಇತ್ಯಾದಿ ವಿದ್ಯಾರ್ಹತೆಗಳು ಪದವಿಗೆ ಸಮಾನವಾಗುವುದಿಲ್ಲ. ಆದ್ದರಿಂದ ಸಬ್ ಇನ್ಸ್‌ಪೆಕ್ಟರ್ ಆಫ್ ಪೊಲೀಸ್ ಹುದ್ದೆಗೆ ಈ ವಿದ್ಯಾರ್ಹತೆಯ ಅಭ್ಯರ್ಥಿಗಳು ಅರ್ಹರಾಗುವುದಿಲ್ಲ.

(2) ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ನಿಗಧಿತ ವಿದ್ಯಾರ್ಹತೆಯಾದ ಪದವಿಯನ್ನು ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತು ಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನೂ ಪರಿಗಣಿಸಲಾಗುವುದಿಲ್ಲ.

4. <u>ತರಬೇತಿ, ಖಾಯಂಪೂರ್ವ ಅವಧಿ ಮತ್ತು ವೇತನ ಶ್ರೇಣಿ :</u>

(ಎ) ತರಬೇತಿ:

ನೇಮಕಾತಿ ಹೊಂದಿದ ಅಭ್ಯರ್ಥಿಗಳು ಕರ್ನಾಟಕ ಪೊಲೀಸ್ ಅಕಾಡೆಮಿ, ಮೈಸೂರು ಅಥವಾ ಪೊಲೀಸ್ ತರಬೇತಿ ಕೇಂದ್ರ, ಗುಲ್ಬರ್ಗಾ ಅಥವಾ ಪೊಲೀಸ್ ಇಲಾಖೆಯು ತೀರ್ಮಾನಿಸಿದ ಇತರೆ ತರಬೇತಿ ಕೇಂದ್ರದಲ್ಲಿ ಹನ್ನೆರಡು

ತಿಂಗಳ ತರಬೇತಿಯನ್ನು ಪಡೆಯಬೇಕಾಗಿದ್ದು, ತರಬೇತಿಯ ಕೊನೆಯಲ್ಲಿ ನಿಗದಿತ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು.

(ಬಿ) ಖಾಯಂಪೂರ್ವ ಅವಧಿ:

ಮೂಲ ತರಬೇತಿ ಮತ್ತು ಪ್ರಾಯೋಗಿಕ ತರಬೇತಿ ಸೇರಿದಂತೆ ಎರಡು ವರ್ಷ ಆರು ತಿಂಗಳು.

(ಸಿ) ವೇತನ ಶ್ರೇಣಿ:

ರೂ. 10000–250–10500–300–12300–350–14400–400–16800–450–18150

5. ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆ:

ಅಭ್ಯರ್ಥಿಗಳಿಗೆ ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ಈ ಕೆಳಗೆ ನಮೂದಿಸಿರುವ 10 ಕೇಂದ್ರಗಳಲ್ಲಿ ನಡೆಸಲಾಗುವುದು. ಅಕ್ಟೋಬರ್ ತಿಂಗಳ 2ನೇ ವಾರ ಅಥವಾ ನಂತರದ ವಾರದಲ್ಲಿ ಈ ಪರೀಕ್ಷೆಗಳನ್ನು ನಡೆಸಲು ಉದ್ದೇಶಿಸಲಾಗಿದೆ. **ಅಭ್ಯರ್ಥಿಯು ಓ.ಎಂ.ಆರ್. ನಲ್ಲಿ ನೀಡಿರುವ ಮಾಹಿತಿ ಮೇರೆಗೆ ಅಭ್ಯರ್ಥಿಗಳಿಗೆ ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಗಳಿಗೆ ಕರೆಯಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಓ.ಎಂ.ಆರ್. ಅರ್ಜಿಯನ್ನು ಬಹಳ ಜಾಗರೂಕತೆಯಿಂದ ತುಂಬಬೇಕು. ಒಂದು ವೇಳೆ ಯಾವುದೇ ತಪ್ಪು / ಸುಳ್ಳು ಮಾಹಿತಿ ನೀಡಿದ್ದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತನವು ರದ್ದಾಗುತ್ತದೆ. ಇದಕ್ಕೆ ಅಭ್ಯರ್ಥಿಯೇ ಸಂಪೂರ್ಣ ಜವಾಬ್ದಾರನಾಗಿರುತ್ತಾನೆ.**

ಒಂದಕ್ಕಿಂತ ಹೆಚ್ಚು ಅರ್ಜಿ ಸಲ್ಲಿಸಿ ಒಂದಕ್ಕಿಂತ ಹೆಚ್ಚು ಕಡೆಗಳಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾದರೆ, ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದು ಪಡಿಸಲಾಗುವುದು. (ವಿಶೇಷ ಸೂಚನೆಗಳು 14(3) ನೋಡಿ) ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮ.

ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ಈ ಕೆಳಕಂಡ 10 ಕೇಂದ್ರಗಳಲ್ಲಿ ನಡೆಸಲಾಗುವುದು.
(ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ).

ಅರ್ಜಿ ಸ್ವೀಕೃತಿ, ಸಲ್ಲಿಕೆ	**ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಹಾಗೂ ಲಿಖಿತ ಪರೀಕ್ಷೆಯ ಕೇಂದ್ರಗಳು**
1. ಪೊಲೀಸ್ ಆಯುಕ್ತರು, ಬೆಂಗಳೂರು ನಗರ 2. ಪೊಲೀಸ್ ಅಧೀಕ್ಷಕರು, ಕೋಲಾರ ಜಿಲ್ಲೆ	ಬೆಂಗಳೂರು
3. ಪೊಲೀಸ್ ಅಧೀಕ್ಷಕರು, ತುಮಕೂರು ಜಿಲ್ಲೆ	ತುಮಕೂರು
4. ಪೊಲೀಸ್ ಆಯುಕ್ತರು, ಮೈಸೂರು ನಗರ 5. ಪೊಲೀಸ್ ಅಧೀಕ್ಷಕರು, ಕೊಡಗು ಜಿಲ್ಲೆ	ಮೈಸೂರು
6. ಪೊಲೀಸ್ ಅಧೀಕ್ಷಕರು, ಹಾಸನ ಜಿಲ್ಲೆ	ಹಾಸನ
7. ಪೊಲೀಸ್ ಆಯುಕ್ತರು, ಹುಬ್ಬಳ್ಳಿ–ಧಾರವಾಡ ನಗರ	ಹುಬ್ಬಳ್ಳಿ
8. ಪೊಲೀಸ್ ಅಧೀಕ್ಷಕರು, ದಾವಣಗೆರೆ ಜಿಲ್ಲೆ 9. ಪೊಲೀಸ್ ಅಧೀಕ್ಷಕರು, ಬಳ್ಳಾರಿ ಜಿಲ್ಲೆ 10. ಪೊಲೀಸ್ ಅಧೀಕ್ಷಕರು, ಶಿವಮೊಗ್ಗ ಜಿಲ್ಲೆ	ದಾವಣಗೆರೆ
11. ಪೊಲೀಸ್ ಅಧೀಕ್ಷಕರು, ಬೆಳಗಾವಿ ಜಿಲ್ಲೆ	ಬೆಳಗಾವಿ
12. ಪೊಲೀಸ್ ಅಧೀಕ್ಷಕರು, ಬಿಜಾಪೂರ ಜಿಲ್ಲೆ	ದೈಹಿಕ ಪರೀಕ್ಷೆ : ಬಿಜಾಪೂರ ಲಿಖಿತ ಪರೀಕ್ಷೆ : ಬಾಗಲಕೋಟೆ
13. ಪೊಲೀಸ್ ಅಧೀಕ್ಷಕರು, ಗುಲ್ಬರ್ಗಾ ಜಿಲ್ಲೆ 14. ಪೊಲೀಸ್ ಅಧೀಕ್ಷಕರು, ರಾಯಚೂರು ಜಿಲ್ಲೆ	ಗುಲ್ಬರ್ಗಾ
15. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು 16. ಪೊಲೀಸ್ ಅಧೀಕ್ಷಕರು, ಉಡುಪಿ ಜಿಲ್ಲೆ 17. ಪೊಲೀಸ್ ಅಧೀಕ್ಷಕರು, ಉತ್ತರ ಕನ್ನಡ ಜಿಲ್ಲೆ, ಕಾರವಾರ	ಮಂಗಳೂರು

ಓ.ಎಂ.ಆರ್. ಅರ್ಜಿಯ ಕಾಲಂ 10 ರಲ್ಲಿ ಅಭ್ಯರ್ಥಿಯು ಗುರುತುಪಡಿಸಿರುವ ಲಿಖಿತ ಪರೀಕ್ಷೆಯ ಕೇಂದ್ರದಲ್ಲಿಯೇ ದೈಹಿಕ ಪರೀಕ್ಷೆಯನ್ನು ಸಹ ನಡೆಸಲಾಗುವುದು. (ಬಾಗಲಕೋಟೆ ಲಿಖಿತ ಪರೀಕ್ಷೆ ಕೇಂದ್ರವನ್ನು ಗುರುತಿಸಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ದೈಹಿಕ ಪರೀಕ್ಷೆಯನ್ನು ಬಿಜಾಪೂರದಲ್ಲಿ ನಡೆಸಲಾಗುವುದು).

ಅಭ್ಯರ್ಥಿಗಳಿಗೆ ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಪ್ರತ್ಯೇಕವಾಗಿ ಅಂಚೆ ಮುಖಾಂತರ ನೀಡಲಾಗುವುದಿಲ್ಲ, ಆದರೆ ದೈಹಿಕ ಪರೀಕ್ಷೆಯ ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in/cresip08 ಅಥವಾ www.karnatakastatepolice.org ನಿಂದ ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು (Download). ದೈಹಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ದೈಹಿಕ ಪರೀಕ್ಷೆಯ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ದೈಹಿಕ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ದೈಹಿಕ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಅವರ ಭಾವಚಿತ್ರವುಳ್ಳ ಪ್ಯಾನ್ ಕಾರ್ಡ್, ಡ್ರೈವಿಂಗ್ ಲೈಸನ್ಸ್, ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC), ಫೋಟೋ ರೇಷನ್ ಕಾರ್ಡ್, ವಿದ್ಯಾರ್ಥಿ ಗುರುತಿನ ಚೀಟಿ ಅಥವಾ ಯಾವುದೇ ಸರ್ಕಾರಿ ಇಲಾಖೆಯು ನೀಡಿರುವ ಗುರುತಿನ ಚೀಟಿ ಇವುಗಳಲ್ಲಿ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ಕರೆಪತ್ರದ ಜೊತೆಗೆ ಓ.ಎಂ.ಆರ್. ಅರ್ಜಿ ಸ್ವೀಕೃತಿ ಪತ್ರವನ್ನು ಸಹ ತರತಕ್ಕದ್ದು, ತಪ್ಪಿದ್ದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹ ಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

(5ಎ) **<u>ದೇಹದಾರ್ಢ್ಯತೆ:</u>**

ಎಲ್ಲಾ ಸಾಮಾನ್ಯ ಅಭ್ಯರ್ಥಿ, ಸೇವಾನಿರತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅನ್ವಯಿಸುವಂತೆ

(ಎ) ಎತ್ತರ : 168 ಸೆಂ. ಮೀ.

ಎದೆ ಸುತ್ತಳತೆ : 86 ಸೆಂ. ಮೀ (ಪೂರ್ತಿ ವಿಸ್ತರಿಸಿದಾಗ) ಕನಿಷ್ಠ ವಿಸ್ತರಣೆ 5 ಸೆಂ. ಮೀ.

ಮಹಿಳಾ ಅಭ್ಯರ್ಥಿಗಳಿಗೆ ಅನ್ವಯಿಸುವಂತೆ

ಎತ್ತರ : 157 ಸೆಂ. ಮೀ.

ತೂಕ : 45 ಕೆ.ಜಿ.

(ಬಿ) **<u>ದೃಷ್ಟಿ:</u>**

ಕನ್ನಡಕ ಸಹಿತ ಅಥವಾ ಕನ್ನಡಕವಿಲ್ಲದೇ ಕೆಳಗೆ ಕಾಣಿಸಿದ ದರ್ಜೆಯ ಸಮೀಪ ಮತ್ತು ದೂರದ ದೃಷ್ಟಿ ಹೊಂದಿರಬೇಕು.

	ಉತ್ತಮ		ಕನಿಷ್ಠ
(i) ದೂರದ ದೃಷ್ಟಿ	6/9	ಅಥವಾ	6/9
	6/9		6/12
(ii) ಸಮೀಪದ ದೃಷ್ಟಿ	0/6		0/8

ಪ್ರತಿ ಕಣ್ಣು ಸಂಪೂರ್ಣ ಕ್ಷೇತ್ರ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ, ಮೆಳ್ಳಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆಯೆಂದು ಪರಿಗಣಿಸಲಾಗುವುದು.

(ಸಿ) **<u>ಶ್ರವಣ ಶಕ್ತಿ:</u>**

1) ರಿನ್ನೇಸ್ ಪರೀಕ್ಷೆ 2) ವೆಬ್ಬರ್ ಪರೀಕ್ಷೆ 3) ವರ್ಟಿಗೋ ಪರೀಕ್ಷೆ

ಮೇಲಿನ ಪರೀಕ್ಷೆಗಳಲ್ಲಿ ಯಾವುದೇ ನ್ಯೂನತೆಗಳು ಕಂಡು ಬಂದಲ್ಲಿ ಅನರ್ಹತೆ ಎಂದು ಪರಿಗಣಿಸಲಾಗುವುದು.

(ಡಿ) ಕೆಳಕಂಡವುಗಳು ದೈಹಿಕ ಅನರ್ಹತೆಗಳಾಗಿರುತ್ತವೆ:

1) ತಾಗು ಮಂಡಿ 2) ಬಾಗಿದ ಕಾಲುಗಳು 3) ಚಪ್ಪಟೆ ಪಾದ 4) ಅಪಧಮನಿ ಊತ

5) ಮಾತಿನಲ್ಲಿ ಅಡಚಣೆ ಹಾಗೂ 6) ಇತರೆ ದೈಹಿಕ ವಿಕಾರಗಳು.

(5ಬಿ)**ದೈಹಿಕ ಸಾಮರ್ಥ್ಯ ಪರೀಕ್ಷೆ (ಮಹಿಳಾ/ಸೇವಾನಿರತ/ಮಾಜಿ ಸೈನಿಕರನ್ನು ಹೊರತುಪಡಿಸಿ) ಸಾಮಾನ್ಯ ಅಭ್ಯರ್ಥಿಗಳಿಗೆ:**

ಅಭ್ಯರ್ಥಿಯು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಉತ್ತೀರ್ಣರಾದರೆ ಮಾತ್ರ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಲಾಗುವುದು. ಅಭ್ಯರ್ಥಿಗಳ ದೈಹಿಕ ಸಾಮರ್ಥ್ಯ ಬಗ್ಗೆ ಈ ಕೆಳಕಂಡ ಕ್ರಮದಲ್ಲಿಯೇ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಲಾಗುವುದು.

ಅಂಶಗಳು	ಅರ್ಹತಾ ವೇಳೆ / ದೂರ
100 ಮೀಟರು ಓಟ	15 ಸೆಕೆಂಡುಗಳು
ಗುಂಡೆಸೆತ (7.26 ಕಿಲೋ)	5.60 ಮೀಟರು
ಎತ್ತರ ಜಿಗಿತ	1.20 ಮೀಟರು
800 ಮೀಟರ್ ಓಟ	2 ನಿಮಿಷ 50 ಸೆಕೆಂಡುಗಳು
ಉದ್ದ ಜಿಗಿತ	3.80 ಮೀಟರು

ಮಹಿಳಾ, ಸೇವಾನಿರತ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಈ ಕೆಳಕಂಡ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಲಾಗುವುದು.

ಅಂಶಗಳು	ಅರ್ಹತಾ ವೇಳೆ / ದೂರ
100 ಮೀಟರು ಓಟ	18.5 ಸೆಕೆಂಡುಗಳು
ಗುಂಡೆಸೆತ (4 ಕಿಲೋ)	3.75 ಮೀಟರು
ಎತ್ತರ ಜಿಗಿತ	0.90 ಮೀಟರು
200 ಮೀಟರ್ ಓಟ	40 ಸೆಕೆಂಡುಗಳು
ಉದ್ದ ಜಿಗಿತ	2.50 ಮೀಟರು

1) ದೈಹಿಕ ಸಾಮರ್ಥ್ಯ ಪರೀಕ್ಷೆಯಲ್ಲಿ ಗುಂಡೆಸೆತ, ಎತ್ತರ ಜಿಗಿತ ಮತ್ತು ಉದ್ದ ಜಿಗಿತಗಳಿಗೆ ಮಾತ್ರ ಮೂರು ಅವಕಾಶಗಳನ್ನು ನೀಡಲಾಗುವುದು. ಇವುಗಳಲ್ಲಿ ಉತ್ತಮವಾದ ಒಂದನ್ನು ಮಾತ್ರ ಗಣನೆಗೆ ತೆಗೆದು ಕೊಳ್ಳಲಾಗುವುದು.

2) ದೇಹದಾರ್ಢ್ಯತೆ ಪರೀಕ್ಷೆಯನ್ನು ಒಂದು ಸಮಿತಿಯು ನಡೆಸುತ್ತದೆ. ಯಾವುದೇ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಪರಿಗಣಿಸಲಾಗುವುದಿಲ್ಲ. ದೇಹದಾರ್ಢ್ಯತೆ ಪರೀಕ್ಷೆ ಪೂರ್ಣಗೊಂಡ ನಂತರ ಅಭ್ಯರ್ಥಿಗಳು ದೇಹದಾರ್ಢ್ಯತೆ ಸಮಿತಿ ಸಮ್ಮುಖದಲ್ಲಿ ನಿಗದಿತ ನಮೂನೆಗೆ ಸಹಿ ಹಾಕಬೇಕು. ಇಲ್ಲವಾದರೆ ಅಂತಹವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

3) ಲಿಖಿತ ಪರೀಕ್ಷೆಗೆ ಅರ್ಹರಾಗಲು ಅಭ್ಯರ್ಥಿಗಳು ಮೇಲಿನ ಐದು (5) ದೈಹಿಕ ಸಾಮರ್ಥ್ಯ ಪರೀಕ್ಷೆಗಳ ಪೈಕಿ ಕನಿಷ್ಟ ಮೂರು (3) ರಲ್ಲಿ ಉತ್ತೀರ್ಣರಾಗಬೇಕು. ಆದರೂ ಸಹ ಮೇಲಿನ ಎಲ್ಲಾ 05 ಅಂಶಗಳಲ್ಲಿನ ಕ್ರಮದಲ್ಲಿಯೇ ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಭಾಗವಹಿಸುವುದು ಕಡ್ಡಾಯವಾಗಿರುತ್ತದೆ. ಈ ಮೇಲಿನ 5 ಪರೀಕ್ಷೆಗಳಲ್ಲಿ ಭಾಗವಹಿಸುವುದನ್ನು ತಿರಸ್ಕರಿಸುವುದು/ವಿಫಲವಾಗುವುದು ಅನರ್ಹತೆಗೆ ಒಳಗಾಗುವರು. ಯಾವುದೇ ರೀತಿಯ ದೈಹಿಕ ಸಾಮರ್ಥ್ಯ ಪರೀಕ್ಷೆ ಮುಗಿದ ನಂತರ ನಿಗದಿತ ನಮೂನೆಗೆ ಅಭ್ಯರ್ಥಿಯು ಸಹಿ ಹಾಕಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಯು ಅನರ್ಹತೆಗೊಳಗಾಗುವನು. ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಅಂಕಗಳನ್ನು ನೀಡಲಾಗುವುದಿಲ್ಲ. ಇವು ಕೇವಲ ಅರ್ಹತೆಗೆ ಮಾತ್ರ ಸೀಮಿತವಾಗಿರುತ್ತದೆ.

6. ಲಿಖಿತ ಪರೀಕ್ಷೆ:

ಅಭ್ಯರ್ಥಿಯು ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಗಳಲ್ಲಿ ಉತ್ತೀರ್ಣರಾದರೆ ಮಾತ್ರ ಲಿಖಿತ ಪರೀಕ್ಷೆಗೆ ಕರೆಯಲಾಗುವುದು. ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯನ್ನು ಓ.ಎಂ.ಆರ್. ಅರ್ಜಿಯ ಕಾಲಂ 10 ರಲ್ಲಿ ಗುರ್ತಿಸಿರುವ ಕೇಂದ್ರದಲ್ಲಿ ನಡೆಸಲಾಗುವುದು (ಪ್ಯಾರಾ 4ರಲ್ಲಿ ಸೂಚಿಸಿರುವ ಲಿಖಿತ ಪರೀಕ್ಷಾ ಕೇಂದ್ರಗಳು). (ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ). ನವೆಂಬರ್ ತಿಂಗಳ 3ನೇ ವಾರ ಅಥವಾ ನಂತರದ ಭಾನುವಾರದಲ್ಲಿ ಈ ಪರೀಕ್ಷೆಯನ್ನು ನಡೆಸಲು ಉದ್ದೇಶಿಸಲಾಗಿದೆ.

ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಪ್ರತ್ಯೇಕವಾಗಿ ಅಂಚೆ ಮುಖಾಂತರ ನೀಡಲಾಗುವುದಿಲ್ಲ, ಆದರೆ ಲಿಖಿತ ಪರೀಕ್ಷೆಯ ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್

www.ksp.gov.in/cresip08 ಅಥವಾ www.karnatakastatepolice.org ನಿಂದ ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು (Download). ಲಿಖಿತ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ಲಿಖಿತ ಪರೀಕ್ಷೆಯ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ಲಿಖಿತ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಅವರ ಭಾವಚಿತ್ರವುಳ್ಳ ಪ್ಯಾನ್ ಕಾರ್ಡ್, ಡ್ರೈವಿಂಗ್ ಲೈಸನ್ಸ್, ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC), ಫೋಟೋ ರೇಷನ್ ಕಾರ್ಡ್, ವಿದ್ಯಾರ್ಥಿ ಗುರುತಿನ ಚೀಟಿ ಅಥವಾ ಯಾವುದೇ ಸರ್ಕಾರಿ ಇಲಾಖೆಯು ನೀಡಿರುವ ಗುರುತಿನ ಚೀಟಿ ಇವುಗಳಲ್ಲಿ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ಕರೆಪತ್ರದ ಜೊತೆಗೆ ದೈಹಿಕ ಪರೀಕ್ಷೆಯ ಫಲಿತಾಂಶ ಹಾಳೆ ಮತ್ತು ಓ.ಎಂ.ಆರ್. ಅರ್ಜಿ ಸ್ವೀಕೃತಿ ಪತ್ರವನ್ನು ಸಹ ತರತಕ್ಕದ್ದು, ತಪ್ಪಿದ್ದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

ಲಿಖಿತ ಪರೀಕ್ಷೆಯು ಪದವಿ ಮಟ್ಟದ ಎರಡು ಪತ್ರಿಕೆಗಳದ್ದಾಗಿರುತ್ತದೆ.

ಎ) **ಪತ್ರಿಕೆ–1** : ಈ ಪ್ರಶ್ನೆ ಪತ್ರಿಕೆಯಲ್ಲಿ ಪ್ರಾಮುಖ್ಯವಾಗಿ ಪ್ರಬಂಧ ಬರಹ, ಭಾಷಾಂತರ ಪ್ರಶ್ನೆಗಳು ಇರುತ್ತದೆ. ಪ್ರಬಂಧ ಬರಹದಲ್ಲಿ 600 ಶಬ್ದಗಳ ಮಿತಿಯನ್ನು ಮೀರಿದರೆ ಅಂಕಗಳನ್ನು ಕಳೆಯಲಾಗುತ್ತದೆ. ಪ್ರಬಂಧದ ಜೊತೆ ಸಾರಾಂಶ ಬರಹ (Precis) ಪ್ರಶ್ನೆಯನ್ನೂ ಕೊಡಲಾಗುವುದು. ಈ ಪೇಪರ್‌ಗೆ ಕೊಡುವ ಉತ್ತರ ಪತ್ರಿಕೆಯಲ್ಲಿ ಕೇವಲ 10 ಪುಟಗಳು ಮಾತ್ರ ಇರುತ್ತವೆ. ಅಭ್ಯರ್ಥಿಗಳು 10 ಪುಟಗಳು ಮೀರದಂತೆ ಉತ್ತರಿಸತಕ್ಕದ್ದು ಹಾಗೂ ಅತಿರಿಕ್ತ ಉತ್ತರ ಪತ್ರಿಕೆಗಳನ್ನು ಕೊಡಲಾಗುವುದಿಲ್ಲ. ಈ ಪರೀಕ್ಷೆಯ ಅವಧಿ ಒಂದೂವರೆ ಗಂಟೆಗಳಾಗಿದ್ದು, 50 ಅಂಕಗಳನ್ನು ಹೊಂದಿರುತ್ತದೆ. (30 ಅಂಕಗಳು ಪ್ರಬಂಧ ಮತ್ತು ಸಾರಾಂಶ ಬರಹ ಹಾಗೂ 20 ಅಂಕಗಳು ಕನ್ನಡದಿಂದ ಇಂಗ್ಲೀಷ್‌ಗೆ ಮತ್ತು ಇಂಗ್ಲೀಷ್‌ನಿಂದ ಕನ್ನಡ ಭಾಷಾಂತರಕ್ಕೆ) ಇದರಲ್ಲಿ ಕನಿಷ್ಟ ಅಂಕಗಳು ಇರುವುದಿಲ್ಲ. ಭಾಷಾಂತರಕ್ಕೆ ಸಂಬಂಧಿಸಿದ ಪ್ರಶ್ನೆಗಳನ್ನು ಕಡ್ಡಾಯವಾಗಿ ಉತ್ತರಿಸಲೇಬೇಕು.

ಬಿ) **ಪತ್ರಿಕೆ–2**: ಈ ಪ್ರಶ್ನೆ ಪತ್ರಿಕೆಯು ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿದ್ದು, 150 ಅಂಕಗಳಿಗೆ ವಸ್ತುನಿಷ್ಟ (ಆಬ್ಜೆಕ್ಟೀವ್) ಮಾದರಿಯದಾಗಿದ್ದು, ಬಹುವಿಧ ಆಯ್ಕೆ (Multiple Choice) ಉತ್ತರಗಳ ಲಿಖಿತ ಪರೀಕ್ಷೆ ಇದ್ದು, ಪ್ರಶ್ನೆ ಪತ್ರಿಕೆಯಲ್ಲಿ 3 ಭಾಗಗಳಿದ್ದು, ಸುಮಾರು 85 ಪ್ರಶ್ನೆಗಳು ಇರುತ್ತವೆ. ಇವುಗಳನ್ನು ಉತ್ತರಿಸಲು 90 ನಿಮಿಷ ಸಮಯ ನೀಡಲಾಗುತ್ತದೆ. ಅಭ್ಯರ್ಥಿಯ ಮಾನಸಿಕ ಸಾಮರ್ಥ್ಯವನ್ನು ಅಳೆಯಲಾಗುವ ಈ ಪ್ರಶ್ನೆ ಪತ್ರಿಕೆಯಲ್ಲಿ ಅಭ್ಯರ್ಥಿಗಳಿಗೆ ಅನಲಿಟಿಕಲ್ ರೀಸನಿಂಗ್ (Analytical Reasoning), ಲಾಜಿಕಲ್ ರೀಸನಿಂಗ್ (Logical Reasoning), ಅಬಸ್ಟ್ರಾಕ್ಟ್ ರೀಸನಿಂಗ್ (Abstract Reasoning), ವರ್ಬಲ್ ಸ್ಕಿಲ್ (Verbal Skills), ಗಣಿತ ಮುಂತಾದ ವಿಷಯಗಳ ಬಗ್ಗೆ ಹೆಚ್ಚಿನ ಒತ್ತು ನೀಡಲಾಗುತ್ತದೆ. ಪ್ರಚಲಿತ ವಿದ್ಯಮಾನಗಳು, ಭಾರತದ ಸ್ವಾತಂತ್ರ್ಯ ಸಂಗ್ರಾಮ, ಚರಿತ್ರೆ, ಭೂಗೋಳ, ವಿಜ್ಞಾನ, ಕಲೆ, ಸಾಹಿತ್ಯ, ನೀತಿ ಶಿಕ್ಷಣ ಇತ್ಯಾದಿಗಳ ಬಗ್ಗೆ ಪ್ರಶ್ನೆಗಳು ಇರುತ್ತದೆ. ಪ್ರತಿ ತಪ್ಪು ಉತ್ತರಕ್ಕೆ ಅಂತಹುದೇ ಪ್ರಶ್ನೆಯ ಸರಿ ಉತ್ತರದ 0.25% ರಷ್ಟು ಅಂಕಗಳನ್ನು ಕಳೆಯಲಾಗುತ್ತದೆ.

ಸೂಚನೆ:

1) ಎ) ಅಭ್ಯರ್ಥಿಗಳು ಪತ್ರಿಕೆ–1 ನ್ನು ಇಂಗ್ಲೀಷ್ ಅಥವಾ ಕನ್ನಡದಲ್ಲಿ ಉತ್ತರಿಸಬಹುದು.

ಬಿ) ಪ್ರಶ್ನೆ ಪತ್ರಿಕೆ–2 ವಸ್ತುನಿಷ್ಟ (ಆಬ್ಜೆಕ್ಟೀವ್) ಮಾದರಿಯಾಗಿದ್ದು, ಅಭ್ಯರ್ಥಿಯು ಸರಿಯಾದ ಉತ್ತರವನ್ನು ಗುರುತಿಸಬೇಕು.

ಸಿ) ಪ್ರಶ್ನೆ ಪತ್ರಿಕೆ–2ರ ಉತ್ತರಗಳನ್ನು ಓ.ಎಂ.ಆರ್ ಶೀಟ್‌ನಲ್ಲಿ ಗುರುತಿಸಬೇಕಾಗುತ್ತದೆ. ನಿಗದಿತ ಜಾಗದಲ್ಲಿ ಪ್ರಶ್ನೆ ಪತ್ರಿಕೆಯ ಶ್ರೇಣಿ (ಎ,ಬಿ,ಸಿ ಇತ್ಯಾದಿ) ಹಾಗು ಅಭ್ಯರ್ಥಿಯು ಅರ್ಜಿ ಸಂಖ್ಯೆ. ರೋಲ್ ನಂಬರ್‌ನ್ನು ತಪ್ಪದೇ ಬರೆಯಬೇಕು. ಇದನ್ನು ಬರೆಯದಿದ್ದರೆ ಉತ್ತರಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ ಹಾಗೂ ಅಭ್ಯರ್ಥಿ ಆಯ್ಕೆ ಪ್ರಕ್ರಿಯೆಯಿಂದ ಹೊರಗಾಗುತ್ತಾನೆ.

ಡಿ) ಅಭ್ಯರ್ಥಿಗಳು ಅರ್ಜಿ ಸಂಖ್ಯೆ. ರೋಲ್ ನಂಬರ್ ಇತ್ಯಾದಿ ಭರ್ತಿ ಮಾಡಿದ ನಂತರ ನಿಗದಿತ ಜಾಗದಲ್ಲಿ ತಪ್ಪದೇ ಸಹಿ ಮಾಡಬೇಕು ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು.

2) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿರತಕ್ಕದ್ದು, ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯನ್ನು ಭರ್ತಿ ಮಾಡುವ ಬಗ್ಗೆ ಕೆಲವು ಮಾರ್ಗ ಸೂಚನೆಗಳನ್ನು ನೀಡುವರು.

3) ನೇಮಕಾತಿ ಸಮಿತಿಯು ನಡೆಸುವ ಯಾವುದೇ ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ, ಅಥವಾ ನಕಲು ಮಾಡಿದ್ದು ಕಂಡು ಬಂದರೆ ಅಥವಾ ನಕಲು ಮಾಡುವ ಸಾಮಗ್ರಿಯನ್ನು ಹೊಂದಿದ್ದರೆ, ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು.

4) ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಫೋನುಗಳನ್ನು ನಿಷೇಧಿಸಲಾಗಿದೆ. ಪರೀಕ್ಷೆ ಬರೆಯುವಾಗ ಮೊಬೈಲ್ ಫೋನುಗಳನ್ನು ಅಭ್ಯರ್ಥಿಗಳು ಹೊಂದಿದ್ದರೆ ಅವರನ್ನು ಅನರ್ಹಗೊಳಿಸಲಾಗುತ್ತದೆ.

5) ಎಲೆಕ್ಟ್ರಾನಿಕ್ ಸಾಮಗ್ರಿಗಳಾದ ಪೇಜರ್, ಕ್ಯಾಲ್ಕುಲೇಟರ್ ಇತ್ಯಾದಿಗಳನ್ನು ಪರೀಕ್ಷಾ ಕೊಠಡಿಗೆ ತೆಗೆದುಕೊಂಡು ಹೋಗುವುದನ್ನು ನಿಷೇದಿಸಲಾಗಿದೆ.

7. <u>ಮೌಖಿಕ ಪರೀಕ್ಷೆ:</u>

ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ತೋರಿದ ಅರ್ಹತೆಗನುಗುಣವಾಗಿ 10 (ಹತ್ತು) ಅಂಕಗಳುಳ್ಳ ಮೌಖಿಕ ಪರೀಕ್ಷೆ / ವ್ಯಕ್ತಿತ್ವ ಪರೀಕ್ಷೆಗೆ ಪ್ರತಿ ಗುಂಪು/ಜಾತಿ/ಪಂಗಡಗಳ ಅಭ್ಯರ್ಥಿಗಳನ್ನು ಅರ್ಹತೆ ಆಧಾರದ ಮೇಲೆ 1:3 ರ ಪ್ರಮಾಣದಲ್ಲಿ ಬೆಂಗಳೂರಿನಲ್ಲಿ ನೇಮಕಾತಿ ಸಮಿತಿಯ ಮುಂದೆ ಎಲ್ಲಾ ಮೂಲ ದಾಖಲಾತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕಾಗುತ್ತದೆ ಮತ್ತು ದಾಖಲಾತಿಗಳ ಒಂದು ಪ್ರತಿಯನ್ನು ಪತ್ರಾಂಕಿತ ಅಧಿಕಾರಿಯಿಂದ ದೃಢೀಕರಿಸಿಕೊಂಡು ತರುವುದು. ಈ ಮೌಖಿಕ ಪರೀಕ್ಷೆಗೆ ಕನಿಷ್ಟ ಅಂಕಗಳು ಇರುವುದಿಲ್ಲ. ಅಭ್ಯರ್ಥಿಗಳು ಮೂಲ ದಾಖಲಾತಿಗಳನ್ನು ಮೌಖಿಕ ಪರೀಕ್ಷೆ ಪ್ರಾರಂಭವಾಗುವ ಮುನ್ನ ಹಾಜರುಪಡಿಸಬೇಕು. **ಅಭ್ಯರ್ಥಿಗಳಿಗೆ ಮೌಖಿಕ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಪ್ರತ್ಯೇಕವಾಗಿ ಅಂಚೆ ಮುಖಾಂತರ ನೀಡಲಾಗುವುದಿಲ್ಲ,** ಆದರೆ ಮೌಖಿತ ಪರೀಕ್ಷೆಯ ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in/cresip08 ಅಥವಾ www.karnatakastatepolice.org ನಿಂದ ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು (Download). ಮೌಖಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಡಿ.ಐ.ಜಿ.ಪಿ., ನೇಮಕಾತಿ ಮತ್ತು ತರಬೇತಿ, ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು ಕಛೇರಿಯ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಮೌಖಿತ ಪರೀಕ್ಷೆಯ ಕರೆಪತ್ರದ ಜೊತೆಗೆ ದೈಹಿಕ ಪರೀಕ್ಷೆಯ ಫಲಿತಾಂಶ ಹಾಳೆ ಮತ್ತು ಓ.ಎಂ.ಆರ್. ಅರ್ಜಿ ಸ್ವೀಕೃತಿ ಪತ್ರವನ್ನು ಸಹ ತರತಕ್ಕದ್ದು, ತಪ್ಪಿದ್ದಲ್ಲಿ ಮೌಖಿಕ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

ನಿಗದಿಪಡಿಸಿರುವ ಕೊನೆಯ ದಿನಾಂಕವಾದ 27.09.2008 ಕ್ಕೆ ಮುಂಚಿತವಾಗಿ ಅಭ್ಯರ್ಥಿಗಳು ಕೋರುವ ಮೀಸಲಾತಿಗಳ ದಾಖಲಾತಿಗಳನ್ನು ಪಡೆದಿಟ್ಟುಕೊಂಡಿರಬೇಕು.

8. <u>ಜಾತಿ ಮೀಸಲಾತಿ ಪ್ರಮಾಣ ಪತ್ರಗಳು</u> :

ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಕಂಡ ನಮೂನೆಗಳಲ್ಲಿ ಸಲ್ಲಿಸುವುದು.

ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶಿಲ್ದಾರ್ ರವರಿಂದ ಪಡೆದ ನಮೂನೆ–ಡಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಬಿ) ಪ್ರವರ್ಗ – 1 ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ–ಇ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಸಿ) ಪ್ರವರ್ಗ– 2ಎ, 2ಬಿ, 3ಎ, 3ಬಿ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ – ಎಫ್ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

<u>ಸೂಚನೆ</u> : ನಮೂನೆ – ಎಫ್ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ: 27.09.2008 ಕ್ಕೆ ಐದು ವರ್ಷಕ್ಕಿಂತ ಹಳೆಯದಾಗಿರಬಾರದು.

9. **<u>ಗ್ರಾಮೀಣ ಮೀಸಲಾತಿ:</u>**

ಅ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು ತರಗತಿ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರಬೇಕು, **ಮತ್ತು**

ಆ) ಅಭ್ಯರ್ಥಿಯು ವ್ಯಾಸಂಗ ಮಾಡಿದ ಸ್ಥಳವು **ವ್ಯಾಸಂಗ ಮಾಡಿದ ಅವಧಿಯಲ್ಲಿ** ಅಂದಿನ ಕರ್ನಾಟಕ ಪೌರ ನಿಗಮಗಳ ಅಧಿನಿಯಮ 1976ರ ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆಯ ಹಂತದಲ್ಲಿರುವ ಪ್ರದೇಶಗಳ ಹೊರತಾಗಿ ಇತರ ಯಾವುದೇ ಪ್ರದೇಶದಲ್ಲಿರುವ ಶಾಲೆಯಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಯಾಗಿರಬೇಕು, **ಮತ್ತು**

ಇ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು ಕರ್ನಾಟಕ ಅಧಿಸೂಚನೆ ಸಂಖ್ಯೆ. ಸಿಆಸುಇ:08:ಸೇನೆನಿ:2001, ದಿನಾಂಕ 13.02.2001ರ ಪ್ರಕಾರ ಮೇಲೆ ಪರಿಭಾಷಿಸಿದಂತೆ ತರಗತಿ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರುವವರು ಸರ್ಕಾರಿ ಆದೇಶ ಸಂಖ್ಯೆ. ಸಿಆಸುಇ/96/ಸೇನೆನಿ/2005, ದಿನಾಂಕ 10.08.2005ರಲ್ಲಿ ನಿಗಧಿಪಡಿಸಿದ ನಮೂನೆ–2ರ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಮಾಡಿಸಿ ಮತ್ತು ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಸಲ್ಲಿಸುವುದು. (ನಮೂನೆ–1 (ನಾನ್–ಕ್ರೀಮಿ ಲೇಯರ್) ಮತ್ತು ನಮೂನೆ–2 ಇವುಗಳು ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ಅಭ್ಯರ್ಥಿಗಳಿಗೆ ಕಡ್ಡಾಯವಾಗಿರುತ್ತದೆ).

ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಸೇರಿದ ಅಭ್ಯರ್ಥಿಗಳು ನಮೂನೆ–2ರಲ್ಲಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದು ಸಲ್ಲಿಸುವುದು.

ಸೂಚನೆ: ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

10. ಯೋಜನಾ ನಿರಾಶ್ರಿತರು:

ಯೋಜನಾ ನಿರಾಶ್ರಿತ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ ಸಂಖ್ಯೆ. ಡಿಪಿಎಆರ್:23:ಎಸ್ಆರ್ಆರ್:99, ದಿನಾಂಕ 23.11.2000ರನ್ವಯ ಸರ್ಕಾರದ ಸುತ್ತೋಲೆ ಸಂಖ್ಯೆ. ಸಿಆಸುಇ:44:ಸೇನೆನಿ:2001, ದಿನಾಂಕ 27.07.2001ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

11. ಕನ್ನಡ ಮಾಧ್ಯಮ:

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1 ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

12. ಪ್ರಮುಖವಾದ ಸೂಚನೆಗಳು :

ಅಭ್ಯರ್ಥಿಗಳು ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಕೂಡದು. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ದಾಖಲಾತಿಗಳನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಿಂಧುವಾಗಿರುವಂತೆ ಪಡೆದಿಟ್ಟುಕೊಂಡಿದ್ದು, ಸಮಿತಿಯು ಸೂಚಿಸಿದಾಗ ಹಾಜರು ಪಡಿಸತಕ್ಕದ್ದು.

1) ಪದವಿ ಪರೀಕ್ಷೆಯ ಅಂಕಪಟ್ಟಿ/ಪದವಿ ಪ್ರಮಾಣ ಪತ್ರ.
2) ಹುಟ್ಟಿದ ದಿನಾಂಕದ ಪ್ರಮಾಣ ಪತ್ರ (ಎಸ್.ಎಸ್.ಎಲ್.ಸಿ ಪ್ರಮಾಣ ಪತ್ರ)
3) ಸರ್ಕಾರಿ ಇಲಾಖೆಯಲ್ಲಿ/ರಾಜ್ಯಸರ್ಕಾರದ/ಕೇಂದ್ರ ಸರ್ಕಾರದ/ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ/ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ ಅಂತಹವರು ಇಲಾಖಾ ವತಿಯಿಂದ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಚ್ಛಾ ಅನುಮತಿ ಪತ್ರ.
4) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.

5) ಯೋಜನಾ ನಿರಾಶ್ರಿತ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರ.
6) ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ).
7) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು.
8) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿಟ್ಟು ಕೊಂಡಿರತಕ್ಕದ್ದು.
9) ಸೇವಾನಿರತ ಅಭ್ಯರ್ಥಿಗಳು ತಮ್ಮ ಸದ್ಯದ ಹುದ್ದೆಗೆ ಸಂಬಂಧಿಸಿದಂತೆ ಪೊಲೀಸ್ ಕಮೀಷನರ್ / ಪೊಲೀಸ್ ಅಧೀಕ್ಷಕರು / ಘಟಕಾಧಿಕಾರಿಗಳಿಂದ ಅರ್ಜಿಯ ಅನುಬಂಧ 'ಎ' ರಲ್ಲಿ ನಿಗದಿಪಡಿಸಿರುವಂತೆ ಪ್ರಮಾಣಪತ್ರ ಪಡೆದಿಟ್ಟುಕೊಂಡಿರತಕ್ಕದ್ದು.
10) ಸೇವಾನಿರತ ಅಭ್ಯರ್ಥಿಗಳು ತಮ್ಮ ಸದ್ಯದ ಹುದ್ದೆಗೆ ಸಂಬಂಧಿಸಿದಂತೆ ಅರ್ಜಿಯ ಅನುಬಂಧ 'ಬಿ' ರಲ್ಲಿ ನಿಗದಿಪಡಿಸಿರುವಂತೆ ಘೋಷಣಾ ಪತ್ರ ಪಡೆದಿಟ್ಟುಕೊಂಡಿರತಕ್ಕದ್ದು.

ಟಿಪ್ಪಣಿ : ಅರ್ಜಿಯನ್ನು ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದ ನಂತರ ಮಾಡಿಸುವ ಮೀಸಲಾತಿ ಪ್ರಮಾಣ ಪತ್ರಗಳನ್ನು ಯಾವುದೇ ಹಂತದಲ್ಲಿ ಗಣನೆಗೆ ತೆಗೆದುಕೊಳ್ಳುವುದಿಲ್ಲ.

13. ಅಭ್ಯರ್ಥಿಗಳು ಮೀಸಲಾತಿಗಳನ್ನು ಕೋರಿದಲ್ಲಿ ಅರ್ಜಿಯಲ್ಲಿ ಮೀಸಲಾತಿಗಾಗಿ ನಿರ್ದಿಷ್ಟಪಡಿಸಿದ ವೃತ್ತಗಳನ್ನು ಕಪ್ಪು / ನೀಲಿ ಬಣ್ಣದ ಬಾಲ್ ಪಾಯಿಂಟ್ ಪೆನ್ನಿನಿಂದ ತುಂಬತಕ್ಕದ್ದು. ಮೀಸಲಾತಿಯ ವೃತ್ತಗಳಲ್ಲಿ ಖಾಲಿ ಬಿಟ್ಟಿರುವ ಅಭ್ಯರ್ಥಿಗಳ ಮೀಸಲಾತಿಯನ್ನು ಸಾಮಾನ್ಯ ಅರ್ಹತೆಯೆಂದು ಪರಿಗಣಿಸಲಾಗುವುದು. ನಿರ್ದಿಷ್ಟವಾದ ವೃತ್ತಗಳಲ್ಲಿ ಮೀಸಲಾತಿಯನ್ನು ನಮೂದಿಸದೆ ಬೇರೆ ಕಡೆ ಗುರುತು (ಶೇಡ್) ಮಾಡಿದ್ದಲ್ಲಿ ಅಂತಹವುಗಳನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.

ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ವಿಳಾಸ ಬದಲಾವಣೆಯಾಗಿದ್ದಲ್ಲಿ ತಕ್ಷಣದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ನೇಮಕಾತಿ ಸಮಿತಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ನೇಮಕಾತಿ ಸಮಿತಿಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ನೇಮಕಾತಿ ಸಮಿತಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

ಅಭ್ಯರ್ಥಿಗಳು ನೇಮಕಾತಿ ಸಮಿತಿಯೊಡನೆ ಸಂಪರ್ಕಿಸಬೇಕಾದ ಸಂದರ್ಭದಲ್ಲಿ ಅವರ ಮನವಿ ಈ ಕೆಳಕಂಡ ಮಾಹಿತಿಗಳನ್ನು ಒಳಗೊಂಡಿರಬೇಕು.

1) ಅರ್ಜಿಯ ನಕಲು ಪ್ರತಿ
2) ಅರ್ಜಿ ಸಲ್ಲಿಸಿದ ಬಗ್ಗೆ ನೇಮಕಾತಿ ಸಮಿತಿಯ ಕಛೇರಿಯವರು ನೀಡಿದ ಅರ್ಜಿ ಸ್ವೀಕೃತಿ ಪತ್ರ ನಕಲು ಪ್ರತಿ

14. ವಿಶೇಷ ಸೂಚನೆಗಳು :

1) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ (Xerox) ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.
2) ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗಧಿತ ವೃತ್ತವನ್ನು (Circle) ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣ ಪ್ರಮಾಣ ಪತ್ರವನ್ನು (No Objection Certificate) ಸಂಬಂಧಿತ ಇಲಾಖಾ ಮುಖ್ಯಸ್ಥರಿಂದ ಪಡೆದಿಟ್ಟುಕೊಂಡಿದ್ದು ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.
3) **ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಬಾರದೆಂದು ಸಲಹೆ ನೀಡಲಾಗಿದೆ. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸುವ ಬದಲು ಒಂದೇ ಅರ್ಜಿಯನ್ನು ಪಡೆದು ಅತೀ ಜಾಗರೂಕತೆಯಿಂದ ಮತ್ತು ಬಹಳ ಎಚ್ಚರಿಕೆಯಿಂದ ಭರ್ತಿ ಮಾಡತಕ್ಕದ್ದು, ಏಕೆಂದರೆ ಒಂದಕ್ಕಿಂತ ಹೆಚ್ಚು ನೋಂದಣಿ ಸಂಖ್ಯೆಯಲ್ಲಿ ಪರೀಕ್ಷೆಗೆ ಹಾಜರಾಗಿದ್ದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ ಅಂತಹ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು. ಸಂಕ್ಷಿಪ್ತವಾಗಿ ತಿಳಿಸುವುದೆಂದರೆ ಒಬ್ಬ ಅಭ್ಯರ್ಥಿಯು ಒಂದು ನೋಂದಣಿ ಸಂಖ್ಯೆಗಿಂತ ಹೆಚ್ಚು ನೋಂದಣಿ ಸಂಖ್ಯೆಯನ್ನು ಪರೀಕ್ಷೆಯ ಯಾವುದೇ ಹಂತದಲ್ಲಿ ಬಳಸುವುದನ್ನು ನಿಖರವಾಗಿ ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಒಂದೇ ಹೆಸರಿನಲ್ಲಿ ಸಲ್ಲಿಸಿ ಬೇರೆ ಬೇರೆ ಪೋಟೋಗಳನ್ನು ಹಚ್ಚಿ, ಸಹಿಗಳನ್ನು**

ಮಾಡಿ ಪರೀಕ್ಷೆಗೆ ಹಾಜರಾಗಿದ್ದು ಕಂಡುಬಂದಲ್ಲಿ ಅಂತಹವರ ಅರ್ಜಿಗಳನ್ನು ತಿರಸ್ಕರಿಸುವುದಲ್ಲದೇ ಅವರ ಮೇಲೆ ಕಾನೂನಿನ ರೀತ್ಯಾ ಕ್ರಮವನ್ನು ಕೈಗೊಳ್ಳಲಾಗುವುದು. ಈ ವಿಚಾರದಲ್ಲಿ ನೇಮಕಾತಿ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.

4) ಅರ್ಹ ಅಭ್ಯರ್ಥಿಗಳು ಮೂಲ ದಾಖಲಾತಿಗಳ ಪರಿಶೀಲನಾ ಸಂದರ್ಭದಲ್ಲಿ (ಅಂದರೆ ಮೌಖಿಕ ಪರೀಕ್ಷೆಯ ಸಂದರ್ಭದಲ್ಲಿ) ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿಗಳಿಗೆ ಪೂರಕವಾಗಿ ಸದರಿ ದಾಖಲಾತಿ / ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು, ತಪ್ಪಿದ್ದಲ್ಲಿ ಅಂತಹ ಮೀಸಲಾತಿಯನ್ನು ರದ್ದುಪಡಿಸಲಾಗುವುದು. **ಅರ್ಜಿಯೊಂದಿಗೆ ಯಾವುದೇ ಮೂಲ ಪ್ರಮಾಣ ಪತ್ರಗಳನ್ನು ಹಾಗೂ ಪ್ರತಿಗಳನ್ನು ಸಲ್ಲಿಸುವ ಅಗತ್ಯವಿರುವುದಿಲ್ಲ**. ಒಂದು ವೇಳೆ ಸಲ್ಲಿಸಿ, ಅವು ಕಳೆದು ಹೋದರೆ ನೇಮಕಾತಿ ಸಮಿತಿಯು ಜವಾಬ್ದಾರಿಯಾಗುವುದಿಲ್ಲ.

5) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಅಂದರೆ 27.09.2008ಕ್ಕೆ ಮೊದಲು ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆ (ಪದವಿ)ಯನ್ನು ಹೊಂದಿರಬೇಕು.

6) ಅಭ್ಯರ್ಥಿಗಳು ನೇಮಕಾತಿ ಸಮಿತಿಯು ನಿಗಧಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಅಭ್ಯರ್ಥಿಗಳು ಸ್ವಂತ ಕೈಬರಹದಿಂದ ದುಂಡಗೆ ಎಲ್ಲಾ ಅಂಕಣಗಳನ್ನು ಸ್ಪಷ್ಟವಾಗಿ ಭರ್ತಿ ಮಾಡತಕ್ಕದ್ದು. ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸುವ, ಶುಲ್ಕ ಪಾವತಿಸದೆ ಸಲ್ಲಿಸಲ್ಪಡುವ, ಅಪೂರ್ಣವಾಗಿರುವ ಮತ್ತು ಸಹಿ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

7) ಅರ್ಜಿಯನ್ನು ಯಾವುದೇ ಸಂದರ್ಭದಲ್ಲಿ ಮಡಚಬಾರದು, ಪಿನ್, ಸ್ಟ್ಯಾಪಲ್ ಮತ್ತು ರಂಧ್ರ ಮಾಡಬಾರದು.

8) **ಅಭ್ಯರ್ಥಿಗಳು ಓ.ಎಂ.ಆರ್. ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ / ವಿವರಗಳ ಆಧಾರದ ಮೇರೆಗೆ ಅವರ ಅರ್ಹತೆಯನ್ನು ಪರಿಗಣಿಸುವುದರಿಂದ ಮತ್ತು ಅಭ್ಯರ್ಥಿಗಳು ಸಲ್ಲಿಸುವ ಅರ್ಜಿಗಳನ್ನು ಸ್ಕ್ಯಾನಿಂಗ್ ಮಾಡಿಸಿ ಗಣಕ ಯಂತ್ರದ ಮುಖೇನ ಅರ್ಹತಾ ಪಟ್ಟಿಯನ್ನು ಸಿದ್ದಪಡಿಸುವುದರಿಂದ, ಅಭ್ಯರ್ಥಿಗಳು ಅರ್ಜಿಗಳನ್ನು ತುಂಬುವಾಗ ಯಾವುದೇ ತಪ್ಪು ಅಥವಾ ಸುಳ್ಳು ಮಾಹಿತಿ ನೀಡಬಾರದು. ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅದಕ್ಕೆ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.**

9) **ಚಿತ್ತು ಅಥವಾ ಹೊಡೆದುಹಾಕುವುದು ಕೂಡ ಮಾಡಬಾರದು. ಹಾಗೇನಾದರೂ ಚಿತ್ತು ಆದಲ್ಲಿ ಹೊಡೆದು ಹಾಕಿದಲ್ಲಿ ಅಥವಾ ಅರ್ಜಿಯನ್ನು ವಿರೂಪಗೊಳಿಸಿದಲ್ಲಿ ಮತ್ತೊಂದು ಅರ್ಜಿ ಪಡೆದು ತುಂಬಿ ಸಲ್ಲಿಸುವುದು ಅವಶ್ಯಕ. ಖರೀದಿಸಿದ ಓ.ಎಂ.ಆರ್. ಅರ್ಜಿಯನ್ನು ಜೆರಾಕ್ಸ್ ಪ್ರತಿ ಮಾಡಿಸಿ, ಮೊದಲು ಜೆರಾಕ್ಸ್ ಪ್ರತಿಯಲ್ಲಿ ಭರ್ತಿಮಾಡಿ, ಅರ್ಜಿಯಲ್ಲಿನ ವಿವರಗಳು ಸರಿಯಾಗಿವೆಯೇ ಎಂದು ಮನಗಂಡು ಆ ನಂತರ ಮೂಲ ಅರ್ಜಿಯನ್ನು ಭರ್ತಿ ಮಾಡುವುದು ಸೂಕ್ತ.**

10) ಒಂದು ವೇಳೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನದಂದು ಅರ್ಜಿಗಳನ್ನು ಸ್ವೀಕರಿಸಲಾಗುವುದು. ಆದರೆ ವಯೋಮಿತಿ ಹಾಗೂ ಕನಿಷ್ಠ ಶೈಕ್ಷಣಿಕ ವಿದ್ಯಾರ್ಹತೆಯ ಪರಿಗಣನೆಗೆ ದಿನಾಂಕ: 27.09.2008 ಮಾತ್ರ ಅನ್ವಯವಾಗುತ್ತದೆ.

11) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಸದರಿ ಅರ್ಜಿ ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

12) ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡುವ ಮಾಹಿತಿಗಳು ಸರಿ ಇದೆ ಎಂದು ಭಾವಿಸಿ ಅವರುಗಳು ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯಲು ಅರ್ಹರೆ ಎಂಬುದನ್ನು ಸ್ಕ್ಯಾನಿಂಗ್ ಮುಖಾಂತರ ಪರಿಗಣಿಸಿ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ರವಾನೆ ಮಾಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೂ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ, ಶುಲ್ಕ ಪಾವತಿಸದ, ಅಭ್ಯರ್ಥಿಯ ಸಹಿ ಇಲ್ಲದ ಮತ್ತು ಹೆಬ್ಬೆಟ್ಟಿನ ಗುರುತಿಲ್ಲದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

13) ಪರೀಕ್ಷೆಗೆ ಪ್ರವೇಶವು ಸಂಪೂರ್ಣವಾಗಿ ತಾತ್ಕಾಲಿಕವಾಗಿರುತ್ತದೆ. ಪ್ರವೇಶ ಪತ್ರ ನೀಡಿದ ಮಾತ್ರಕ್ಕೆ ನೇಮಕಾತಿ ಸಮಿತಿಯು ನಿಮ್ಮ ಅಭ್ಯರ್ಥಿತನವನ್ನು ಅಂಗೀಕರಿಸಿದೆ ಎಂದು ಭಾವಿಸತಕ್ಕದ್ದಲ್ಲ.

14) ಪ್ರಶ್ನೆ ಪತ್ರಿಕೆಯಲ್ಲಿನ ಯಾವುದಾದರು ಪ್ರಶ್ನೆಯ ಬಗ್ಗೆ ಆಕ್ಷೇಪಣೆ ಇದ್ದಲ್ಲಿ. ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಆಯಾ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಅವರ ಹೆಸರು, ವಿಳಾಸ, ನೋಂದಣಿ ಸಂಖ್ಯೆ. ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ನೇಮಕಾತಿ ಸಮಿತಿಗೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ.

15) **ಉತ್ತರ ಪತ್ರಿಕೆಯನ್ನು ಸ್ಕ್ಯಾನಿಂಗ್ ಮಾಡಿಸಿ ಗಣಕ ಯಂತ್ರದ ಮುಖೇನ ಅರ್ಹತಾ ಪಟ್ಟಿಯನ್ನು ಸಿದ್ದಪಡಿಸುವುದರಿಂದ ಅಭ್ಯರ್ಥಿಗಳು ಉತ್ತರ ಪತ್ರಿಕೆಯ ಮಾಹಿತಿಯನ್ನು ಭರ್ತಿ ಮಾಡುವ ಸಲುವಾಗಿ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಗೆ ತಪ್ಪದೇ ಹಾಜರಾಗತಕ್ಕದ್ದು. ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಕೆಲವು ಮಾರ್ಗ ಸೂಚನೆಗಳನ್ನು ನೀಡುತ್ತಾರೆ.**

16) ಕರ್ನಾಟಕ ರಾಜ್ಯದ, ಕೇಂದ್ರ ಸರ್ಕಾರದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾ ಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

17) ಸುಳ್ಳು ಮಾಹಿತಿ ಅಥವಾ ನಕಲಿ ಪ್ರಮಾಣ ಪತ್ರ / ದಾಖಲಾತಿಗಳನ್ನು ಸಲ್ಲಿಸಿ ನೌಕರಿ ಪಡೆಯುವುದು ಯಾವುದೇ ಸಂದರ್ಭದಲ್ಲಿ ಕಂಡು ಬಂದಲ್ಲಿ, ಅದೇ ಹಂತದಲ್ಲಿ ಅವರನ್ನು ಯಾವುದೇ ಮುನ್ಸೂಚನೆ ನೀಡದೆ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸುವುದರ ಜೊತೆಗೆ ಅವರ ವಿರುದ್ದ ಕಾನೂನು ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು.

18) ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ವಿನಿಯಮಗಳಿಗೆ (Rules & Regulations) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

19) ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮಗಳು 1977ರಲ್ಲಿ ನಿರ್ದಿಷ್ಟಗೊಳಿಸಿರುವಂತೆ ಆಯ್ಕೆಯಾದ ಅಭ್ಯರ್ಥಿಯು ನೇಮಕಾತಿ ಆದೇಶ ನೀಡುವ ಮುನ್ನ ಪೂರ್ಣ ಪ್ರಮಾಣದ ವೈದ್ಯಕೀಯ ಪರೀಕ್ಷೆಗೆ ಒಳಗಾಗಬೇಕಾಗುತ್ತದೆ. ವೈದ್ಯಕೀಯ ಪರೀಕ್ಷೆಯಲ್ಲಿ ವಿಫಲರಾದ ಅಭ್ಯರ್ಥಿಗಳನ್ನು ಅನರ್ಹ ಗೊಳಿಸಲಾಗುವುದು.

20) **ದುರ್ನಡತೆ** : ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂದು, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಅಥವಾ ಒಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾಗಿರುವ ವಿಷಯವನ್ನು ಮರೆಮಾಚಿ ಮತ್ತೊಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗೆ ಹಾಜರಾದರೆ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ನೇಮಕಾತಿ ಸಮಿತಿ ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

21) ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in/cresip08 ಅಥವಾ www.karnatakastatepolice.org ನಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ.

ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್
ತರಬೇತಿ ಮತ್ತು ನೇಮಕಾತಿ ಹಾಗೂ
ಸದಸ್ಯ ಕಾರ್ಯದರ್ಶಿ,
ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ನೇಮಕಾತಿ ಸಮಿತಿ,
ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು–1.

(ಪ.ಜಾ/ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಡಿ

(ನಿಯಮ 3ಎ (2) (3) ನೋಡಿ)

ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ /ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ

ಪ್ರಮಾಣ ಪತ್ರ

.... ರಾಜ್ಯದ / ಕೇಂದ್ರಾಡಳಿತ ಪ್ರದೇಶದ * .... ಜಿಲ್ಲೆಯ/ ವಿಭಾಗದ .... ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ .... ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ .... ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

* ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ).

* ಸಂವಿಧಾನ
* ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
* ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿದಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
* ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962
* ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
* ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ 1988
* ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ / ಶ್ರೀಮತಿ / ಕುಮಾರಿ* .... ಮತ್ತು / ಅಥವಾ ಅವನ* / ಅವಳ* ಕುಟುಂಬವು .... ರಾಜ್ಯ / ಕೇಂದ್ರಾಡಳಿತ ಪ್ರದೇಶದ .... ಜಿಲ್ಲಾ / ವಿಭಾಗದ .... ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ ....

ತಹಶೀಲ್ದಾರರು ....

ಸ್ಥಳ : ಪದನಾಮ

ದಿನಾಂಕ : ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ*

*ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

ಸೂಚನೆ : ಇಲ್ಲಿ ಉಪಯೋಗಿಸಿದ "ಸಾಮಾನ್ಯ ನಿವಾಸಿಗಳೂ" ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ. ಬಿಸಿ 12028 / 2/ 76–ಎಸ್‌ಸಿಟಿ–1 ಗೃಹ ಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ

13.02.74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ 5ನೇ ಆಗಸ್ಟ್ 1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

(ಪ್ರವರ್ಗ – 1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಇ

(ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗೆ ನೀಡುವ ಪ್ರಮಾಣ ಪತ್ರ

.... ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ .... ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ .... ಇವರು ಹಿಂದುಳಿದ ವರ್ಗಗಳ (ಪ್ರವರ್ಗ) .... ಜಾತಿಯ .... ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು

ದಿನಾಂಕ : .... ತಾಲ್ಲೂಕು

ಕಛೇರಿಯ ಮೊಹರು

(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಎಫ್

(ನಿಯಮ 3ಎ (2) (3)ನ್ನು ನೋಡಿ)

ಹಿಂದುಳಿದ ವರ್ಗಗಳಿಗೆ (2ಎ, 2ಬಿ, 3ಎ, 3ಬಿ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ

.... ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ .... ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ .... ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು/ಪತ್ನಿ/ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರಿಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು ;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ/ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು ;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ. 6000–12000/– ಪ್ರಾರಂಬಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು

ಅಥವಾ

ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯ ಆದಾಯವು ಎರಡು ಲಕ್ಷ ಮೀರುವುದಿಲ್ಲವೆಂದು ;

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರಲ್ಲಿ ನಿಗದಿಪಡಿಸಿರುವಂತೆ ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ/ಆಕೆಯ ತಂದೆ ತಾಯಿ/ಪೋಷಕ/ಪತ್ನಿ/ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ

ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣಿಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಶ್ರೀ/ಶ್ರೀಮತಿ/ಕುಮಾರಿ .... ಇವರು .... ಜಾತಿಗೆ .... ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ .... (2ಎ, 2ಬಿ, 3ಎ, 3ಬಿ) ಸೇರಿರುತ್ತಾರೆ.

ಸ್ಥಳ : ತಹಶೀಲ್ದಾರರು

ದಿನಾಂಕ : .... ತಾಲ್ಲೂಕು

ಕಛೇರಿಯ ಮೊಹರು

ನಮೂನೆ–1

ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:

ತಹಶೀಲ್ದಾರರು,

.... ತಾಲ್ಲೂಕು,

.... ಜಿಲ್ಲೆ.

ಮಾನ್ಯರೆ,

ಶ್ರೀ / ಶ್ರೀಮತಿ .... ಎಂಬುವವರ ಮಗ/ಮಗಳು/ಪತಿ/ಪತ್ನಿ............................. ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ :

1) ವೇತನ ಶ್ರೇಣಿ

2) ಜಮೀನಿನ ವಿವರ

3) ಇತರ ಮೂಲಗಳು

9. ಆದಾಯ ತೆರಿಗೆ ಪಾವತಿದಾರರೇ ?

10. ಸಂಪತ್ತು ತೆರಿಗೆ ಪಾವತಿದಾರರೇ ?

11. ಮಾರಾಟ ತೆರಿಗೆ ಪಾವತಿದಾರರೇ ?

ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ/ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ : ತಮ್ಮ ವಿಧೇಯ

ದಿನಾಂಕ : (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ : ತಂದೆ/ತಾಯಿ/ಪೋಷಕರ ಸಹಿ

ದಿನಾಂಕ : (ತಂದೆ/ತಾಯಿ ಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ.. ಎಂಬುವವರ ಮಗ/ಮಗಳು/ಪತಿ/ಪತ್ನಿ/ಶ್ರೀ/ಶ್ರೀಮತಿ/ಕುಮಾರಿ................................ ಎಂಬುವವರು ಕರ್ನಾಟಕ ರಾಜ್ಯದ .... ಜಿಲ್ಲೆಯ ವಿಭಾಗ .... ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ .... ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು

ದಿನಾಂಕ : .... ತಾಲ್ಲೂಕು

ಕಛೇರಿಯ ಮೊಹರು

ಸೂಚನೆ–1: ಇದರಲ್ಲಿ ಉಪಯೋಗಿಸಲಾದ **"**ಸಾಮಾನ್ಯ ನಿವಾಸಿ**"** ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

ಸೂಚನೆ–2: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

ನಮೂನೆ – 2
ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ / ಶ್ರೀಮತಿ .... ರವರ ಮಗ/ಮಗಳು/ಪತ್ನಿ/ಶ್ರೀ/ಶ್ರೀಮತಿ/ಕುಮಾರಿ .... ಜಿಲ್ಲೆ .... ತಾಲ್ಲೂಕು .... ಗ್ರಾಮದಲ್ಲಿ .... ವಾಸವಾಗಿರುವ ಇವರು ಒಂದನೇ ತರಗತಿಯಿಂದ .... ತರಗತಿಯವರೆಗೆ .... ಜಿಲ್ಲೆ .... ತಾಲ್ಲೂಕು .... ಪಟ್ಟಣ .... ಶಾಲೆಯಲ್ಲಿ ವ್ಯಾಸಂಗ ಮಾಡಿ .... ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕದ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಸ್ಥಳ : ಮುಖ್ಯೋಪಾಧ್ಯಾಯರ ಸಹಿ
ದಿನಾಂಕ : ಮತ್ತು ಸಂಸ್ಥೆಯ ಪೂರ್ಣ ವಿಳಾಸವುಳ್ಳ ಮೊಹರು
ಮೇಲುರುಜು
ಕ್ಷೇತ್ರ ಶಿಕ್ಷಣಾಧಿಕಾರಿ

ಸರ್ಕಾರದ ಸುತ್ತೋಲೆ ಸಂಖ್ಯೆ : ಸಿಆಸುಇ 44 ಸೆನೆನಿ 2001 ದಿನಾಂಕ 27–07–2001

ನಮೂನೆ–3
ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ

ಶ್ರೀ/ಶ್ರೀಮತಿ .... ಎಂಬುವವರ ಮಗ/ಮಗಳು/ಪತ್ನಿ/ಶ್ರೀಮತಿ/ ಕುಮಾರಿ .... ಜಿಲ್ಲೆ .... ತಾಲ್ಲೂಕು .... ಗ್ರಾಮದಲ್ಲಿ ವಾಸವಾಗಿರುವ ಇವರು : ಇವರ ಕುಟುಂಬದವರ ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು .... ಯೋಜನೆಗಾಗಿ .... ಇಸವಿಯಂದು ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಿದೆ :–

(i) ** ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು.
(ii) ** ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ : ಯೋಜನೆಯಿಂದ ತಾವು ವಾಸಿಸುವ ಮನೆ :
(iii) ** ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ :
(iv) ** ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ಸ್ಥಳ : ಸಹಿ/– ತಹಶೀಲ್ದಾರರು
ದಿನಾಂಕ : .... ತಾಲ್ಲೂಕು
ಕಛೇರಿಯ ಮೊಹರು

(** ಅನ್ವಯವಾಗುವ ಐಟಂನ್ನು ಮಾತ್ರ ಪ್ರಮಾಣ ಪತ್ರದಲ್ಲಿ ನಮೂದಿಸತಕ್ಕದ್ದು.)

ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ / ಶ್ರೀಮತಿ .... ರವರ ಮಗ/ಮಗಳು/ಪತ್ನಿ/ಶ್ರೀಮತಿ/ ಕುಮಾರಿ .... ಜಿಲ್ಲೆ .... ತಾಲ್ಲೂಕು .... ಗ್ರಾಮದಲ್ಲಿ .... ವಾಸವಾಗಿರುವ ಇವರು .... ನೇ ತರಗತಿಯಿಂದ .... ನೇ ತರಗತಿಯವರೆಗೆ .... ಶೈಕ್ಷಣಿಕ ವರ್ಷದಿಂದ .... ಶೈಕ್ಷಣಿಕ ವರ್ಷದವರೆಗೆ.............................. ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ಮುಖ್ಯೋಪಾಧ್ಯಾಯರ ಸಹಿ
ದಿನಾಂಕ : ಮತ್ತು ಸಂಸ್ಥೆಯ ಪೂರ್ಣ ವಿಳಾಸವುಳ್ಳ ಮೊಹರು
ಮೇಲು ರುಜು
ಪಿ.ಆರ್. 486 ಕ್ಷೇತ್ರ ಶಿಕ್ಷಣಾಧಿಕಾರಿ
ಕಛೇರಿಯ ಮೊಹರು

ಸಹಕಾರ ಇಲಾಖೆ

ರಾಜ್ಯ ಟೆಂಡರ್ ಬುಲೆಟಿನ್ ಅಧಿಕಾರಿ ಕಛೇರಿ ಕೊಠಡಿ ಸಂಖ್ಯೆ:621, 6ನೇ ಮಹಡಿ ಬಹುಮಹಡಿ ಕಟ್ಟಡ, ಬೆಂಗಳೂರು

ಸಂಖ್ಯೆ: ಸಇ 96 ಎಂಆರ್‌ಇ 2008, ದಿನಾಂಕ: 27ನೇ ಆಗಸ್ಟ್ 2008

ಪರಿಷ್ಕೃತ ಟೆಂಡರ್ ಬುಲೆಟಿನ್

ಹೊನ್ನಾಳಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ಈ ಹಿಂದೆ ಇದೇ ಸಮಸಂಖ್ಯೆಯ ದಿನಾಂಕ:08.07.2008 ರಂದು ಪ್ರಕಟಿಸಿದ ಟೆಂಡರ್ ಬುಲೆಟಿನ್‌ನ್ನು ಪರಿಷ್ಕರಿಸಿ, ಈ ಕೆಳಕಂಡ ಅಭಿವೃದ್ಧಿ ಕಾಮಗಾರಿಗಳಿಗಾಗಿ ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿಸಲ್ಪಟ್ಟ ಅರ್ಹ ಗುತ್ತಿಗೆದಾರರಿಂದ ಇ–ಟೆಂಡರ್ ವೆಬ್‌ಸೈಟ್ ಸಂಖ್ಯೆ: http://www.tendervizard 1.com/KSAMB ನಲ್ಲಿ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ವಿವರಗಳು ಈ ಕೆಳಗಿನಂತೆ ಇರುತ್ತದೆ;

ಕ್ರ. ಸಂ.	ಕಾಮಗಾರಿಯ ವಿವರ	ಟೆಂಡರ್ ಮೊಬಲಗು (ಅಂದಾಜು ರೂ. ಲಕ್ಷಗಳಲ್ಲಿ)	ಇ.ಎಂ.ಡಿ. ಮೊಬಲಗು (ಶೇಕಡ 1 ರಂತೆ) (ರೂ.ಗಳಲ್ಲಿ)	ಕೆಲಸ ಪೂರೈಸಲು ನಿಗದಿಪಡಿಸಿದ ಅವಧಿ (ಮಳೆಗಾಲ ಹೊರತುಪಡಿಸಿ)	ಅರ್ಹ ಗುತ್ತಿಗೆದಾರರ ದರ್ಜೆ	ಟೆಂಡರ್ ಫಾರಂ ಬೆಲೆ ತೆರಿಗೆ ಸೇರಿ ರೂ. ಗಳಲ್ಲಿ
1.	ರಾಷ್ಟ್ರೀಯ ತೋಟಗಾರಿಕೆ ಮಿಷನ್ ಸಹಾಯಧನ ಯೋಜನೆಯಡಿಯಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಹೊನ್ನಾಳಿ ವ್ಯಾಪ್ತಿಯ ನ್ಯಾಮತಿ ಉಪ ಮಾರುಕಟ್ಟೆ ಇಲ್ಲಿ ಮಾರುಕಟ್ಟೆ ಮೂಲ ಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದು.	112.68	1,13,000	6 ತಿಂಗಳು	1ನೇ ದರ್ಜೆ ಮತ್ತು ಮೇಲ್ಪಟ್ಟು	ರೂ.25000/–

1. ಟೆಂಡರ್ ಫಾರಂಗಳಿಗೆ ಅರ್ಜಿ ಸಲ್ಲಿಸುವ ದಿನಾಂಕ : 08/09/2008 ಸಾಯಂಕಾಲ 5.30 ಗಂಟೆವರೆಗೆ
2. ಖಾಲಿ ಟೆಂಡರ್ ಫಾರಂಗಳನ್ನು ವಿತರಿಸುವ ದಿನಾಂಕ : 15/09/2008 ಮಧ್ಯಾಹ್ನ 5.00 ಗಂಟೆವರೆಗೆ
3. ಭರ್ತಿ ಮಾಡಿದ ಟೆಂಡರ್ ಗಳನ್ನು ಸ್ವೀಕರಿಸುವ ದಿನಾಂಕ : 22/09/2008 ಸಂಜೆ 4.00 ಗಂಟೆವರೆಗೆ
4. ಟೆಕ್ನಿಕಲ್ ಬಿಡ್ ತೆರೆಯುವ ದಿನಾಂಕ : 23/09/2008 ಸಂಜೆ 5.00 ಗಂಟೆವರೆಗೆ
5. ಫೈನಾನ್ಸಿಯಲ್ ಬಿಡ್ ತೆರೆಯುವ ದಿನಾಂಕ : 29/09/2008 ಬೆಳಿಗ್ಗೆ 10.30 ಗಂಟೆಗೆ

- ಮೇಲ್ಕಂಡ ದಿನಾಂಕಗಳಲ್ಲಿ ಸರ್ಕಾರಿ ರಜೆ ದಿನಗಳಾದಲ್ಲಿ ಮುಂದಿನ ದಿನವನ್ನು ಪರಿಗಣಿಸತಕ್ಕದ್ದು.
- ಹೆಚ್ಚಿನ ಮಾಹಿತಿಗಾಗಿ www.tenderwizard1.com/KSAMB ಈ ವೆಬ್ ಸೈಟ್‌ನಲ್ಲಿ ಸಂಪರ್ಕಿಸಿ ವಿವರಗಳನ್ನು ಪಡೆಯಬಹುದು.

ಈ ಟೆಂಡರ್ ಪ್ರಕ್ರಿಯೆಯಲ್ಲಿ ಯಾವುದಾದರೂ ತಿದ್ದುಪಡಿಗಳಿದ್ದರೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

ಟೆಂಡರ್‌ಗೆ ಸಂಬಂಧಿಸಿದಂತೆ, ಸಾಮಾನ್ಯ ಷರತ್ತುಗಳು (ಅರ್ಹತಾ ಷರತ್ತುಗಳು) ಮತ್ತು ನಿಬಂಧನೆಗಳನ್ನು ಟೆಂಡರ್ ಫಾರಂನೊಂದಿಗೆ ಪಡೆಯಬಹುದು.

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಪ್ರಕರಣ 8 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಮೇಲೆ ಹೇಳಿದ ಟೆಂಡರ್‌ನ ವಿವರಗಳನ್ನು ಪ್ರಕಟಿಸಲಾಗಿದೆ.

ಫೈರೋಜಾ ಖಾನಂ

ಪಿ.ಆರ್. 479

ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ

ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ

ಕಾರ್ಯನಿರ್ವಾಹಕ ಇಂಜಿನಿಯರರ ಕಛೇರಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಮಂಗಳೂರು ವಿಭಾಗ, ಮಂಗಳೂರು

ಟೆಂಡರ್ ಪ್ರಕಟಣೆ – ಸಮಯಾವಧಿ ವಿಸ್ತರಣೆ

ಸಂಖ್ಯೆ:8:ಜಿಎನ್ಎಲ್:ಟಿ.ಎನ್‌ಡಿ(4):2008–09:ಎಇ.1, ದಿನಾಂಕ: 21ನೇ ಆಗಸ್ಟ್ 2008

ಈ ಕೆಳಕಂಡ ಕಾಮಗಾರಿಗಳಿಗೆ ಪ್ರತ್ಯೇಕ ಮೊಹರಾದ ಟೆಂಡರುಗಳನ್ನು ದ್ವಿಪ್ರತಿಗಳಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿಸಲಾದ ಅರ್ಹ ದರ್ಜೆಯ ಗುತ್ತಿಗೆದಾರರಿಂದ ಕೆಲಸದ ಹೆಸರನ್ನು ಮೊಹರಾದ ಲಕೋಟೆಯ ಮೇಲೆ ನಮೂದಿಸಿದ ಕಾರ್ಯನಿರ್ವಾಹಕ ಇಂಜಿನಿಯರರು, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಮಂಗಳೂರು ವಿಭಾಗ, ಮಂಗಳೂರು ಇವರು ದಿನಾಂಕ: 16.9.2008ರಂದು ಸಂಜೆ:4.00 ಗಂಟೆಯವರೆಗೆ ಟೆಂಡರುಗಳನ್ನು ಸ್ವೀಕರಿಸುವರು.

ಖಾಲಿ ಟೆಂಡರು ಫಾರಂಗಳ ಅರ್ಜಿಗಳನ್ನು ನಿಗದಿಪಡಿಸಿದ ಬೆಲೆಯೊಂದಿಗೆ (ಇದನ್ನು ಹಿಂತಿರುಗಿಸುವುದಿಲ್ಲ) ಮತ್ತು ನಿಗದಿಪಡಿಸಿದ ಇ.ಎಂ.ಡಿಯೊಂದಿಗೆ ದಿನಾಂಕ: 15.9.2008ರ ವರೆಗೆ ಕೆಲಸದ ಎಲ್ಲಾ ದಿನಗಳಂದು ಕಛೇರಿ ವೇಳೆಯಲ್ಲಿ ಸ್ವೀಕರಿಸಲಾಗುವುದು. ಗುತ್ತಿಗೆದಾರರು ರಿಜಿಸ್ಟ್ರೇಷನ್ ಸರ್ಟಿಫೈಡ್ ಪ್ರತಿ ಹಾಗೂ ಈ ತರಹದ ಕಾಮಗಾರಿಗಳನ್ನು ಕೈಗೊಂಡ ಬಗ್ಗೆ ಅನುಭವ ಪತ್ರವನ್ನು ಸಲ್ಲಿಸತಕ್ಕದ್ದು. ಖಾಲಿ ಟೆಂಡರು ಫಾರಂಗಳನ್ನು ದಿನಾಂಕ: 15.9.2008ರ ಸಂಜೆ:5.30ರ ತನಕ ನೀಡಲಾಗುವುದು.

ಕ್ರ. ಸಂ.	ಕಾಮಗಾರಿಯ ಹೆಸರು	ಟೆಂಡರಿಗಿಟ್ಟ ಮೊತ್ತ (ರೂ.ಲಕ್ಷಗಳಲ್ಲಿ)	ಗುತ್ತಿಗೆದಾರರ ಅರ್ಹತೆ	ಇ.ಎಂ.ಡಿ ಠೇವಣಿ (ರೂ.ಗಳಲ್ಲಿ)	ಟೆಂಡರು ಅವಧಿ (ಮಳೆಗಾಲ ಹೊರತುಪಡಿಸಿ)	ಟೆಂಡರು ನಮೂನೆ	ಟೆಂಡರು ಫಾರಂ ಬೆಲೆ (ರೂ.ಗಳಲ್ಲಿ)
1	**ಲೆಕ್ಕ ಶೀರ್ಷಿಕೆ 8443 ಶಾಸಕರ ನಿಧಿ**						
	1. ಸುಳ್ಯ ತಾಲ್ಲೂಕು ಬೈತಡ್ಕ – ಮಂಡಕೋಲು ರಸ್ತೆಯ ಕಿ.ಮೀ. 1.40 ರಿಂದ 3.80 ವರೆಗೆ ಅಗಲಗೊಳಿಸಿ ಅಭಿವೃದ್ಧಿಪಡಿಸುವುದು.	3.00	ಮೂರನೇ ದರ್ಜೆ ಮತ್ತು ಮೇಲ್ಪಟ್ಟು	8000.00	2 ತಿಂಗಳು	ದರವಾರು	1100.00
2	**ಲೆಕ್ಕ ಶೀರ್ಷಿಕೆ 8443 ಠೇವಣಿ ಕಾಮಗಾರಿ** 1. ಮಂಗಳೂರಿನ ಜಿಲ್ಲಾಧಿಕಾರಿಯವರ ಕಛೇರಿ ಸಂಕೀರ್ಣದ ಆವರಣದಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ದ.ಕ. ಜಿಲ್ಲಾ ಕೇಂದ್ರ ಕಟ್ಟಡ ನಿರ್ಮಾಣ – ನೆಲ ಅಂತಸ್ತು ಒಂದನೇ ಹಂತ	4.75	ಮೂರನೇ ದರ್ಜೆ ಮತ್ತು ಮೇಲ್ಪಟ್ಟು	12000.00	6 ತಿಂಗಳು	ದರವಾರು	1100.00
	2. ಮಂಗಳೂರಿನ ಜಿಲ್ಲಾಧಿಕಾರಿಯವರ ಕಛೇರಿ ಸಂಕೀರ್ಣದ ಆವರಣದಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ದ.ಕ. ಜಿಲ್ಲಾ ಕೇಂದ್ರ ಕಟ್ಟಡ ನಿರ್ಮಾಣ – ನೆಲ ಅಂತಸ್ತು ಎರಡನೇ ಹಂತ	8.05	ಮೂರನೇ ದರ್ಜೆ ಮತ್ತು ಮೇಲ್ಪಟ್ಟು	16000.00	6 ತಿಂಗಳು	ದರವಾರು	1650.00

ಕ್ರ. ಸಂ.	ಕಾಮಗಾರಿಯ ಹೆಸರು	ಟೆಂಡರಿಗಿಟ್ಟ ಮೊತ್ತ (ರೂ.ಲಕ್ಷಗಳಲ್ಲಿ)	ಗುತ್ತಿಗೆದಾರರ ಅರ್ಹತೆ	ಇ.ಎಂ.ಡಿ ಠೇವಣಿ (ರೂ.ಗಳಲ್ಲಿ)	ಟೆಂಡರು ಅವಧಿ (ಮಳೆಗಾಲ ಹೊರತುಪಡಿಸಿ)	ಟೆಂಡರು ನಮೂನೆ	ಟೆಂಡರು ಫಾರಂ ಬೆಲೆ (ರೂ.ಗಳಲ್ಲಿ)
3.	**ಲೆಕ್ಕ ಶೀರ್ಷಿಕೆ 4059 ಪ್ರಾದೇಶಿಕ ಸಾರಿಗೆ**						
	1. ಪುತ್ತೂರು ತಾಲ್ಲೂಕಿನ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ ಕಟ್ಟಡಕ್ಕೆ ನೀರು ಸರಬರಾಜು ಹಾಗೂ ನೈರ್ಮಲೀಕರಣ ವ್ಯವಸ್ಥೆ ಅಳವಡಿಸುವ ಕಾಮಗಾರಿ	10.00	ಮೂರನೇ ದರ್ಜೆ ಮತ್ತು ಮೇಲ್ಪಟ್ಟು	20000.00	4 ತಿಂಗಳು (ಮಳೆಗಾಲ ಸೇರಿ)	ದರವಾರು	1650.00

ಸೂಚನೆಗಳು:–

1. ಉದ್ದೇಶಿಸಿರುವ ಕಾಮಗಾರಿಯ ಶೇ. 30 ರಷ್ಟು ಮೊತ್ತದ ಇದೇ ತರಹದ ಕಾಮಗಾರಿಯನ್ನು ಕಳೆದ 5 ವರ್ಷಗಳ ಅವಧಿಯ ಒಂದು ಆರ್ಥಿಕ ವರ್ಷದಲ್ಲಿ ಪೂರೈಸಿರತಕ್ಕದ್ದು.
2. ಯಾವುದೇ ಟೆಂಡರನ್ನು ಅಥವಾ ಎಲ್ಲಾ ಟೆಂಡರುಗಳನ್ನು ಯಾವುದೇ ಕಾರಣ ನೀಡದೇ ತಿರಸ್ಕರಿಸುವ ಅಥವಾ ಅಂಗೀಕರಿಸುವ ಹಕ್ಕನ್ನು ಸಂಬಂಧಪಟ್ಟ ಇಲಾಖಾ ಅಧಿಕಾರಿಯವರು ಹೊಂದಿರುತ್ತಾರೆ.
3. ಇ.ಎಂ.ಡಿ.ಯನ್ನು ಪ್ಲೆಜ್ಡ್ ರಾಷ್ಟ್ರೀಯ ಉಳಿತಾಯ ಸರ್ಟಿಫಿಕೇಟ್/ ರಾಷ್ಟ್ರೀಕೃತ ಯಾ ಶೆಡ್ಯೂಲ್ ಬ್ಯಾಂಕಿನಿಂದ ಪಡೆದ ಕಾಲ್ ಡಿಪೋಸಿಟ್ ರಶೀದಿ/ ಬ್ಯಾಂಕಿನ ನಿರಖು ಠೇವಣಿ ರೂಪದಲ್ಲಿ ಸಲ್ಲಿಸುವುದು. ನಿಗದಿಪಡಿಸಿದ ಮುಂಗಡ ಠೇವಣಿಯೊಂದಿಗೆ ಸಲ್ಲಿಸದಿರುವ ಟೆಂಡರನ್ನು ಪರಿಗಣಿಸುವುದಿಲ್ಲ.
4. ಗುತ್ತಿಗೆದಾರರು ಕೆಲಸವನ್ನು ನಿಗಧಿತ ಸಮಯದಲ್ಲಿ ಮಾಡಿ ಮುಗಿಸತಕ್ಕದ್ದು, ತಪ್ಪಿದಲ್ಲಿ ನಿಯಮದಂತೆ ದಂಡವನ್ನು ವಿಧಿಸಲಾಗುವುದು.
5. ಗುತ್ತಿಗೆದಾರರು ಟೆಂಡರು ಬಗ್ಗೆ ಅರ್ಜಿ ಸಲ್ಲಿಸುವಾಗ ಈ ತರಹದ ಕೆಲಸವನ್ನು ಕೈಗೊಂಡವರಾಗಿದ್ದು ಅನುಭವ ಪತ್ರವನ್ನು ಸಕ್ಷಮ ಅಧಿಕಾರಿಯವರಿಂದ ಪಡೆದು ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು.
6. ಕಾಮಗಾರಿಗೆ ಬೇಕಾದ ಸಿಮೆಂಟ್, ಮತ್ತು ಇನ್ನಿತರ ಎಲ್ಲಾ ಸಾಮಾಗ್ರಿಗಳನ್ನು ಗುತ್ತಿಗೆದಾರರೇ ಒದಗಿಸಿಕೊಳ್ಳತಕ್ಕದ್ದು ಹಾಗೂ ಇದನ್ನು ಸಕ್ಷಮ ಅಧಿಕಾರಿಯವರಿಂದ ಪರೀಕ್ಷೆ ಪಡೆದು ಫಲಿತಾಂಶವು ಐ.ಎಸ್.ಐ. ಗುಣವನ್ನು ಖಚಿತಪಡಿಸಿ ಕೆಲಸಕ್ಕೆ ಉಪಯೋಗಿಸತಕ್ಕದ್ದು. ಈ ಅಂಶವನ್ನು ಗುತ್ತಿಗೆದಾರರು ಟೆಂಡರನ್ನು ಸಲ್ಲಿಸುವಾಗ ಗಮನಿಸುವುದು.
7. ಯಶಸ್ವಿ ಟೆಂಡರುದಾರರು ನಿರ್ವಹಿಸಿರುವ ಕಾಮಗಾರಿಯ ಮೊತ್ತ 1%ರಷ್ಟನ್ನು ಲೇಬರ್ ಸೆಸ್‌ನ್ನಾಗಿ ಸರಕಾರಿ ಆದೇಶ ಸಂ. ಯುಯಲ್‌ಡಿ:3:ಎಲ್‌ಇಡಿ 2006:ಬೆಂಗಳೂರು:ದಿನಾಂಕ:18.1.2007 ರಂತೆ ಪಾವತಿಸತಕ್ಕದ್ದು.

ಕಾರ್ಯನಿರ್ವಾಹಕ ಇಂಜಿನಿಯರ್,
ಲೋಕೋಪಯೋಗಿ, ಬಂದರು, ಮತ್ತು ಒಳನಾಡು ಜಲಸಾರಿಗೆ ಇಲಾಖೆ,
ಮಂಗಳೂರು ವಿಭಾಗ, ಮಂಗಳೂರು.

ಪಿ.ಆರ್. 470

ಅರಣ್ಯ ಸಂರಕ್ಷಣಾಧಿಕಾರಿಯವರ ಕಛೇರಿ, ಚಿಕ್ಕಮಗಳೂರು ವೃತ್ತ, ಚಿಕ್ಕಮಗಳೂರು
ಅಧಿಸೂಚನೆ ಸಂಖ್ಯೆ: ಎ2/ಹರಾಜು/ಸಿಆರ್–1/2008-09, ಚಿಕ್ಕಮಗಳೂರು, ದಿನಾಂಕ: 30ನೇ ಆಗಸ್ಟ್ 2008.

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ನಮೂದಿಸಿದ ನಾಟಾ ಸಂಗ್ರಹಾಲಯಗಳಲ್ಲಿ ಲಭ್ಯವಿರುವ ಬೀಟೆ ಸಾಗುವಾನಿ ಇತರೆ ಜಾತಿಯ ನಾಟಾ ಹಾಗೂ ಸೌದೆಗಳನ್ನು ಡಿಪೋವಿನ ಮುಂದೆ ಸೂಚಿಸಿದ ದಿನಾಂಕದಂದು ಬಹಿರಂಗ ಹರಾಜು ಮಾರಾಟದಲ್ಲಿ ವಿಕ್ರಯಿಸಲು ಸಾಮಾನ್ಯ ಅವಗಾಹನೆಗಾಗಿ ಪ್ರಕಟಿಸಿದೆ.

ಕ್ರ. ಸಂ.	ವಿಭಾಗದ ಮತ್ತು ಡಿಪೋದ ಹೆಸರು	ಹರಾಜು ದಿನಾಂಕ	ಹರಾಜಿಗಿಟ್ಟ ನಾಟಾ/ಸೌದೆಯ ಅಂದಾಜು ಪ್ರಮಾಣ (ಘ.ಮೀ. ಗಳಲ್ಲಿ)					
			ಬೀಟೆ	ಸಾಗುವಾನಿ	ಕಾಡು ಜಾತಿ ಇತರೆ ಜಾತಿಯ ನಾಟ	ಬಿಲೆಟ್ಸ್	ಸೌದೆ	ಪೋಲ್ಸ್ (ಸಂಖ್ಯೆ)
1	2	3	4	5	6	8	9	10
I a)	**ಚಿಕ್ಕಮಗಳೂರು ವಿಭಾಗ:** ಕಡೂರು ಸರ್ಕಾರಿ ನಾಟಾ ಸಂಗ್ರಹಾಲಯ	27–09–08	35.652	–	14.544 ಹೊನ್ನೆ 89.935 ನಂದಿ 1.244 ಮತ್ತಿ 3.761 ಹುನಾಲು 128.674 ಕಾಡು ಜಾತಿ	–	35.275 ಬೀಟೆ	–
b)	ಚಿಕ್ಕಮಗಳೂರು ಸೆಂಟ್ರಲ್ ನಾಟಾ ಸಂಗ್ರಹಾಲಯ	28–09–08	–	–	– –	–	164.348 ಕಾಡು ಜಾತಿ	–

ಅರಣ್ಯ ಸಂರಕ್ಷಣಾಧಿಕಾರಿ
ಚಿಕ್ಕಮಗಳೂರು ವೃತ್ತ, ಚಿಕ್ಕಮಗಳೂರು

Office of the Conservator of Forests, Chikmagalur Circle, Chikmagalur,
NOTIFICATION No: A2/Sale/CR-01/2008-09, Chikmagalur, dated: 30th August 2008

It is here by notified for the information of general public that, Beete, Teak and other kind timber poles, Firewood available in the following Government Timber Depots of Chikmagalur Circle will be sold in public auction on the date shown against each depots.

Sl. No.	Name of the Division and Depot	Date of Sale	Approximate quantity of Timber, Firewood, Poles etc., exposed for Sale (in M3)					
			Beete	Teak	Other kind	Billets	Firewood	Poles (in Nos.)
1	2	3	4	5	6	7	8	9
I a)	**Chikmagalur Division:** Kadur Timber Depot	27-09-08	35.652	-	14.544 Honne 89.935 Nandi 1.244 Mathi 3.761 Hunalu 128.674 J.Wood	-	35.275 Beete	-
b)	Chikmagalur Central Depot	28-09-08	-	-	- -	-	164.348 J.Wood	-

Conservator of Forests,
Chikmagalur Circle, Chikmagalur.

P.R. 471

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಟೆಂಡರ್ ಪ್ರಕಟಣೆ

ಸಂಖ್ಯೆ: ಸಿಆಸುಇ 423 ಸಿಸೇನಿ 2008, ಬೆಂಗಳೂರು, ದಿನಾಂಕ: 29ನೇ ಆಗಸ್ಟ್ 2008

ವಿಷಯ: ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿನ ಗ್ರೂಪ್–ಡಿ ನೌಕರರ ಸೇವೆಯನ್ನು ಬ್ಯಾಹ ಮೂಲಕ (Out Source) ನಿರ್ವಹಿಸಲು ಟೆಂಡರ್ ಕರೆಯುವ ಬಗ್ಗೆ.

ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ಖಾಲಿ ಇರುವ ಗ್ರೂಪ್–ಡಿ ಹುದ್ದೆಗಳಲ್ಲಿ –100 ಗ್ರೂಪ್–ಡಿ ಹುದ್ದೆಗಳನ್ನು ಹೊರಗುತ್ತಿಗೆ (Out Sourcing) ಮೂಲಕ ಭರ್ತಿ ಮಾಡಲು ಉದ್ದೇಶಿಸಲಾಗಿದ್ದು, ಈ ಕ್ಷೇತ್ರಗಳಲ್ಲಿ ಪರಿಣತಿ ಇರುವ ಪ್ರಸಿದ್ಧ ಸಂಸ್ಥೆಗಳಿಂದ (ಕರ್ನಾಟಕ ಮಾರಾಟ ತೆರಿಗೆ ಕಾಯ್ದೆ 1957 ರಡಿಯಲ್ಲಿ ನೊಂದಾಯಿಸಲ್ಪಟ್ಟವರಿಂದ) ಟೆಂಡರ್‌ಗಳನ್ನು ಈ ಮೂಲಕ ಕರೆಯಲಾಗಿದೆ.

1. ಮೊಹರು ಮಾಡಿರುವ ಟೆಂಡರ್ ಕವರಿನ ಮೇಲೆ " 100 ಗ್ರೂಪ್–ಡಿ ಹುದ್ದೆಗಳ ಹೊರ ಗುತ್ತಿಗೆ, ಮೂಲಕ ಭರ್ತಿ" ಎಂದು ಬರೆದಿರತಕ್ಕದ್ದು.
2. ಟೆಂಡರ್ ನಮೂನೆಯನ್ನು ರೂ. 200–00 (ನಮೂನೆ ದರ ರೂ. 200–00 + ಮೌಲ್ಯವರ್ಧಿಕ ತೆರಿಗೆ) ಬ್ಯಾಂಕ್ ಡ್ರಾಫ್ಟ್‌ನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಲೆಕ್ಕಪತ್ರ), ಕೊಠಡಿ ಸಂ–25, ನೆಲಮಹಡಿ, ವಿಧಾನ ಸೌಧ, ಬೆಂಗಳೂರು ಇವರ ಹೆಸರಿಗೆ ಪಡೆದು, ಅದನ್ನು ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸುಇ (ಆಡಳಿತ) ಕೊಠಡಿ ಸಂ–419, 4ನೇ ಮಹಡಿ, ಬಹುಮಹಡಿ ಕಟ್ಟಡ, ಡಾ: ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು–560 001 ಇಲ್ಲಿ ಪಡೆದುಕೊಳ್ಳಬಹುದು. ದಿನಾಂಕ: 27.09.2008 ರಂದು ಮಧ್ಯಾಹ್ನ 3.30 ಗಂಟೆಯ ವರೆಗೆ ಟೆಂಡರ್ ಅರ್ಜಿಗಳನ್ನು ನೀಡಲಾಗುವುದು. ಈ ಟೆಂಡರ್ ನಮೂನೆಗೆ ನೀಡಿದ ಮೊತ್ತವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ. ಟೆಂಡರ್ ಅರ್ಜಿಗಳನ್ನು ಈ ಕಚೇರಿಯಿಂದಲೇ ಖರೀದಿಸಿ ದ್ವಿಪ್ರತಿಯಲ್ಲಿ ಸಲ್ಲಿಸತಕ್ಕದ್ದು.
3. ಗುತ್ತಿಗೆಯನ್ನು ನಿರ್ವಹಿಸಲು ಸಿದ್ಧವಿರುವ ವ್ಯಕ್ತಿ/ ಸಂಸ್ಥೆಗಳು ಟೆಂಡರ್‌ನೊಂದಿಗೆ ಮುಂಗಡ ಠೇವಣಿ (ಇ.ಎಂ.ಡಿ) ರೂ. 2.00 ಲಕ್ಷ (ರೂಪಾಯಿ ಎರಡು ಲಕ್ಷಗಳು ಮಾತ್ರ) ಗಳ ಮೊತ್ತಕ್ಕೆ ಬ್ಯಾಂಕ್ ಡಿಮಾಂಡ್ ಡ್ರಾಫ್ಟ್‌ನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಲೆಕ್ಕಪತ್ರ) ವಿಧಾನ ಸೌಧ, ಬೆಂಗಳೂರು–560 001, ಇವರ ಹೆಸರಿಗೆ ಪಡೆದು, ಅದನ್ನು ಟೆಂಡರ್‌ನೊಂದಿಗೆ ಲಗತ್ತಿಸಿ, ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ) ಕೊಠಡಿ ಸಂ–419, 4ನೇ ಮಹಡಿ, ಬಹುಮಹಡಿ ಕಟ್ಟಡ, ಡಾ:ಬಿ.ಆರ್. ಅಂಬೇಡ್ಕರ್ ರಸ್ತೆ, ಬೆಂಗಳೂರು–560 001 ಇವರಿಗೆ ಸಂಭೋದಿಸಿ ಕಳುಹಿಸತಕ್ಕದ್ದು.
4. ಗೊತ್ತುಪಡಿಸಿದ ಟೆಂಡರ್ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ:30.09.2008ರ ಮಧ್ಯಾಹ್ನ 3.00 ಗಂಟೆಯವರೆಗೆ. ನಂತರ ಬಂದ ಟೆಂಡರ್ ಅರ್ಜಿಗಳನ್ನು ಹಾಗೂ ಇ.ಎಂ.ಡಿ ಮೊತ್ತಕ್ಕೆ ಮೂಲ ಬ್ಯಾಂಕ್ ಡಿಮಾಂಡ್ ಡ್ರಾಫ್ಟ್ ಹಾಗೂ ಟೆಂಡರ್‌ನ ಷರತ್ತು ಮತ್ತು ನಿಬಂಧನೆಗಳಲ್ಲಿ ತಿಳಿಸಿರುವ ಎಲ್ಲಾ ದಾಖಲೆಗಳೊಂದಿಗೆ ಟೆಂಡರ್‌ಗಳನ್ನು ಸಲ್ಲಿಸದೇ ಇದ್ದಲ್ಲಿ ಅಂತಹ ಟೆಂಡರ್‌ಗಳನ್ನು ತಿರಸ್ಕರಿಸಲಾಗುವುದು.
5. ದರಪಟ್ಟಿಯೊಂದಿಗೆ ದಿನಾಂಕ: 31.03.2008ಕ್ಕೆ ಅಂತ್ಯಗೊಂಡಂತೆ ಅನ್ವಯಿಸುವ ಮೌಲ್ಯವರ್ಧಿತ ತೆರಿಗೆ ಕ್ಲಿಯರೆನ್ಸ್ ಸರ್ಟಿಫಿಕೇಟನ್ನು ಹಾಗೂ ಆದಾಯ ತೆರಿಗೆ ಪಾವತಿಸಿರುವ ಬಗ್ಗೆ ದಾಖಲೆಗಳನ್ನು ಸಲ್ಲಿಸತಕ್ಕದ್ದು.
6. ಟೆಂಡರ್‌ನ್ನು ದಿನಾಂಕ: 01.10.2008ರ ಮಧ್ಯಾಹ್ನ 4.30 ಗಂಟೆಗೆ ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಕೊಠಡಿ ಸಂ: 246, 2ನೇ ಮಹಡಿ, ವಿಧಾನ ಸೌಧ, ಇವರ ಕಚೇರಿಯಲ್ಲಿ ಟೆಂಡರ್‌ದಾರರ ಸಮ್ಮುಖದಲ್ಲಿ ತೆರೆಯಲಾಗುವುದು. ಟೆಂಡರ್ ತೆರೆಯುವ ದಿನಾಂಕವು ಯಾವುದಾದರೂ ಸಾರ್ವತ್ರಿಕ ರಜಾ ದಿನವಾದಲ್ಲಿ ಮಾರನೆಯ ಕೆಲಸದ ದಿನ ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ ತೆರೆಯಲಾಗುವುದು.
7. ಗುತ್ತಿಗೆ ಅವಧಿಯು ಮೊದಲ ಹಂತದಲ್ಲಿ ಒಂದು ವರ್ಷದ ಅವಧಿಗೆ ಮಾತ್ರ ಜಾರಿಯಲ್ಲಿರುವುದು. ಗುತ್ತಿಗೆದಾರರು ಒಂದು ವರ್ಷದ ಪೂರ್ಣ ಅವಧಿಗೆ ಗುತ್ತಿಗೆ ದರವನ್ನು ನಮೂದಿಸತಕ್ಕದ್ದು. ನಮೂದಿಸುವ ದರವು ತೆರಿಗೆ ಇತ್ಯಾದಿಗಳನ್ನು ಒಳಗೊಂಡಿದೆಯೇ ಎಂಬುದನ್ನು ಸ್ಪಷ್ಟಪಡಿಸಬೇಕು. ಒಳಗೊಂಡಿದ್ದಲ್ಲಿ, ಅದರ ವಿವರ ನೀಡುವುದು.
8. ಯಶ್ವಸಿ ಟೆಂದರ್‌ದಾರರು ಪಾವತಿ ಮಾಡುವ ಇ.ಎಂ.ಡಿ. ಮೊತ್ತವನ್ನು ಗುತ್ತಿಗೆಯ ಷರತ್ತು ಮತ್ತು ನಿಬಂಧನೆಗಳನ್ನು ನಿಭಾಯಿಸುವ ಸಲುವಾಗಿ ಬಡ್ಡಿ ರಹಿತ ಭದ್ರತಾ ಠೇವಣಿಯಾಗಿ ಪರಿಗಣಿಸಲಾಗುವುದು. ಭದ್ರತಾ ಠೇವಣಿಯಾಗಿ ಇಟ್ಟುಕೊಳ್ಳಲಾಗುವ ಇ.ಎಂ.ಡಿ ಮೊತ್ತವನ್ನು ಗುತ್ತಿಗೆ ಅವಧಿ ಮುಗಿದ ನಂತರ ಯಾವುದೇ ದೂರು ಇಲ್ಲದಿದ್ದಲ್ಲಿ ಹಾಗೂ ಷರತ್ತುಗಳ ಉಲ್ಲಂಘನೆ ಆಗದಿದ್ದಲ್ಲಿ ಹಾಗೂ ಗುತ್ತಿಗೆದಾರರಿಂದ ಸರ್ಕಾರಕ್ಕೆ ಯಾವುದೇ ಬಾಕಿ ಇಲ್ಲದಿದ್ದಲ್ಲಿ ಬಡ್ಡಿ ರಹಿತವಾಗಿ ಹಿಂತಿರುಗಿಸಲಾಗುವುದು.

9. ಆಯಶಸ್ವಿ ಟೆಂಡರ್‌ದಾರರ ಬ್ಯಾಂಕ್ ಡಿಮಾಂಡ್ ಡ್ರಾಫ್ಟ್‌ನ್ನು (ಇ.ಎಂ.ಡಿ) ಹಣವನ್ನು ಟೆಂಡರ್ ಪ್ರಕಿಯೆ ಮುಗಿದ ನಂತರ ಹಿಂದಿರುಗಿಸಲಾಗುವುದು. ಅದಕ್ಕೆ ಯಾವುದೇ ರೀತಿಯ ಬಡ್ಡಿಯನ್ನು ನೀಡಲಾಗುವುದಿಲ್ಲ. ಯಾವುದೇ ಕಾರಣ ನೀಡದೆ ಯಾವುದೇ ಅಥವಾ ಎಲ್ಲಾ ಟೆಂಡರ್‌ಗಳನ್ನು ಸ್ವೀಕರಿಸುವ ಅಥವಾ ತಿರಸ್ಕರಿಸುವ ಹಕ್ಕನ್ನು ಸರ್ಕಾರವು ಕಾಯ್ದಿರಿಸಿದೆ.

ಇನ್ನು ಹೆಚ್ಚಿನ ವಿವರಗಳಿಗೆ ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ) ಇವರನ್ನು ಕಚೇರಿ ವೇಳೆಯಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂ: 22032360 ಅಥವಾ 22256808 ರಲ್ಲಿ ಸಂಪರ್ಕಿಸಬಹುದು.

ಜಾಯ್ಸ್ ಸುರೇಂದ್ರ
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ)
☎: 22256808

ಟೆಂಡರ್ ನಮೂನೆ

ವಿಷಯ: ಕರ್ನಾಟಕ ಸರ್ಕಾರ ಸಚಿವಾಲಯದಲ್ಲಿನ ಗ್ರೂಪ್–ಡಿ ನೌಕರರ ಸೇವೆಯನ್ನು ಬಾಹ್ಯ ಮೂಲಕ (Out Source) ನಿರ್ವಹಿಸಲು ಟೆಂಡರ್ ಕರೆಯುವ ಬಗ್ಗೆ.

1) ಟೆಂಡರ್ ಉಲ್ಲೇಖ	:	ಸಿಆಸುಇ 423 ಸಿಸೇನಿ 2008
2) ಟೆಂಡರ್ ಅರ್ಜಿ ಮಾರಾಟ ಪ್ರಾರಂಭಿಸುವ ದಿನಾಂಕ		ದಿನಾಂಕ: 01.09.2008
3) ಟೆಂಡರ್ ಅರ್ಜಿ ಮಾರಾಟ ಮಾಡುವ ಕೊನೆಯ ದಿನಾಂಕ ಮತ್ತು ವೇಳೆ	:	ದಿನಾಂಕ: 27.09.2008 ಮಧ್ಯಾಹ್ನ 3:30 ಗಂಟೆಯೊಳಗೆ
4) ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ ಮತ್ತು ವೇಳೆ	:	ದಿನಾಂಕ: 30.09.2008 ಮಧ್ಯಾಹ್ನ 3:30 ಗಂಟೆಯೊಳಗೆ
5) ಟೆಂಡರ್ ತೆರೆಯುವ ದಿನಾಂಕ ಮತ್ತು ವೇಳೆ	:	ದಿನಾಂಕ: 01.10.2008 ಮಧ್ಯಾಹ್ನ 4:30 ಗಂಟೆಗೆ. ಟೆಂಡರ್ ತೆರೆಯುವ ದಿನಾಂಕವು ಯಾವುದಾದರೂ ಸಾರ್ವತ್ರಿಕ ರಜಾ ದಿನವಾದಲ್ಲಿ ಮಾರನೆಯ ಕೆಲಸದ ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ ತೆರೆಯಲಾಗುವುದು
6) ಟೆಂಡರ್ ತೆರೆಯುವ ಸ್ಥಳ	:	ಸರ್ಕಾರದ ಕಾರ್ಯದರ್ಶಿ ಸಿ.ಆ.ಸು. ಇಲಾಖೆ ಕೊಠಡಿ ಸಂ: 246, 2ನೇ ಮಹಡಿ, ವಿಧಾನಸೌದ, ಬೆಂಗಳೂರು– 560 001.
7) ಟೆಂಡರ್‌ಗಳನ್ನು ಸಲ್ಲಿಸಬೇಕಾದ ವಿಳಾಸ	:	ಸರ್ಕಾರದ ಜಂಟಿ ಕಾರ್ಯದರ್ಶಿ ಸಿ.ಆ.ಸು.ಇಲಾಖೆ (ಆಡಳಿತ) ಕೊಠಡಿ ಸಂ:419, 4ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು–01
8) ಟೆಂಡರ್ ಫಾರಂ ದರ	:	ರೂ. 200/– + ಮೌಲ್ಯವರ್ಧಿತ ತೆರಿಗೆ

ಟೆಂಡರ್‌ದಾರರ ಗಮನಕ್ಕೆ :

ಸಾಮಾನ್ಯ ನಿಬಂಧನೆಗಳು

1) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಇರುವ ವ್ಯಕ್ತಿಗಳು ಅಥವಾ ಸಂಸ್ಥೆಗಳು ಮಾತ್ರ ಟೆಂಡರ್‌ನಲ್ಲಿ ಭಾಗವಹಿಸತಕ್ಕದ್ದು.
2) ಈ ಕ್ಷೇತ್ರದಲ್ಲಿ ಕನಿಷ್ಟ 3 ವರ್ಷಗಳ ಅನುಭವ ಇರುವ ಸಂಸ್ಥೆಗಳು ಮಾತ್ರ ಟೆಂಡರ್‌ನಲ್ಲಿ ಭಾಗವಹಿಸತಕ್ಕದ್ದು.
3) ಗುತ್ತಿಗೆಯಲ್ಲಿ ಭಾಗವಹಿಸುವ ಸಂಸ್ಥೆಯು, ಈ ಕ್ಷೇತ್ರದಲ್ಲಿ ತಮಗಿರುವ ಅನುಭವ, ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಸಂಸ್ಥೆ/ಇಲಾಖೆ/ಕಛೇರಿಗಳ ವಿವರಗಳನ್ನು ದಾಖಲೆಗಳೊಂದಿಗೆ ಒದಗಿಸುವುದು.

4) ಈ ಗುತ್ತಿಗೆಯಲ್ಲಿ ಭಾಗವಹಿಸುವ ಸಂಸ್ಥೆಗಳು ಆರ್ಥಿಕವಾಗಿ ಉತ್ತಮ ಸ್ಥಿತಿಯಲ್ಲಿದ್ದು, ಸಂಸ್ಥೆಯ ಸಿಬ್ಬಂದಿಗೆ ಸೂಕ್ತ ಸಮಯದಲ್ಲಿ ವೇತನವನ್ನು ನೀಡುವ ಶಕ್ತಿಯನ್ನು ಹೊಂದಿದಲ್ಲಿ ಮಾತ್ರ ಟೆಂಡರ್‌ನಲ್ಲಿ ಭಾಗವಹಿಸತಕ್ಕದ್ದು. ಈ ಬಗ್ಗೆ ಅಗತ್ಯ ದಾಖಲೆಗಳನ್ನು ಒದಗಿಸತಕ್ಕದ್ದು.

5) ಟೆಂಡರ್‌ದಾರರು ಅವರು ಸಲ್ಲಿಸುವ ಟೆಂಡರ್‌ನಲ್ಲಿ ಅವರ ಪೂರ್ಣ ಹೆಸರನ್ನು ನಮೂದಿಸಿ ಸಹಿ ಹಾಕಿರತಕ್ಕದ್ದು.. ಅದು ಒಂದು ಸಂಸ್ಥೆಯ ಪರವಾಗಿ ಇದ್ದಲ್ಲಿ, ಆ ಸಂಸ್ಥೆಯ ಮಾಲೀಕ ಅಥವಾ ಅವರಿಂದ ನಾಮನಿರ್ದೇಶನ ಮಾಡಲ್ಪಟ್ಟ ವ್ಯಕ್ತಿಯ ಹೆಸರಿನೊಂದಿಗೆ ಸಹಿ ಹಾಕಿರತಕ್ಕದ್ದು.

6) ಪ್ರತಿಯೊಬ್ಬ ಟೆಂಡರ್‌ದಾರನು ತನ್ನ ವಾಸಸ್ಥಳ ಹಾಗೂ ಅಂಚೆ ವಿಳಾಸವನ್ನು ಸ್ಪಷ್ಟವಾಗಿ ಟೆಂಡರ್‌ನಲ್ಲಿ ನಮೂದಿಸತಕ್ಕದ್ದು.

7) ಯಾವುದೇ ಕಾರಣವನ್ನು ನೀಡದೇ ಯಾವುದೇ ಅಥವಾ ಎಲ್ಲಾ ಟೆಂಡರುಗಳನ್ನು ಸ್ವೀಕರಿಸುವ ಅಥವಾ ತಿರಸ್ಕರಿಸುವ ಹಕ್ಕನ್ನು ಕರ್ನಾಟಕ ಸರ್ಕಾರದ ಕಾರ್ಯದರ್ಶಿ, ಸಿಆಸುಇ ಇವರು ಕಾದಿರಿಸಿಕೊಂಡಿದ್ದಾರೆ. ಇದಕ್ಕಾಗಿ ಅವರು ಯಾವುದೇ ಕಾರಣಗಳನ್ನು ನೀಡಬೇಕಾಗಿಲ್ಲ.

8) ಗುತ್ತಿಗೆ ನಡೆಸುವ ಬಗ್ಗೆ ಯಾವುದೇ ವ್ಯಾಜ್ಯ ಉಂಟಾದಲ್ಲಿ ಈ ಬಗ್ಗೆ ತೀರ್ಮಾನವನ್ನು ತೆಗೆದುಕೊಳ್ಳಲು ಬೆಂಗಳೂರಿನಲ್ಲಿರುವ ನ್ಯಾಯಾಲಯಗಳಿಗೆ ಮಾತ್ರ ಅಧಿಕಾರವಿದೆ.

9) ಈ ಗುತ್ತಿಗೆಯ ಮೊತ್ತವನ್ನು 4 ಕಂತುಗಳಲ್ಲಿ 3 ತಿಂಗಳಿಗೊಮ್ಮೆ ಗುತ್ತಿಗೆದಾರರು ತೃಪ್ತಿಕರವಾಗಿ ನಿರ್ವಹಣೆ ಮಾಡಿರುವರು ಎಂಬುದನ್ನು ಖಚಿತಪಡಿಸಿಕೊಂಡು ನೀಡಲಾಗುವುದು.

10) ಈ ಸೇವೆಗಳಿಗೆ ನೇಮಿಸಲ್ಪಡುವ ಅಧಿಕಾರಿ : ಸಿಬ್ಬಂದಿಗೆ ಕನಿಷ್ಟ ವೇತನ ಕಾಯಿದೆಯಡಿ ನಿಗದಿಪಡಿಸಿರುವ ವೇತನ ಅಥವಾ ಅದಕ್ಕಿಂತ ಮೇಲ್ಪಟ್ಟು ವೇತನ ನೀಡತಕ್ಕದ್ದು.

ಯಶಸ್ವಿ ಟೆಂಡರ್‌ದಾರರು/ ಗುತ್ತಿಗೆದಾರರು ಈ ಕೆಳಕಂಡ ಷರತ್ತು ಗಳನ್ನು ಪಾಲಿಸಲು ಸಿದ್ಧರಿರತಕ್ಕದ್ದು:–

1. ಗುತ್ತಿಗೆದಾರರು ನೇಮಿಸುವ ಸಿಬ್ಬಂದಿಯ ಹಿನ್ನೆಲೆ ಬಗ್ಗೆ ಸಂಬಂಧಿಸಿದ ಪೊಲೀಸ್ ಅಧಿಕಾರಿಯಿಂದ ದೃಢೀಕರಿಸಲ್ಪಡತಕ್ಕದ್ದು.
2. ಗುತ್ತಿಗೆಯನ್ನು ಪಡೆದ 30 ದಿನಗಳೊಳಗಾಗಿ ತನ್ನ ಸಿಬ್ಬಂದಿಗೆ ಸಮೂಹ ವಿಮೆಯನ್ನು ಮಾಡಿಸತಕ್ಕದ್ದು.
3. ಕಾರ್ಯ ನಿರ್ವಹಣೆ ವೇಳೆಯಲ್ಲಿ ಗುತ್ತಿಗೆದಾರರ ನೌಕರರು ಯಾವುದೇ ರೀತಿಯ ಅಪಘಾತಕ್ಕೆ ಈಡಾದಲ್ಲಿ ಸಂಬಂಧಪಟ್ಟ ನೌಕರರು/ ಅವರ ಕುಟುಂಬಕ್ಕೆ ನಿಯಮಾನುಸಾರ ಪರಿಹಾರ ನೀಡುವುದು ಗುತ್ತಿಗೆದಾರರ ಜವಾಬ್ದಾರಿಯಾಗಿರುತ್ತದೆ.
4. ಗುತ್ತಿಗೆಯನ್ನು ಯಾವುದೇ ಸಮಯದಲ್ಲೂ 30 ದಿವಸಗಳ ನೋಟೀಸ್ ನೀಡುವ ಮೂಲಕ ರದ್ದುಗೊಳಿಸುವ ಅಧಿಕಾರವನ್ನು ಸರ್ಕಾರ ಹೊಂದಿರುತ್ತದೆ.
5. ಗುತ್ತಿಗೆದಾರರು ಕಾರ್ಮಿಕ ಇಲಾಖೆ/ ಇಎಸ್‌ಐ/ ಭವಿಷ್ಯ ನಿಧಿ ಇತ್ಯಾಧಿ ಇಲಾಖೆಗಳು ನಿಗಧಿಪಡಿಸಿರುವ ಅಗತ್ಯ ನೀತಿ: ನಿಯಮಗಳನ್ನು ಪಾಲಿಸಿರುವ/ಪಾಲಿಸುವ ಬಗ್ಗೆ ದೃಢೀಕರಿಸತಕ್ಕದ್ದು.
6. ಗುತ್ತಿಗೆದಾರರು ಆದೇಶ ಹೊರಡಿಸಿದ ದಿನಾಂಕದಿಂದ ಒಂದು ವಾರದೊಳಗೆ ನಿಗಧಿತ ಮೌಲ್ಯದ ಛಾಪಾ ಕಾಗದದಲ್ಲಿ ಕರಾರು ಒಪ್ಪಂದ ಪತ್ರವನ್ನು ಸಹಿ ಹಾಕಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ಈ ಅವಧಿಯೊಳಗೆ ಒಪ್ಪಂದದ ಪತ್ರವನ್ನು ಸಲ್ಲಿಸಲು ವಿಫಲರಾದಲ್ಲಿ ಅವರು ಸಲ್ಲಿಸಿರುವ ಮುಂಗಡ ಠೇವಣಿ ಹಣವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
7. ಗುತ್ತಿಗೆದಾರರು ನೇಮಿಸಲ್ಪಡುವ ಸಿಬ್ಬಂದಿಯವರು ಕನಿಷ್ಟ ವಿದ್ಯಾರ್ಹತೆಯಾದ 7ನೇ ತರಗತಿ ಉತ್ತೀರ್ಣರಾಗಿರತಕ್ಕದ್ದು.
8. ಗುತ್ತಿಗೆದಾರರು ನೇಮಿಸಲ್ಪಡುವ ಸಿಬ್ಬಂದಿಯವರು ನಿಗಧಿಪಡಿಸಿದ ಕಚೇರಿ ಅವಧಿಯಲ್ಲಿ ಕಾರ್ಯ ನಿರ್ವಹಿಸಬೇಕು ಹಾಗೂ ಕಚೇರಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಅಗತ್ಯವಾದಲ್ಲಿ ಹೆಚ್ಚುವರಿ ಅವಧಿ ಕೆಲಸವನ್ನು ನಿರ್ವಹಿಸತಕ್ಕದ್ದು. ಇದಕ್ಕಾಗಿ ಯಾವುದೇ ಹೆಚ್ಚುವರಿ ವೇತನ ನೀಡಲಾಗುವುದಿಲ್ಲ.
9. ಗುತ್ತಿಗೆದಾರರು ನೇಮಿಸಲ್ಪಡುವ ಸಿಬ್ಬಂದಿಯವರ ನಿವಾಸದ ವಿಳಾಸ, ಊರಿನ ವಿಳಾಸ ಹಾಗೂ ಅವರ ಭಾವಚಿತ್ರಗಳೊಂದಿಗೆ ವಿವರಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗೆ ನೀಡತಕ್ಕದ್ದು ಹಾಗೂ ವಿಳಾಸ ದೃಢೀಕರಣ ದಾಖಲೆ ಒದಗಿಸತಕ್ಕದ್ದು.
10. ಸೇವೆಗಳಿಗೆ ನೇಮಿಸಲ್ಪಡುವ ನೌಕರರನ್ನು ಆಗಿಂದಾಗ್ಗೆ ಬದಲಾಯಿಸಕೂಡದು.
11. ಗುತ್ತಿಗೆಯನ್ನು ಪಡೆಯುವ ಸಂಸ್ಥೆಯು ಕೆಲಸಗಳನ್ನು ನಿರ್ವಹಿಸುವ ತಮ್ಮ ನೌಕರರಿಗೆ ಸಮವಸ್ತ್ರ ನೀಡತಕ್ಕದ್ದು ಮತ್ತು ನೌಕರರ ಹೆಸರು, ನಿರ್ವಹಿಸುವ ಕೆಲಸ ಇವೇ ಮುಂತಾದ ವಿವರಗಳನ್ನು ಒಳಗೊಂಡ ಗುರುತಿನ ಚೀಟಿಯನ್ನು ಅವರಿಗೆ ನೀಡಿ, ಕರ್ತವ್ಯದ ವೇಳೆಯಲ್ಲಿ ಅದನ್ನು ಪ್ರದರ್ಶಿಸಲು ಸೂಚಿಸತಕ್ಕದ್ದು,

12. 100 ಗ್ರೂಪ್–ಡಿ ನೌಕರರ ಸೇವೆ ಪೂರ್ತಿ ಅಗತ್ಯತೆ ಇಲ್ಲದಿದ್ದಲ್ಲಿ, ಇಂತಹ ಸಂದರ್ಭದಲ್ಲಿ ಗುತ್ತಿಗೆ ಹಣವನ್ನು ಅಗತ್ಯವಿರುವ ಸಿಬ್ಬಂದಿಗನುಗುಣವಾಗಿ ಕಡಿತಗೊಳಿಸಲಾಗುವುದು.

ಡಿ ಗುಂಪಿನ ನೌಕರರ ಕರ್ತವ್ಯಗಳು:–

1. ಡಿ ಗುಂಪಿನ ನೌಕರರು ಸಚಿವಾಲಯದ ಇಲಾಖೆಯ– ಒಳಗೆ ಮತ್ತು ಸಚಿವಾಲಯದ ಒಂದು ಇಲಾಖೆಯಿಂದ ಇನ್ನೊಂದು ಇಲಾಖೆಗೆ ಕಡತಗಳನ್ನು ತೆಗೆದುಕೊಂಡು ಹೋಗುವುದು. ಯಾವುದೇ ಕಾಗದ ಪತ್ರಗಳನ್ನು ಹಾಗೂ ಕಡತಗಳನ್ನು ಕಳೆಯಬಾರದು. ಇದನ್ನು ಕಳೆದಲ್ಲಿ ಸಂಸ್ಥೆಯು/ಸಿಬ್ಬಂದಿಯು ಜವಾಬ್ದಾರರಾಗುತ್ತಾರೆ.
2. ಕಛೇರಿಯ ಗೌಪ್ಯತೆಯನ್ನು ಕಾಪಾಡುವುದು.
3. ಮುಕ್ತಾಯಗೊಳಿಸಿರುವ ಕಡತಗಳನ್ನು ಹೊಲಿಯುವುದು.
4. ಶಾಖೆಗಳಲ್ಲಿ ಕಡತಗಳನ್ನು ಜೋಡಿಸುವುದು, ಪೀಠೋಪಕರಣಗಳ ಧೂಳನ್ನು ಒರೆಸುವುದು, ಇತ್ಯಾದಿ
5. ಲೇಖನ ಸಾಮಗ್ರಿಗಳನ್ನು ತೆಗೆದುಕೊಂಡು ಬರುವುದು ಮತ್ತು ಅವುಗಳನ್ನು ವಿತರಣೆ ಮಾಡುವುದು.
6. ಅಗತ್ಯವಾದಾಗಲೆಲ್ಲ ಲಕೋಟೆಗಳನ್ನು ತಯಾರಿಸುವುದು.
7. ಸಿಬ್ಬಂದಿಯವರು ನಿಗಧಿಪಡಿಸಿದ ಕಚೇರಿ ಅವಧಿಯಲ್ಲಿ ಕಾರ್ಯ ನಿರ್ವಹಿಸಬೇಕು ಹಾಗೂ ಕಚೇರಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಅಗತ್ಯವಾದಲ್ಲಿ ಹೆಚ್ಚುವರಿ ಅವಧಿ ಕೆಲಸವನ್ನು ನಿರ್ವಹಿಸತಕ್ಕದ್ದು. ಇದಕ್ಕಾಗಿ ಯಾವುದೇ ಹೆಚ್ಚುವರಿ ವೇತನ ನೀಡಲಾಗುವುದಿಲ್ಲ.
8. ಕಚೇರಿ ಕೆಲಸಕ್ಕೆ ಸಂಬಂಧಿಸಿದಂತೆ ಅವರಿಗೆ ವಹಿಸಿಕೊಡಬಹುದಾದ ಯಾವುದೇ ಇತರ ಕರ್ತವ್ಯ.

ಟೆಂಡರ್‌ದಾರರ ಸಹಿ
(ಪೂರ್ಣ ಹೆಸರು ಮತ್ತು ವಿಳಾಸದೊಂದಿಗೆ)

ಜಾಯ್ಸ್ ಸುರೇಂದ್ರ
ಸರ್ಕಾರದ ಜಂಟಿ ಕಾರ್ಯದರ್ಶಿ,
ಪಿ.ಆರ್. 482 ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ)
☎: 22256808

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಟೆಂಡರ್ ಪ್ರಕಟಣೆ

ಸಂಖ್ಯೆ: ಸಿಆಸುಇ 273 ಡಿಟಿಎನ್ 2008, ಬೆಂಗಳೂರು, ದಿನಾಂಕ: 23ನೇ ಆಗಸ್ಟ್ 2008

ಕರ್ನಾಟಕ ಸರ್ಕಾರದ ಮಾನ್ಯ ಸಚಿವರುಗಳ ಅಧಿಕೃತ ನಿವಾಸ ಮತ್ತು ಕಚೇರಿಯಲ್ಲಿನ ನೇರ ದೂರವಾಣಿಗಳಿಗೆ 3 ಕೀ ಟೆಲಿಫೋನ್‌ಗಳು ಮತ್ತು 1 ಪುಶ್ ಬಟನ್ ದೂರವಾಣಿ ಉಪಕರಣ, ಈ ರೀತಿ 4 ವಿಸ್ತೀರ್ಣಗಳ ಒಟ್ಟು 25 ಆಧುನಿಕ ಮಾದರಿಯ ಪ್ಯಾನಾಸೋನಿಕ್ ಕೀ ಟೆಲಿಫೋನ್ ಸಂಪರ್ಕ ವ್ಯವಸ್ಥೆಗಳನ್ನು ಖರೀದಿಸಿ ಅಳವಡಿಸಲು ಉದ್ದೇಶಿಸಲಾಗಿದ್ದು, ಈ ಸಂಬಂಧ ಅಧಿಕೃತ ಸರಬರಾಜುದಾರರು ಮತ್ತು ಪ್ರಸಿದ್ಧ ಸಂಸ್ಥೆಗಳಿಂದ ಟೆಂಡರ್‌ನ್ನು ಕರೆಯಲಾಗಿದೆ.

ಮಾನ್ಯ ಸಚಿವರುಗಳ ಅಧಿಕೃತ ನಿವಾಸ/ಕಚೇರಿಗಳಿಗೆ ಅಳವಡಿಸಬೇಕಾಗಿರುವ ಕೀ–ಟೆಲಿಫೋನ್ ಸಂಪರ್ಕ ವ್ಯವಸ್ಥೆಯ ಉಪಕರಣಗಳ ವಿವರಗಳು:–

ಕ್ರಮ ಸಂಖ್ಯೆ	ಉಪಕರಣಗಳ ಮಾದರಿ	ಉಪಕರಣಗಳ ಸಂಖ್ಯೆ
1	3/8 ಲೈನುಗಳ ಆಧುನಿಕ ಮಾದರಿಯ ಪ್ಯಾನಾಸೋನಿಕ್ ಸಂಪರ್ಕ ವ್ಯವಸ್ಥೆಯ ಮುಖ್ಯ ಉಪಕರಣಗಳು	25
2	ಪ್ಯಾನಾಸೋನಿಕ್ ಕೀ–ಟೆಲಿಫೋನ್ ಉಪಕರಣಗಳು	75
3	ಪುಶ್ ಬಟನ್ ದೂರವಾಣಿ ಉಪಕರಣಗಳು	25
4	ಕೇಬಲ್ (ಕೇಸಿಂಗ್ ಜೊತೆಗೆ) ಅಳವಡಿಕೆ ವೆಚ್ಚ	

ಅಲ್ಪಾವಧಿ ಟೆಂಡರ್‌ನ ಷರತ್ತುಗಳು ಈ ಕೆಳಕಂಡಂತಿವೆ:–

1) ಮೊಹರು ಮಾಡಿದ ಅಲ್ಪಾವಧಿ ಟೆಂಡರ್ ಕವರಿನ ಮೇಲೆ "ಕೀ ಟೆಲಿಫೋನ್ ಸಂಪರ್ಕ ವ್ಯವಸ್ಥೆಯ ಟೆಂಡರ್" ಎಂದು ಬರೆದಿರತಕ್ಕದ್ದು.
2) ಟೆಂಡರ್‌ನೊಂದಿಗೆ ರೂ. 5,000–00 ಮುಂಗಡ ಹಣ ಮೊತ್ತಕ್ಕೆ (ಇಎಂಡಿ) ಬ್ಯಾಂಕ್ ಡ್ರಾಫ್ಟ್‌ನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಲೆಕ್ಕಪತ್ರ), ವಿಧಾನಸೌಧ, ಬೆಂಗಳೂರು–1, ಇವರಿಗೆ ಸಂಭೋದಿಸಿ ಕಳುಹಿಸತಕ್ಕದ್ದು.

3) ರೂ.5,000–00ಕ್ಕೆ ಬ್ಯಾಂಕ್ ಡ್ರಾಫ್ಟ್‌ನ್ನು ಲಗತ್ತಿಸಿರದ ಟೆಂಡರನ್ನು ತಿರಸ್ಕರಿಸಲಾಗುವುದು.
4) ಟೆಂಡರ್‌ನ್ನು ದಿನಾಂಕ: 25–9–2008ರ 3–00 ಗಂಟೆಯೊಳಗೆ ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಕಾರ್ಯಕಾರಿ), ಕೊಠಡಿ ಸಂಖ್ಯೆ:23, ವಿಧಾನಸೌಧ, ಬೆಂಗಳೂರು–1, ಇವರಿಗೆ ಸಲ್ಲಿಸತಕ್ಕದ್ದು.
5) ಟೆಂಡರ್‌ನ್ನು ದಿನಾಂಕ: 26–9–2008ರ ಮಧ್ಯಾಹ್ನ 4–00 ಗಂಟೆಗೆ ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಕಾರ್ಯಕಾರಿ), ವಿಧಾನಸೌಧ, ಬೆಂಗಳೂರು ಇವರ ಕೊಠಡಿಯಲ್ಲಿ ಟೆಂಡರ್‌ದಾರರ ಸಮ್ಮುಖದಲ್ಲಿ ತೆರೆಯಲಾಗುವುದು.
6) ಭದ್ರತಾ ಠೇವಣಿ ಮೊತ್ತ ರೂ. 5,000–00ನ್ನು ಯಶಸ್ವಿ ಟೆಂಡರ್‌ದಾರರ ಅಂತಿಮ ಬಿಲ್ಲಿನಲ್ಲಿ ಹೊಂದಾಣಿಕೆ ಮಾಡಿ ಸರಿದೂಗಿಸಲಾಗುವುದು. ಅಯಶಸ್ವಿ ಟೆಂಡರ್‌ದಾರರ ಡಿ.ಡಿ.ಗಳನ್ನು ಬಡ್ಡಿರಹಿತವಾಗಿ ಹಿಂದಿರುಗಿಸಲಾಗುವುದು.
7) ಟೆಂಡರ್‌ನೊಂದಿಗೆ ದಿನಾಂಕ: 31–03–2008ಕ್ಕೆ ಅನ್ವಯಿಸುವ ಆದಾಯತೆರಿಗೆ ಮತ್ತು ಮಾರಾಟ ತೆರಿಗೆ ಪಾವತಿ ಮಾಡಿರುವ ಸರ್ಟಿಫಿಕೇಟ್‌ಗಳನ್ನು ಸಲ್ಲಿಸತಕ್ಕದ್ದು.
8) ಹೊಸದಾಗಿ ಅಳವಡಿಸಿರುವ ಕೀ ಟೆಲಿಫೋನ್ ಸಂಪರ್ಕ ವ್ಯವಸ್ಥೆಗೆ ಸಂಬಂಧಪಟ್ಟಂತೆ ಯಾವುದೇ ಬಿಡಿ ಭಾಗಗಳು ಮತ್ತು ದುರಸ್ಥಿಯ ವೆಚ್ಚವನ್ನು ಈ ಸಂಪರ್ಕ ವ್ಯವಸ್ಥೆಯನ್ನು ಅಳವಡಿಸುವ ದಿನಾಂಕದಿಂದ 1 (ಒಂದು) ವರ್ಷದ ಅವಧಿಗೆ ಭರಿಸುವ ಜವಾಬ್ದಾರಿ ಉಪಕರಣ ಅಳವಡಿಸಿರುವ ಸಂಸ್ಥೆಯದ್ದಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಕೆ.ಎಸ್. ಮಂಜುನಾಥ್
ಪಿ.ಆರ್. 468 ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಕಾರ್ಯಕಾರಿ)

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಅಧಿಸೂಚನೆ

ಸಿಆಸುಇ 2 ಡಿಟಿಎಂ 2008, ಬೆಂಗಳೂರು, ದಿನಾಂಕ: 01ನೇ ಸೆಪ್ಟೆಂಬರ್ 2008

ವಿಷಯ: ಕರ್ನಾಟಕ ಸರ್ಕಾರ ಸಚಿವಾಲಯದ ಕಛೇರಿಗಳಲ್ಲಿರುವ ಕಾಪಿಯರ್ ಯಂತ್ರಕ್ಕೆ ಬಳಕೆ ಪದಾರ್ಥಗಳನ್ನು ಖರೀದಿಸುವ ಬಗ್ಗೆ.

ಕರ್ನಾಟಕ ಸರ್ಕಾರ ಸಚಿವಾಲಯದ ಕಛೇರಿಗಳಲ್ಲಿರುವ ಕಾಪಿಯರ್ ಯಂತ್ರಕ್ಕೆ ಬಳಕೆ ಪದಾರ್ಥಗಳನ್ನು ಖರೀದಿಸುವ ಸಲುವಾಗಿ ಕರೆಯಲಾಗಿದ್ದ ಟೆಂಡರ್ ಪ್ರಕಟಣೆ ಸಂಖ್ಯೆ ಸಿಆಸುಇ 2 ಡಿಟಿಎಂ 2008 ದಿನಾಂಕ 25/07/2008ನ್ನು ಈ ಮೂಲಕ ರದ್ದುಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಕೆ.ಎಸ್. ಮಂಜುನಾಥ್
ಪಿ.ಆರ್. 476 ಸರ್ಕಾರ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಕಾರ್ಯಕಾರಿ)

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಟೆಂಡರ್ ಪ್ರಕಟಣೆ

ಸಂಖ್ಯೆ: ಸಿಆಸುಇ 02 ಡಿಟಿಎಂ 2008, ಬೆಂಗಳೂರು, ದಿನಾಂಕ: 01ನೇ ಸೆಪ್ಟೆಂಬರ್ 2008

ಕರ್ನಾಟಕ ಸರ್ಕಾರ ಸಚಿವಾಲಯದಲ್ಲಿನ ವಿವಿಧ ಕಛೇರಿಗಳ ಉಪಯೋಗಕ್ಕಾಗಿ ಶಾರ್ಪ್ ಕಾಪಿಯರ್ ಯಂತ್ರಗಳ ಬಳಕೆ ಪದಾರ್ಥಗಳನ್ನು ಆಗ್ಗಿಂದಾಗ್ಗೆ ಅಗತ್ಯಕ್ಕೆ ತಕ್ಕ ಪರಿಮಾಣದಲ್ಲಿ ಖರೀದಿಸಲು ಉದ್ದೇಶಿಸಲಾಗಿದೆ. ಈ ಸಂಬಂಧ ತಯಾರಕರು ಅಥವಾ ಅವರ ಅಧಿಕೃತ ಮಾರಾಟಗಾರರಿಂದ ಒಂದು ವರ್ಷದ ಅವಧಿಗೆ ದರ ನಿಗಧಿ ಪಡಿಸುವ ಸಂಬಂಧ ಮೊಹರಾದ ಟೆಂಡರ್‌ಗಳನ್ನು ಅಹ್ವಾನಿಸಿದೆ. ಅಧಿಕೃತ ಮಾರಾಟಗಾರರ ಬಗ್ಗೆ ದೃಢೀಕರಣ ಪತ್ರವನ್ನು ಟೆಂಡರ್‌ನೊಂದಿಗೆ ಲಗತ್ತಿಸಿರಬೇಕು. ಬಳಕೆ ಪದಾರ್ಥಗಳ ಖರೀದಿಯ ಅಂದಾಜು ಪರಿಮಾಣ ಸುಮಾರು ಈ ಕೆಳಕಂಡಂತಿದೆ:–

ಕ್ರಮ ಸಂಖ್ಯೆ	ಸಾಮಗ್ರಿಗಳ ವಿವರ	ಖರೀದಿಸಲು ಇಚ್ಚಿಸಿರುವ ಪರಿಮಾಣ
1	AR 202ST Toner Cartridge for Sharp AR 205 M	300
2	AR 455ST Toner Cartridge for Sharp MX 450M	25

ಕ್ರಮ ಸಂಖ್ಯೆ	ಸಾಮಗ್ರಿಗಳ ವಿವರ	ಖರೀದಿಸಲು ಇಚ್ಛಿಸಿರುವ ಪರಿಮಾಣ
3	AR 202 DR Drum for Sharp AR 205 M	60
4	AR 455 DR Drum for Sharp MX 450 M	10
5	AR 202 SD Developer for Sharp AR 205 M	60
6	AR 455 SD Developer for Sharp MX 450 M	10

ಇಚ್ಛೆಯುಳ್ಳ ತಯಾರಕರು ಅಥವಾ ಅವರ ಮಾರಾಟಗಾರರು / ವಿತರಕರು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಲೆಕ್ಕಪತ್ರ) ಕೊಠಡಿ ಸಂಖ್ಯೆ: 25, ನೆಲಮಹಡಿ, ವಿಧಾನಸೌಧ ಇಲ್ಲಿ ರೂ.100.00 + ಶೇಕಡ 12.5 ರಂತೆ ಮಾರಾಟ ತೆರಿಗೆ, ಅಂದರೆ ರೂ.114/– (ರೂಪಾಯಿ ನೂರ ಹದಿನಾಲ್ಕು ಮಾತ್ರ)ಗಳನ್ನು ನಗದು ಅಥವಾ ಡಿಮ್ಯಾಂಡ್ ಡ್ರಾಫ್ಟ್ ರೂಪದಲ್ಲಿ ಸಲ್ಲಿಸಿ ನಂತರ ಟೆಂಡರ್ ನಮೂನೆಯನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಕಾರ್ಯಕಾರಿ), ಕೊಠಡಿ ಸಂಖ್ಯೆ: 23, ನೆಲಮಹಡಿ, ವಿಧಾನಸೌಧ, ಇಲ್ಲಿ ಪಡೆದುಕೊಳ್ಳಬಹುದು. **ದಿನಾಂಕ 22/09/2008** ರಂದು ಮಧ್ಯಾಹ್ನ 3:30 ಘಂಟೆಯವರೆಗೆ ಟೆಂಡರ್ ಅರ್ಜಿಗಳನ್ನು ನೀಡಲಾಗುವುದು. ಈ ಟೆಂಡರ್ ನಮೂನೆಗೆ ನೀಡಿದ ಮೊತ್ತವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ.

ಟೆಂಡರ್‌ಗಳನ್ನು ಸಲ್ಲಿಸಲು ಕೊನೆಯ **ದಿನಾಂಕ 01/10/2008** ರಂದು ಮಧ್ಯಾಹ್ನ 3:30 ಘಂಟೆವರೆಗೆ, ತದನಂತರ ಬಂದ ಟೆಂಡರ್ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಟೆಂಡರ್‌ಗಳನ್ನು ಟೆಂಡರ್ ಬುಲಿಟಿನ್ ಅಧಿಕಾರಿಯವರು ಕೊಠಡಿ ಸಂಖ್ಯೆ: 23, ವಿಧಾನಸೌಧ, ಬೆಂಗಳೂರು – 560 001 ಇಲ್ಲಿ ಟೆಂಡರ್‌ದಾರರ ಸಮ್ಮುಖದಲ್ಲಿ **ದಿನಾಂಕ 03/10/2008** ರಂದು ಮಧ್ಯಾಹ್ನ 4:30 ಘಂಟೆಗೆ ತೆರೆಯಲಾಗುವುದು. ಟೆಂಡರ್ ತೆರೆಯುವ ದಿನಾಂಕವು ಯಾವುದಾದರೂ ಸಾರ್ವತ್ರಿಕ ರಜೆ ದಿನವಾದಲ್ಲಿ ಮಾರನೆಯ ಕೆಲಸದ ದಿನ ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ ತೆರೆಯಲಾಗುವುದು.

1. ಟೆಂಡರ್ ಅರ್ಜಿಗಳನ್ನು ಈ ಕಛೇರಿಯಿಂದಲೇ ಖರೀದಿಸಿ ದ್ವಿಪ್ರತಿಯಲ್ಲಿ ಸಲ್ಲಿಸತಕ್ಕದ್ದು.
2. ಮೊಹರಾದ ಟೆಂಡರ್ ಲಕೋಟೆಯ ಮೇಲೆ **"ಕಾಪಿಯರ್ ಯಂತ್ರಗಳ ಬಳಕೆ ಪದಾರ್ಥಗಳ ದರಪಟ್ಟಿ"** ಎಂದು ಬರೆಯತಕ್ಕದ್ದು.
3. ಟೆಂಡರ್‌ದಾರರು ಎಲ್ಲಾ ಸಾಮಗ್ರಿಗಳಿಗೂ ಅಥವಾ ಅವರು ಸರಬರಾಜು ಮಾಡುವ ಸಾಮಗ್ರಿಗಳಿಗೆ ಮಾತ್ರ ಸೀಮಿತಗೊಳಿಸಿ ದರಗಳನ್ನು ನಮೂದಿಸಬಹುದು.
4. ಟೆಂಡರ್‌ದಾರರು ಸೂಚಿಸಿದ ದರಕ್ಕೆ ತೆರಿಗೆಗಳಿದ್ದಲ್ಲಿ ಪ್ರತ್ಯೇಕವಾಗಿ ನಮೂದಿಸಬೇಕು.
5. ಮುಂಗಡ ಠೇವಣಿ (ಇ.ಎಂ.ಡಿ) ಮೊತ್ತ ರೂ.5000/– ಗಳ ಬ್ಯಾಂಕ್ ಡಿಮ್ಯಾಂಡ್ ಡ್ರಾಫ್ಟ್‌ನ್ನು **ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಲೆಕ್ಕಪತ್ರ), ವಿಧಾನಸೌಧ, ಬೆಂಗಳೂರು – 560 001** ಇವರ ಹೆಸರಿನಲ್ಲಿ ಸಲ್ಲಿಸತಕ್ಕದ್ದು, ಮೂಲ ಬ್ಯಾಂಕ್ ಡಿಮ್ಯಾಂಡ್ ಡ್ರಾಫ್ಟ್‌ನ್ನು ಲಗತ್ತಿಸಿರದ ಟೆಂಡರ್‌ಗಳನ್ನು ತಿರಸ್ಕರಿಸಲಾಗುವುದು.
6. ದರಪಟ್ಟಿಯೊಂದಿಗೆ ಜುಲೈ 2008ರ ಅಂತ್ಯದವರೆಗೆ ಮೌಲ್ಯವರ್ಧಿತ ತೆರಿಗೆ ಸಲ್ಲಿಸಿದ ಬಗ್ಗೆ ದಾಖಲೆ ಸಲ್ಲಿಸತಕ್ಕದ್ದು.
7. ದರಪಟ್ಟಿಯೊಂದಿಗೆ ಕಳೆದ ಸಾಲಿನಲ್ಲಿ ಪಾವತಿಸಿದ ಆದಾಯ ತೆರಿಗೆ ಬಗ್ಗೆ ದಾಖಲೆಗಳನ್ನು (ಸರಳ್) ಸಲ್ಲಿಸತಕ್ಕದ್ದು.
8. ನಮೂದಿಸುವ ದರವು ಸಾಗಾಣಿಕೆ ವೆಚ್ಚ ಇತ್ಯಾದಿಗಳನ್ನು ಒಳಗೊಂಡಿರಬೇಕು.
9. ಟೆಂಡರ್‌ನ್ನು ಅನುಮೋದಿಸಿದಲ್ಲಿ ಟೆಂಡರ್‌ದಾರರು ಗೊತ್ತು ಪಡಿಸಿರುವ ದರದಲ್ಲಿಯೇ, ಗೊತ್ತು ಪಡಿಸಿದ ದಿನಾಂಕದಿಂದ ಒಂದು ವರ್ಷದ ಅವಧಿಯವರೆಗೆ ಸಾಮಗ್ರಿಗಳನ್ನು ಒದಗಿಸಲು ಬದ್ಧರಿರಬೇಕು.
10. ಒದಗಿಸುವ ಸಾಮಗ್ರಿಗಳು ದೋಷದಿಂದ ಕೂಡಿದ್ದಲ್ಲಿ ಕೂಡಲೇ ಬದಲಾಯಿಸಿ ಕೊಡಲು ಬದ್ದರಿರಬೇಕು, ಇಲ್ಲದಿದ್ದಲ್ಲಿ ಅವುಗಳನ್ನು ತಿರಸ್ಕರಿಸಲಾಗುವುದು.
11. ಸಾಮಗ್ರಿಗಳನ್ನು ಒದಗಿಸುವಂತೆ ಪತ್ರ ಬರೆದ 10 (ಹತ್ತು) ದಿನಗಳೊಳಗಾಗಿ ಒದಗಿಸಲು ಬದ್ದರಿರಬೇಕು.
12. ಯಶಸ್ವಿ ಟೆಂಡರ್‌ದಾರರು ಸಾಮಗ್ರಿಗಳ ಒಟ್ಟು ಮೌಲ್ಯದ ಶೇಕಡಾ 5% ಭದ್ರತಾ ಠೇವಣಿಯನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಲೆಕ್ಕಪತ್ರ), ವಿಧಾನ ಸೌಧ, ಬೆಂಗಳೂರು ಇವರ ಹೆಸರಿಗೆ ನೀಡತಕ್ಕದ್ದು.

13. ಯಶಸ್ವಿ ಟೆಂಡರ್‌ದಾರರ ಭದ್ರತಾ ಠೇವಣಿಯನ್ನು, ಸಾಮಗ್ರಿಗಳನ್ನು ಸರಬರಾಜು ಮಾಡಿದ ನಂತರ ಷರತ್ತುಗಳ ಉಲ್ಲಂಘನೆ ಆಗಿರದಿದ್ದಲ್ಲಿ ಮಾತ್ರ ವಾಪಸ್ಸು ಮಾಡಲಾಗುವುದು. ಇದಕ್ಕೆ ಯಾವುದೇ ರೀತಿಯ ಬಡ್ಡಿಯನ್ನು ನೀಡಲಾಗುವುದಿಲ್ಲ.
14. ಮೇಲಿನ ಅಂಶಗಳ ಬಗ್ಗೆ ಅಪೂರ್ಣ ವಿವರ ಇರುವ ಟೆಂಡರ್‌ಗಳನ್ನು ತಿರಸ್ಕರಿಸಲಾಗುವುದು.
15. ಯಾವುದೇ ಕಾರಣವನ್ನು ನೀಡದೆ ಟೆಂಡರ್‌ಗಳನ್ನು ಸ್ವೀಕರಿಸುವ ಅಥವಾ ತಿರಸ್ಕರಿಸುವ ಹಕ್ಕನ್ನು ಟೆಂಡರ್ ಅಂಗೀಕರಿಸುವ ಸಕ್ಷಮ ಅಧಿಕಾರಿಯವರು ಕಾಯ್ದಿರಿಸಿಕೊಂಡಿದ್ದಾರೆ. ಇವರ ನಿರ್ಣಯವೇ ಅಂತಿಮವಾದದ್ದು.

ಇನ್ನು ಹೆಚ್ಚಿನ ವಿವರಗಳಿಗೆ ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಕಾರ್ಯಕಾರಿ), ಇವರನ್ನು ಕಛೇರಿ ವೇಳೆಯಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 22033440 ಅಥವಾ 22033971 ರಲ್ಲಿ ಸಂಪರ್ಕಿಸಬಹುದು.

ಕೆ.ಎಸ್. ಮಂಜುನಾಥ್
ಸರ್ಕಾರದ ಅಧೀನ ಕಾರ್ಯದರ್ಶಿಗಳು,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಕಾರ್ಯಕಾರಿ)

ಅನುಬಂಧ

ಟೆಂಡರ್ ಪ್ರಕಟಣೆ ಸಂಖ್ಯೆ:

ಕಾಪಿಯರ್ ಯಂತ್ರಗಳ ಬಳಕೆ ಪದಾರ್ಥಗಳ ದರ

ಸಿಆಸುಇ 02 ಡಿಟಿಎಂ 2008

ಕ್ರಮ ಸಂಖ್ಯೆ	**ಸಾಮಗ್ರಿಗಳ ವಿವರ**	**ದರ ಒಂದಕ್ಕೆ**	**ತೆರಿಗೆ**
1	AR 202ST Toner Cartridge for Sharp AR 205 M		
2	AR 455ST Toner Cartridge for Sharp MX 450 M		
3	AR 202 DR Drum for Sharp AR 205 M		
4	AR 455 DR Drum for Sharp MX 450 M		
5	AR 202 SD Developer for Sharp AR 205 M		
6	AR 455 SD Developer for Sharp MX 450 M		

ಟೆಂಡರ್‌ದಾರರ ಸಹಿ
(ಪೂರ್ಣ ಹೆಸರು ವಿಳಾಸ ಮೊಹರಿನೊಂದಿಗೆ)

ಕೆ.ಎಸ್. ಮಂಜುನಾಥ್
ಪಿ.ಆರ್. 477 ಸರ್ಕಾರದ ಅಧೀನ ಕಾರ್ಯದರ್ಶಿಗಳು,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಕಾರ್ಯಕಾರಿ)

FORM - IV

(See Rule 12)

NOTICE

It is hereby notified that the undersigned has changed his/her name from **BASAPPA LAXMAN CHALAWADI** to **BASAVARAJ. LAXMAN SONA.**

P.D. 123 **BASAPPA LAXMAN CHALAWADI**

ಕರ್ನಾಟಕ ಲೋಕಸೇವಾ ಆಯೋಗ

ಉದ್ಯೋಗ ಸೌಧ, ಬೆಂಗಳೂರು – 560 001

ಸೇರ್ಪಡೆ ಅಧಿಸೂಚನೆ – II

ಸಂಖ್ಯೆ: ಇ(3)2169/2008–09/ಪಿಎಸ್‌ಸಿ, ದಿನಾಂಕ : 01ನೇ ಸೆಪ್ಟೆಂಬರ್ 2008

ಉಲ್ಲೇಖ: 1) ಈ ಕಛೇರಿ ಅಧಿಸೂಚನೆ ಸಂಖ್ಯೆ: ಇ(3) 230/2007–08/ಪಿಎಸ್‌ಸಿ, ದಿನಾಂಕ: 05–12–2007.

2) ಸೇರ್ಪಡೆ ಅಧಿಸೂಚನೆ ಸಂಖ್ಯೆ: ಇ(3)2136/2008–09/ಪಿಎಸ್‌ಸಿ, ದಿನಾಂಕ: 18–08–2008.

ಕರ್ನಾಟಕ ಸರ್ಕಾರದ ವಿವಿಧ ಇಲಾಖೆಗಳಲ್ಲಿರುವ ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹುದ್ದೆಗಳಿಗೆ ಕರ್ನಾಟಕ ನಾಗರೀಕ ಸೇವೆಗಳ (ಲಿಪಿಕ ಹುದ್ದೆಗಳ ನೇಮಕಾತಿ) ನಿಯಮಗಳು 1978 ಮತ್ತು ಅದರ ತಿದ್ದುಪಡಿಯನ್ವಯ ನೇಮಕಾತಿ ಮಾಡಲು ಉಲ್ಲೇಖಿತ ಆಯೋಗದ ಅಧಿಸೂಚನೆಯಲ್ಲಿನ ಅನುಬಂಧ 4 ಮತ್ತು 5ರಲ್ಲಿ ವಿವಿಧ ನೇಮಕಾತಿ ಪ್ರಾಧಿಕಾರಗಳಲ್ಲಿ ಖಾಲಿ ಇರುವ ಹುದ್ದೆಗಳ ವಿವರಗಳನ್ನು ಪ್ರಕಟಿಸಲಾಗಿತ್ತು. ಈ ಹುದ್ದೆಗಳ ಸಂಖ್ಯೆಯು ಬದಲಾವಣೆಗೆ ಒಳಪಟ್ಟಿರುತ್ತದೆ ಎಂದು ತಿಳಿಸಲಾಗಿತ್ತು. ಅದರಂತೆ ಈ ಅಧಿಸೂಚನೆ ಹಾಗೂ ಉಲ್ಲೇಖ 2ರ ಸೇರ್ಪಡೆ ಅಧಿಸೂಚನೆ ಪ್ರಕಟಿಸಿದ ನಂತರ ಕೆಲವು ನೇಮಕಾತಿ ಪ್ರಾಧಿಕಾರಗಳವರು ತಮ್ಮ ಇಲಾಖೆಗಳಲ್ಲಿ ಖಾಲಿ ಇರುವ ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ನೇಮಕಾತಿ ಮಾಡಿ ಆಯ್ಕೆ ಪಟ್ಟಿ ಒದಗಿಸಲು ಬೇಡಿಕೆ ಸಲ್ಲಿಸಿರುತ್ತಾರೆ. ಈ ಇಲಾಖೆಗಳ ಹುದ್ದೆಗಳನ್ನು ಪ್ರಸ್ತುತದ ನೇಮಕಾತಿಗೆ ಸೇರಿಸಿಕೊಳ್ಳುವ ಸಲುವಾಗಿ ಅದರ ವಿವರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಈ ಮೂಲಕ ಪ್ರಕಟಿಸಿದೆ.

ಅನುಬಂಧ–4ಕ್ಕೆ ಸೇರ್ಪಡೆ (Addendum) - II

ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ನೇಮಕಾತಿಗೆ ಸೇರ್ಪಡೆ ಮಾಡುವ ಹುದ್ದೆಗಳ ಪಟ್ಟಿ

ಕ್ರಮ ಸಂಖ್ಯೆ	ಇಲಾಖೆಯ ಹೆಸರು	ಹುದ್ದೆಗಳ ಸಂಖ್ಯೆ
1	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ	50
2	ಕೃಷಿ ಇಲಾಖೆ	40
3	ಆಯುಷ್ ಇಲಾಖೆ	05
4	ತಾಂತ್ರಿಕ ಶಿಕ್ಷಣ ಇಲಾಖೆ	19
5	ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಮಂಡ್ಯ	13
ಒಟ್ಟು		**127**

ಈ ಮೇಲಿನ ಇಲಾಖೆಗಳ ಹುದ್ದೆಗಳ ವರ್ಗೀಕರಣ:–

1. ಆಯುಷ್ ಇಲಾಖೆ, ಬೆಂಗಳೂರು								
ಮೀಸಲಾತಿ	**ಇತರೆ**	**ಮಹಿಳೆ**	**ಗ್ರಾಮೀಣ**	**ಮಾ.ಸೈ.**	**ಕ.ಮಾ.ಅ**	**ಯೋ.ಅ.**	**ಅಂ.ವಿ**	**ಒಟ್ಟು**
ಪ.ಜಾ.	––	01	––	––	––	––	––	01
ಪ್ರ.–2(ಎ)	01	––	––	––	––	––	––	01
ಸಾ.ಅ.	––	01	01	––	––	––	01	03
ಒಟ್ಟು.	**01**	**02**	**01**	––	––	––	**01**	**05**

2. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು								
ಮೀಸಲಾತಿ	**ಇತರೆ**	**ಮಹಿಳೆ**	**ಗ್ರಾ.ಅ**	**ಮಾ.ಸೈ.**	**ಕ.ಮಾ.ಅ**	**ಯೋ.ಅ**	**ಅಂ.ವಿ**	**ಒಟ್ಟು**
ಪ.ಜಾ	01	02	02	01	––	––	02	08
ಪ.ಪಂ.	––	01	––	––	––	––	––	01
ಪ್ರ–1	01	––	01	––	––	––	––	02
ಪ್ರ–2ಎ	01	03	02	01	––	––	02	09
ಪ್ರ– 2ಬಿ	01	––	01	––	––	––	––	02
ಪ್ರ–3ಎ	––	––	01	––	––	––	––	01
ಪ್ರ–3ಬಿ	01	01	––	––	––	––	––	02
ಸಾ.ಅ.	05	07	06	03	01	01	02	25
ಒಟ್ಟು	**10**	**14**	**13**	**05**	**01**	**01**	**06**	**50**

3. ಕೃಷಿ ಇಲಾಖೆ, ಬೆಂಗಳೂರು,								
ಮೀಸಲಾತಿ	ಇತರೆ	ಮಹಿಳೆ	ಗ್ರಾ.ಅ	ಮಾ.ಸೈ.	ಕ.ಮಾ.ಅ	ಯೋ.ಅ	ಅಂ.ವಿ	ಒಟ್ಟು
ಪ.ಜಾ	--	02	02	--	01	01	--	06
ಪ.ಪಂ.	01	--	--	--	--	--	--	01
ಪ್ರವರ್ಗ 1	--	01	--	--	--	--	--	01
ಪ್ರವರ್ಗ 2ಎ	--	01	02	--	01	01	--	05
ಪ್ರವರ್ಗ 2ಬಿ	01	01	--	--	--	--	--	02
ಪ್ರವರ್ಗ 3ಎ	01	01	--	--	--	--	--	02
ಪ್ರವರ್ಗ 3ಬಿ	01	01	01	--	--	--	--	03
ಸಾ.ಅ.	04	06	05	02	01	01	01	20
ಒಟ್ಟು	**08**	**13**	**10**	**02**	**03**	**03**	**01**	**40**

4. ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು								
ಮೀಸಲಾತಿ	ಇತರೆ	ಮಹಿಳೆ	ಗ್ರಾ.ಅ	ಮಾ.ಸೈ.	ಕ.ಮಾ.ಅ	ಯೋ.ಅ	ಅಂ.ವಿ	ಒಟ್ಟು
ಪ.ಜಾ	--	01	01	--	01	--	--	03
ಪ್ರವರ್ಗ 1	01	--	--	--	--	--	--	01
ಪ್ರವರ್ಗ 2ಎ	--	01	01	--	01	--	--	03
ಪ್ರವರ್ಗ 2ಬಿ	01	--	--	--	--	--	--	01
ಪ್ರವರ್ಗ 3ಎ	01	--	--	--	--	--	--	01
ಪ್ರವರ್ಗ 3ಬಿ	01	--	--	--	--	--	--	01
ಸಾ.ಅ.	02	03	02	01	--	--	01	09
ಒಟ್ಟು	**06**	**05**	**04**	**01**	**02**	--	**01**	**19**

5. ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಡ್ಯ								
ಮೀಸಲಾತಿ	ಇತರೆ	ಮಹಿಳೆ	ಗ್ರಾ.ಅ	ಮಾ.ಸೈ.	ಕ.ಮಾ.ಅ	ಯೋ.ಅ	ಅಂ.ವಿ	ಒಟ್ಟು
ಪ.ಜಾ	--	01	01	--	--	--	--	02
ಪ್ರವರ್ಗ 1	--	01	--	--	--	--	--	01
ಪ್ರವರ್ಗ 2ಎ	--	01	01	--	--	--	01	03
ಪ್ರವರ್ಗ 2ಬಿ	--	01	--	--	--	--	--	01
ಸಾ.ಅ.	--	02	02	--	01	01	--	06
ಒಟ್ಟು	--	**06**	**04**	--	**01**	**01**	**01**	**13**

ಅನುಬಂಧ–5ಕ್ಕೆ ಸೇರ್ಪಡೆ (Addendum) – II

ಕಿರಿಯ ಸಹಾಯಕರು/ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ನೇಮಕಾತಿಗೆ ಸೇರ್ಪಡೆ ಮಾಡುವ ಹುದ್ದೆಗಳ ಪಟ್ಟಿ

ಕ್ರಮ ಸಂಖ್ಯೆ	ಇಲಾಖೆಯ ಹೆಸರು	ಹುದ್ದೆಗಳ ಸಂಖ್ಯೆ
1	ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಮಂಡ್ಯ	17
2	ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು	10
3	ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಗಳೂರು	03
4	ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಬಳ್ಳಾಪುರ	09
5	ಉದ್ಯೋಗ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು	57
	ಒಟ್ಟು	**96**

ಈ ಮೇಲಿನ ಇಲಾಖೆಗಳ ಹುದ್ದೆಗಳ ವರ್ಗೀಕರಣ:–

1. ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಮಂಡ್ಯ								
ಮೀಸಲಾತಿ	ಇತರೆ	ಮಹಿಳೆ	ಗ್ರಾ.ಅ	ಮಾ.ಸೈ.	ಕ.ಮಾ.ಅ	ಯೋ.ಅ	ಅಂ.ವಿ	ಒಟ್ಟು
ಪ.ಜಾ	01	01	--	--	--	--	--	02

ಮೀಸಲಾತಿ	ಇತರೆ	ಮಹಿಳೆ	ಗ್ರಾ.ಅ	ಮಾ.ಸೈ.	ಕ.ಮಾ.ಅ	ಯೋ.ಅ	ಅಂ.ವಿ	ಒಟ್ಟು
ಪ.ಪಂ.	––	––	01	––	––	––	––	01
ಪ್ರ–2ಎ	01	01	––	01	––	––	––	03
ಪ್ರ–3ಎ	––	––	01	––	––	––	––	01
ಪ್ರ–3ಬಿ	––	––	01	––	––	––	––	01
ಸಾ.ಅ.	01	03	02	––	01	01	01	09
ಒಟ್ಟು	**03**	**05**	**05**	**01**	**01**	**01**	**01**	**17**
2. ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು								
ಮೀಸಲಾತಿ	ಇತರೆ	ಮಹಿಳೆ	ಗ್ರಾ.ಅ	ಮಾ.ಸೈ.	ಕ.ಮಾ.ಅ	ಯೋ.ಅ	ಅಂ.ವಿ	ಒಟ್ಟು
ಪ.ಜಾ	––	01	––	––	––	––	––	01
ಪ್ರ–2ಎ	––	01	––	––	––	01	––	02
ಪ್ರ–3ಎ	––	01	––	––	––	––	––	01
ಪ್ರ–3ಬಿ	––	––	01	––	––	––	––	01
ಸಾ.ಅ.	––	01	01	01	––	01	01	05
ಒಟ್ಟು	**––**	**04**	**02**	**01**	**––**	**02**	**01**	**10**
3. ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಗಳೂರು.								
ಮೀಸಲಾತಿ	ಇತರೆ	ಮಹಿಳೆ	ಗ್ರಾ.ಅ	ಮಾ.ಸೈ.	ಕ.ಮಾ.ಅ	ಯೋ.ಅ	ಅಂ.ವಿ	ಒಟ್ಟು
ಪ.ಜಾ	01	––	––	––	––	––	––	01
ಪ್ರ–3ಬಿ	––	––	01	––	––	––	––	01
ಸಾ.ಅ.	––	––	01	––	––	––	––	01
ಒಟ್ಟು	**01**	**––**	**02**	**––**	**––**	**––**	**––**	**03**
4. ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಬಳ್ಳಾಪುರ.								
ಮೀಸಲಾತಿ	ಇತರೆ	ಮಹಿಳೆ	ಗ್ರಾ.ಅ	ಮಾ.ಸೈ.	ಕ.ಮಾ.ಅ	ಯೋ.ಅ	ಅಂ.ವಿ	ಒಟ್ಟು
ಪ.ಜಾ	01	01	––	––	––	––	––	02
ಪ.ಪಂ.	01	––	––	––	––	––	––	01
ಪ್ರ–1	01	––	––	––	––	––	––	01
ಪ್ರ–2ಎ	01	––	––	––	––	––	––	01
ಸಾ.ಅ.	01	01	01	––	––	––	01	04
ಒಟ್ಟು	**05**	**02**	**01**	**––**	**––**	**––**	**01**	**09**
5. ಉದ್ಯೋಗ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು								
ಮೀಸಲಾತಿ	ಇತರೆ	ಮಹಿಳೆ	ಗ್ರಾ.ಅ	ಮಾ.ಸೈ.	ಕ.ಮಾ.ಅ	ಯೋ.ಅ	ಅಂ.ವಿ	ಒಟ್ಟು
ಪ.ಜಾ	02	03	03	––	––	––	01	09
ಪ.ಪಂ.	01	01	––	––	––	––	––	02
ಪ್ರ–1	01	01	01	––	––	––	––	03
ಪ್ರ–2ಎ	02	03	03	––	––	––	01	09
ಪ್ರ–2ಬಿ	01	01	––	––	––	––	––	02
ಪ್ರ–3ಎ	01	01	––	––	––	––	––	02
ಪ್ರ–3ಬಿ	01	01	––	––	––	––	––	02
ಸಾ.ಅ.	06	09	07	02	01	01	02	28
ಒಟ್ಟು	**15**	**20**	**14**	**02**	**01**	**01**	**04**	**57**

ವಿ.ಬಿ. ಪಾಟೀಲ್
ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ.

ಪಿ.ಆರ್. 475

ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ, ಕೋಲಾರ

ಅಧಿಸೂಚನೆ

ಸಂಖ್ಯೆ:ಎಡಿಎಂ.01/2008, ದಿನಾಂಕ: 21ನೇ ಆಗಸ್ಟ್ 2008

ವಿಷಯ: ಶೀಘ್ರಲಿಪಿಗಾರರು, ಬೆರಳಚ್ಚು–ನಕಲುಗಾರರು ಹಾಗೂ ಸೇವಕರ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ.

ಉಲ್ಲೇಖ: ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದ ಪತ್ರದ ಸಂಖ್ಯೆ: ಎಲ್.ಸಿ.ಎ–II.205/2004 ದಿನಾಂಕ: 2.5.2008ರ ಅನ್ವಯ 2 ಶೀಘ್ರಲಿಪಿಗಾರರು, 1 ಬೆರಳಚ್ಚು–ನಕಲುಗಾರರು ಹಾಗೂ 31 ಸೇವಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಿರುತ್ತಾರೆ.

ಮೇಲ್ಕಂಡ ಅಧಿಸೂಚನೆಯನ್ವಯ ಕೋಲಾರ ಜಿಲ್ಲಾ ನ್ಯಾಯಾಲಯ ಹಾಗೂ ಜಿಲ್ಲೆಯ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ ಕೆಳಕಂಡ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ನಿಗದಿಪಡಿಸಿದ ಅರ್ಜಿ ನಮೂನೆಯ ಬೆರಳಚ್ಚು ಪ್ರತಿ / ಗಣಕೀಕೃತ ಪ್ರತಿಯಲ್ಲಿಯೇ ಅಭ್ಯರ್ಥಿಗಳು ತಮ್ಮ ಸ್ವಂತ ಕೈಬರಹದಿಂದ ಎಲ್ಲಾ ಅಂಕಣಗಳನ್ನು ಜಾಗರೂಕತೆಯಿಂದ ಭರ್ತಿ ಮಾಡಿ ದಿನಾಂಕ:18.10.2008 ರಂದು ಸಂಜೆ 5.00 ಗಂಟೆಯ ಒಳಗೆ ಸಲ್ಲಿಸತಕ್ಕದ್ದು.

ಅರ್ಜಿಗಳನ್ನು ಸಲ್ಲಿಸಲು ನಿಗದಿ ಮಾಡಿದ ಕೊನೆಯ ದಿನಾಂಕ:18.10.2008 ಖಾಲಿ ಇರುವ ಹುದ್ದೆಗಳ ವರ್ಗೀಕರಣ:

ಕ್ರ. ಸಂ.	ಹುದ್ದೆಯ ಹೆಸರು	ಹುದ್ದೆಗಳ ಸಂಖ್ಯೆ	ಮೀಸಲಾತಿ	ಹುದ್ದೆಗಳ ವರ್ಗೀಕರಣ							
				ಸಾ.ಅ	ಪ.ಜಾ	ಪ.ಪಂ.	ಪ್ರ.1	II–ಎ	II–ಬಿ	III–ಎ	III–ಬಿ
1	ಶೀಘ್ರಲಿಪಿಗಾರರು	2	ಇತರೇ	1	–	–	–	–	–	–	–
			ಮ.ಅ	–	1	–	–	–	–	–	–
			ಗ್ರಾ.ಅ	–	–	–	–	–	–	–	–
	ಒಟ್ಟು	**2**		**1**	**1**	–	–	–	–	–	–
2	ಬೆರಳಚ್ಚು–ನಕಲುಗಾರರು	1	ಇತರೇ	–	–	–	–	–	–	–	–
			ಮ.ಅ	–	–	–	–	–	–	–	–
			ಗ್ರಾ.ಅ	–	1	–	–	–	–	–	–
			ಕ.ಮಾ.ಅ	–	–	–	–	–	–	–	–
	ಒಟ್ಟು	**1**		–	**1**	–	–	–	–	–	–
3	ಸೇವಕರು	31	ಇತರೇ	3	1	1	1	1	1	1	1
			ಗ್ರಾ.ಅ	4	1	–	–	1	–	–	–
			ಮ.ಅ	5	2	–	1	2	–	–	–
			ಅಂ.ಅ.	1	1	–	–	1	–	–	–
			ಮಾ.ಸೈ.ಆ	1		–	–	–	–	–	–
			ಕ.ಮಾ.ಅ	1	–	–	–	–	–	–	–
	ಒಟ್ಟು	**31**		**15**	**5**	**1**	**2**	**5**	**1**	**1**	**1**

ಸೂಚನೆ: ಅರ್ಹ ಪರಿಶಿಷ್ಟ ಜಾತಿ ಪಂಗಡದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಅದೇ ಪಂಗಡದ ಪುರುಷ ಅಭ್ಯರ್ಥಿಗಳ ಅರ್ಜಿಗಳನ್ನು ಪರಿಗಣಿಸಲಾಗುವುದು.

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಸಂಕ್ಷಿಪ್ತ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು.

ಸಾ.ಆ – ಸಾಮಾನ್ಯ ಅಭ್ಯರ್ಥಿ	ಪ.ಜಾ – ಪರಿಶಿಷ್ಟ ಜಾತಿ
ಪ.ಪಂ. – ಪರಿಶಿಷ್ಟ ಪಂಗಡ	ಪ್ರ.1 – ಪ್ರವರ್ಗ 1
ಮ.ಅ – ಮಹಿಳಾ ಅಭ್ಯರ್ಥಿ	ಗ್ರಾ.ಅ – ಗ್ರಾಮೀಣ ಅಭ್ಯರ್ಥಿ
ಕ.ಮಾ.ಅ – ಕನ್ನಡ ಮಾಧ್ಯಮ ಅಭ್ಯರ್ಥಿ	ಅಂ. ಅ. – ಅಂಗವಿಕಲ ಅಭ್ಯರ್ಥಿ
ಮಾ.ಸೈ.ಅ – ಮಾಜಿ ಸೈನಿಕ ಅಭ್ಯರ್ಥಿ	ಯೋ.ನಿ.ಅ – ಯೋಜನಾ ನಿರಾಶ್ರಿತ ಅಭ್ಯರ್ಥಿ

ವಿದ್ಯಾರ್ಹತೆ:

ಶೀಘ್ರಲಿಪಿಗಾರರು	ಬೆರಳಚ್ಚು–ನಕಲುಗಾರರು
1. ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.	1. ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
2. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಮತ್ತು ಆಂಗ್ಲ ಪ್ರೌಢದರ್ಜೆ (Senior Grade) ಶೀಘ್ರಲಿಪಿ ಹಾಗೂ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪ್ರೌಢದರ್ಜೆ ಪರೀಕ್ಷೆ ಮತ್ತು ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.	2. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪ್ರಥಮ ದರ್ಜೆ (Junior Grade) ಪರೀಕ್ಷೆ ಮತ್ತು ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.
ಸೇವಕರು	
1. 7ನೇ ತರಗತಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.	
2. ಕನ್ನಡ ಭಾಷೆಯನ್ನು ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು.	

ವಯೋಮಿತಿ:

ಕನಿಷ್ಠ ವಯೋಮಿತಿ : 18 ವರ್ಷ

ಗರಿಷ್ಠ ವಯೋಮಿತಿ : ಸಾಮಾನ್ಯ ವರ್ಗ – 33 ವರ್ಷ
2ಎ/2ಬಿ/3ಎ/3ಬಿ – 36 ವರ್ಷ
ಪ.ಜಾ/ಪ.ಪಂ/ಪ್ರವರ್ಗ–1 – 38 ವರ್ಷ

ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಹಾಗೂ ಅಂಗವಿಕಲರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

ವೇತನ ಶ್ರೇಣಿ:

ಶೀಘ್ರಲಿಪಿಗಾರರು: 7275–175–7800–200–8600–225–9500–250–10500–300–12300–350–13350 ಮತ್ತು ಇತರೆ ಭತ್ಯೆಗಳು.

ಬೆರಳಚ್ಚು–ನಕಲುಗಾರರು: 5800–100–6000–125–6500–150–7100–175–7800–200–8600–225–9500–10500 ಮತ್ತು ಇತರೆ ಭತ್ಯೆಗಳು.

ಸೇವಕರು: 4800–100–6000–125–6500–150–7100–175–7275 ಮತ್ತು ಇತರೆ ಭತ್ಯೆಗಳು

ಆಯ್ಕೆ ವಿಧಾನ:

ಕರ್ನಾಟಕ ಅಧೀನ ನ್ಯಾಯಾಲಯಗಳು (ಮಿನಿಸ್ಟ್ರಿಯಲ್ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2007 ರ ಅನ್ವಯ ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು.

ಪರಿವೀಕ್ಷಣಾ ಅವಧಿ:–

ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕಾತಿ ನಿಯಮಗಳಂತೆ 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿಡಲಾಗುವುದು.

ಪ್ರಾಮುಖ್ಯವಾದ ಸೂಚನೆಗಳು:

ಅಭ್ಯರ್ಥಿಗಳು ಕೆಳಕಂಡ ಪ್ರಮಾಣ ಪತ್ರಗಳ ಒಂದೊಂದು ಛಾಯಾ (ಫೋಟೋ) ಪ್ರತಿಗಳನ್ನು ಸ್ವದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಬೇಕು.

1. ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಪ್ರಮಾಣ ಪತ್ರಗಳು.
2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ವರ್ಗಾವಣೆ ಪ್ರಮಾಣ ಪತ್ರ/ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
3. ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
4. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ ಮತ್ತು ಪ್ರವರ್ಗ–3ಬಿ ಗಳ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ)
5. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ – 1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)

6. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
7. ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
8. ಯೋಜನೆಗಳಿಂದ ನಿರಾಶ್ರಿತಾರಾದ ಅಭ್ಯರ್ಥಿಯ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
9. ಶಾಲಾ/ಕಾಲೇಜಿನ ಮುಖ್ಯೋಪಾಧ್ಯಾಯರು/ಪ್ರಾಂಶುಪಾಲರಿಂದ ಪಡೆದ ಒಂದು ನಡತೆ ಪ್ರಮಾಣ ಪತ್ರ ಹಾಗೂ ಸ್ಥಳೀಯ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ 6 ತಿಂಗಳ ಈಚೆಗಿನ ಎರಡು ನಡತೆ ಪ್ರಮಾಣ ಪತ್ರಗಳು.

ಇತರೇ ಸೂಚನೆಗಳು:

1. ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿಯೊಂದಿಗೆ ತಮ್ಮ ಮೇಲಾಧಿಕಾರಿಗಳಿಂದ ಪಡೆದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಲಗತ್ತಿಸತಕ್ಕದ್ದು.
2. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.
3. ಒಂದಕ್ಕಿಂತ ಹೆಚ್ಚು ಹುದ್ದೆಗೆ ಅರ್ಜಿ ಸಲ್ಲಿಸುವವರು ಪ್ರತಿ ಹುದ್ದೆಗಳಿಗೂ ಪ್ರತ್ಯೇಕವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.
4. ಅರ್ಜಿಯಲ್ಲಿ ಮತ್ತು ಲಕೋಟೆಯ ಮೇಲೆ ಹುದ್ದೆಯ ಹೆಸರನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.
5. ಅರ್ಜಿಯೊಂದಿಗೆ 5 ರೂಪಾಯಿ ಅಂಚೆ ಮುದ್ರಾಂಕ (postal stamp) ವನ್ನು ಹೊಂದಿರುವ ಸ್ವ–ವಿಳಾಸದ ಲಕೋಟೆಯನ್ನು ಸಲ್ಲಿಸತಕ್ಕದ್ದು.
6. ಅರ್ಜಿಯೊಂದಿಗೆ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಒಂದು ಭಾವಚಿತ್ರವನ್ನು ಸ್ವದೃಢೀಕರಿಸಿ ಲಗತ್ತಿಸಬೇಕು.
7. ಶೀಘ್ರಲಿಪಿಗಾರರು ಹಾಗೂ ಬೆರಳಚ್ಚು–ನಕಲುಗಾರರ ಹುದ್ದೆಗೆ ಅರ್ಹ ಅಭ್ಯರ್ಥಿಗಳನ್ನು 1:5ರ ಹಾಗೂ ಜವಾನರ ಹುದ್ದೆಗೆ ಅರ್ಹ ಅಭ್ಯರ್ಥಿಗಳನ್ನು 1:10 ರ ಅನುಪಾತದಲ್ಲಿ ಸಂದರ್ಶನಕ್ಕೆ ಆಯ್ಕೆ ಮಾಡಲಾಗುವುದು. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು ಹಾಗೂ ಸಂದರ್ಶನ ಪತ್ರ ಬರದಿರುವ ಅಭ್ಯರ್ಥಿಗಳು ಸಂದರ್ಶನಕ್ಕೆ ಅರ್ಹರಲ್ಲವೆಂದು ಭಾವಿಸಿಕೊಳ್ಳತಕ್ಕದ್ದು.
8. ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.

ವಿಶೇಷ:

ಕೊನೆಯ ದಿನಾಂಕದ ನಂತರ ಸಲ್ಲಿಸಲಾದ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ವಿ.ಎಂ. ಆರಾಧ್ಯ
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕೋಲಾರ.

ಅರ್ಜಿ ನಮೂನೆ

ಶೀಘ್ರಲಿಪಿಗಾರ / ಬೆರಳಚ್ಚು–ನಕಲುಗಾರ / ಸೇವಕರ ಹುದ್ದೆಗೆ ಅರ್ಜಿ

ಗೆ:
ಮಾನ್ಯ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,
ಕೋಲಾರ.

ಸ್ವದೃಢೀಕರಿಸಿದ
ಪಾಸ್‌ಪೋರ್ಟ್ ಅಳತೆಯ
ಭಾವಚಿತ್ರವನ್ನು ಅಂಟಿಸಬೇಕು.

ಮಾನ್ಯರೆ,

ತಮ್ಮ ನ್ಯಾಯಾಲಯದ ಅಧಿಸೂಚನೆ ಸಂಖ್ಯೆ: ದಿನಾಂಕ: ರ ಪ್ರಕಟಣೆ ಮೇರೆಗೆ ನಾನು ಕೆಳಕಂಡ ಮಾಹಿತಿಗಳೊಂದಿಗೆ ಶೀಘ್ರಲಿಪಿಗಾರ / ಬೆರಳಚ್ಚು–ನಕಲುಗಾರ / ಸೇವಕರ ಹುದ್ದೆಗೆ ನನ್ನ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ.

1.	ಅಭ್ಯರ್ಥಿಯ ಹೆಸರು (ದಪ್ಪ ಅಕ್ಷರಗಳಲ್ಲಿ)	
2.	ತಂದೆಯ / ತಾಯಿಯ / ಗಂಡನ / ಹೆಂಡತಿಯ ಹೆಸರು	
3.	ಪೂರ್ಣ ವಿಳಾಸ	

4.	ಹುಟ್ಟಿದ ದಿನಾಂಕ ಮತ್ತು ವಯಸ್ಸು			
5.	ತಂದೆ / ತಾಯಿ / ಗಂಡನ ವೃತ್ತಿ ಮತ್ತು ವಾರ್ಷಿಕ ಆದಾಯ			
6.	ಜಾತಿ, ಉಪಜಾತಿ/ ಪ್ರ–1, ಪ್ರ–2ಎ, ಪ್ರ–2ಬಿ, ಪ್ರ–3ಎ, ಪ್ರ–3ಬಿ, ಗುಂಪಿಗೆ ಸೇರಿದವರೇ			
7.	ಶೈಕ್ಷಣಿಕ ವಿದ್ಯಾರ್ಹತೆ	ಉತ್ತೀರ್ಣರಾದ ವರ್ಷ ಮತ್ತು ತಿಂಗಳು	ಗರಿಷ್ಠ ಅಂಕಗಳು	ಪಡೆದ ಅಂಕಗಳು
	1. 7ನೇ / 10ನೇ ತರಗತಿ 2. ಕನ್ನಡ ಶೀಘ್ರಲಿಪಿ ಪ್ರೌಢದರ್ಜೆ 3. ಆಂಗ್ಲ ಶೀಘ್ರಲಿಪಿ ಪ್ರೌಢದರ್ಜೆ 4. ಕನ್ನಡ ಬೆರಳಚ್ಚು ಪ್ರೌಢದರ್ಜೆ 5. ಆಂಗ್ಲ ಬೆರಳಚ್ಚು ಪ್ರೌಢದರ್ಜೆ 6. ಕನ್ನಡ ಬೆರಳಚ್ಚು ಪ್ರಥಮ ದರ್ಜೆ 7. ಆಂಗ್ಲ ಬೆರಳಚ್ಚು ಪ್ರಥಮ ದರ್ಜೆ			
8.	ವಿವಾಹಿತರೆ / ಅವಿವಾಹಿತರೇ (ವಿವಾಹಿತರಾಗಿದ್ದಲ್ಲಿ ಒಂದಕ್ಕಿಂತ ಹೆಚ್ಚು ಜೀವಂತ ಪತಿ / ಪತ್ನಿಯನ್ನು ಹೊಂದಿದ್ದಾರೆಯೇ)			
9.	ಭಾರತೀಯ ನಾಗರೀಕರೇ? ಇಲ್ಲವಾದಲ್ಲಿ ಯಾವ ರಾಷ್ಟ್ರೀಯತೆಗೆ ಸೇರಿರುವಿರಿ ಎಂದು ನಮೂದಿಸತಕ್ಕದ್ದು (ಸಂಬಂಧಪಟ್ಟ ದೃಢೀಕರಣ ಪತ್ರವನ್ನು ಲಗತ್ತಿಸತಕ್ಕದ್ದು).			
10.	ಯಾವುದಾದರೂ ಅಪರಾಧಗಳಿಗೆ ಶಿಕ್ಷೆಗೆ ಒಳಪಟ್ಟಿರುತ್ತೀರಾ?			

ಈ ಮೇಲ್ಕಂಡ ಮಾಹಿತಿಗಳು ನನಗೆ ತಿಳಿದ ಮಟ್ಟಿಗೆ ಸತ್ಯ ಮತ್ತು ಸರಿಯಾಗಿವೆಯೆಂದು ಪ್ರಮಾಣೀಕರಿಸುತ್ತೇನೆ ಮತ್ತು ಒಂದು ವೇಳೆ ಮೇಲ್ಕಂಡ ಮಾಹಿತಿಗಳು ತಪ್ಪು ಎಂದು ಕಂಡುಬಂದಲ್ಲಿ ನನ್ನ ಅಭ್ಯರ್ಥಿತನವನ್ನು ರದ್ದುಪಡಿಸಬಹುದು ಎಂದು ಈ ಮೂಲಕ ಘೋಷಿಸುತ್ತೇನೆ.

ದಿನಾಂಕ:

ಸ್ಥಳ: ಅಭ್ಯರ್ಥಿಯ ಸಹಿ

ವಿಶೇಷ ಸೂಚನೆ:–

ಅ) ಅರ್ಜಿಯೊಂದಿಗೆ 5 ರೂಪಾಯಿ ಅಂಚೆ ಮುದ್ರಾಂಕ (postal stamp) ವನ್ನು ಹೊಂದಿರುವ ಸ್ವ–ವಿಳಾಸದ ಲಕೋಟೆಯನ್ನು ಸಲ್ಲಿಸತಕ್ಕದ್ದು.

ಆ) ಅನ್ವಯಿಸದ್ದನ್ನು ಹೊಡೆದು ಹಾಕಿ.

ಪಿ.ಆರ್. 463

FORM - IV

(See Rule 12)

NOTICE

It is hereby notified that the undersigned has changed his/her name from **YAMANAPPA. SANGAPPA. CHALAWADI** to **YAMANAPPA.SANGAPPA.GORABAL.**

P.D. 124   **YAMANAPPA. SANGAPPA. CHALAWADI**

ಕೃಷಿ ಇಲಾಖೆ

ಕೃಷಿ ಆಯುಕ್ತರ ಕಾರ್ಯಾಲಯ, ಶೇಷಾದ್ರಿ ರಸ್ತೆ, ಬೆಂಗಳೂರು – 1

ಮರು ಟೆಂಡರ್ – ಕಂ – ಬಹಿರಂಗ ಹರಾಜು ಪ್ರಕಟಣೆ

ಸಂಖ್ಯೆ:ಸಾಮಾನ್ಯ:ಜವ ಬೆ ಯಂತ್ರ:22:2007–08, ದಿನಾಂಕ: 14ನೇ ಆಗಸ್ಟ್ 2008

ವಿಷಯ: ಕೇಂದ್ರ ಕಛೇರಿಯಲ್ಲಿರುವ ಅನುಪಯುಕ್ತ ಬೆರಳಚ್ಚು ಯಂತ್ರಗಳನ್ನು ಟೆಂಡರ್–ಕಂ–ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡುವ ಕುರಿತು.

ಕೇಂದ್ರ ಕಛೇರಿಯಲ್ಲಿರುವ ಅನುಪಯುಕ್ತವಾಗಿರುವ ಒಟ್ಟು 31 ವಿವಿಧ ಮಾದರಿಯ ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಯಂತ್ರಗಳನ್ನು ಹಾಲಿ ಇರುವ ಸ್ಥಿತಿಯಲ್ಲಿ ದಿನಾಂಕ: 25.09.2008 ರಂದು ಅಪರಾಹ್ನ 3.30 ಗಂಟೆಗೆ ಕೃಷಿ ಆಯುಕ್ತರ ಕಛೇರಿ, ಶೇಷಾದ್ರಿ ರಸ್ತೆ, ಬೆಂಗಳೂರು–1 ಇವರ ಕಛೇರಿಯ ಕೇಂದ್ರ ಉಗ್ರಾಣದಲ್ಲಿ ಮರು ಟೆಂಡರ್–ಕಂ–ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು.

ಆಸಕ್ತಿಯುಳ್ಳವರು ಈ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಬಹುದು ಹಾಗೂ ಹೆಚ್ಚಿನ ವಿವರಗಳಿಗೆ / ಷರತ್ತುಗಳಿಗೆ ಕೇಂದ್ರ ಕಛೇರಿಯ ಸೂಚನಾ ಫಲಕ ಅವಲೋಕಿಸುವುದು ಅಥವಾ ಈ ಕಛೇರಿಯ ಸಾಮಾನ್ಯ ವಿಭಾಗದ ಅಧೀಕ್ಷಕರನ್ನು ಸಂಪರ್ಕಿಸುವುದು.

ತಮ್ಮ ವಿಶ್ವಾಸಿ,

ಪಿ.ಆರ್. 472 ಕೃಷಿ ನಿರ್ದೇಶಕರ ಪರವಾಗಿ

ಕರ್ನಾಟಕ ಲೋಕಸೇವಾ ಆಯೋಗ

ಅಧಿಸೂಚನೆ

ಸಂಖ್ಯೆ: ಇ(2)332/2008–09/ಪಿಎಸ್‌ಸಿ, ದಿನಾಂಕ : 12ನೇ ಆಗಸ್ಟ್ 2008

ವಿಷಯ: ಕೆ.ಎ.ಟಿ. ಅರ್ಜಿ ಸಂಖ್ಯೆ 12732 ಮತ್ತು 12735, 13914, 13018, 14452, 14065/02 ಮತ್ತು 1499/2003 ಕ್ಕೆ ಸಂಬಂಧಿಸಿದಂತೆ ಮಾನ್ಯ ನ್ಯಾಯಮಂಡಳಿಯ ದಿನಾಂಕ: 13.03.2008ರ ಅಂತಿಮ ಆದೇಶದನ್ವಯ ಅಬಕಾರಿ ಇಲಾಖೆಯಲ್ಲಿನ ಅಬಕಾರಿ ಉಪ ನಿರೀಕ್ಷಕರ ಸಾ.ಅ/ಮಾ.ಸೈ ಹುದ್ದೆಗಳಿಗೆ 02 ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ.

ಉಲ್ಲೇಖ:
1. ಆಯೋಗದ ಅಧಿಸೂಚನೆ ಸಂಖ್ಯೆ: ಇ(2)30/2002–03/ಪಿಎಸ್‌ಸಿ, ದಿ: 30.07.2004.
2. ಆಯೋಗದ ಅಧಿಸೂಚನೆ ಸಂಖ್ಯೆ: ಇ(2)167/2003–04/ಪಿಎಸ್‌ಸಿ, ದಿ: 06.02.2004.
3. ದಿನಾಂಕ: 13.03.2008ರ ಮಾನ್ಯ ಕೆ.ಎ.ಟಿ. ಆದೇಶ.
4. ಆಯೋಗದ ಅಧಿಸೂಚನೆ ಸಂಖ್ಯೆ: ಇ(2)72/2008–09/ಪಿಎಸ್‌ಸಿ, ದಿ: 03.06.2008.
5. ಆಯೋಗದ ಅಧಿಸೂಚನೆ ಸಂಖ್ಯೆ: 276/2008–09/ಪಿಎಸ್‌ಸಿ, ದಿ: 22.07.2008.

ಉಲ್ಲೇಖಿತ (2)ರ ಅಧಿಸೂಚನೆಯಲ್ಲಿ ಅಬಕಾರಿ ಇಲಾಖೆಯಲ್ಲಿನ ಅಬಕಾರಿ ಉಪ ನಿರೀಕ್ಷಕರ ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಪಡಿಸಲಾಗಿದೆ. ಕೆ.ಎ.ಟಿ. ಅರ್ಜಿ ಸಂಖ್ಯೆ 12732 ಮತ್ತು 12735, 13914, 13018, 14452, 14065/02 ಮತ್ತು 1499/03 ಕ್ಕೆ ಸಂಬಂಧಿಸಿದಂತೆ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ದಿನಾಂಕ: 13.03.2008ರ ಅಂತಿಮ ಆದೇಶದನ್ವಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಉಲ್ಲೇಖ–(4)ರಲ್ಲಿ ಪ್ರಕಟಪಡಿಸಿ ಆನಂತರ ದಿನಾಂಕ: 22.07.2008ರಂದು ಪ್ರಕಟಪಡಿಸಿದ ಪರಿಷ್ಕೃತ ತಾತ್ಕಾಲಿಕ ಆಯ್ಕೆ ಪಟ್ಟಿಯ ಬಗ್ಗೆ ಯಾವುದೇ ಆಕ್ಷೇಪಣೆಗಳು ಸ್ವೀಕೃತಗೊಂಡಿಲ್ಲದಿದ್ದು, ಸದರಿ ಪಟ್ಟಿಯಲ್ಲಿನ ಅಭ್ಯರ್ಥಿಗಳನ್ನೇ ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆ ಮಾಡಲಾಗಿದೆ.

ಕ್ರ. ಸಂ.	ಅಭ್ಯರ್ಥಿಯ ಹೆಸರು, ವಿಳಾಸ ಮತ್ತು ನೋಂದಣಿ ಸಂಖ್ಯೆ	ಲಿಂಗ	ಜನ್ಮ ದಿನಾಂಕ	ಮೀಸಲಾತಿ	ಷರಾ
1.	ಶ್ರೀ ರಾಜೇಂದ್ರ ಕೆ. ಮುರನಾಳ "ಹೊಂಗಿರಣ" 24 ಬಿ–3, 2ನೇ ಮುಖ್ಯರಸ್ತೆ, 7ನೇ ಅಡ್ಡರಸ್ತೆ, ಮಂಜುನಾಥ ಕಾಲೋನಿ, ಶಿವಗಿರಿ, ಧಾರವಾಡ–07	ಪುರುಷ	11.03.1964	ಸಾ.ಅ/ಮಾ.ಸೈ	ದಿನಾಂಕ: 30.07.2004 ರಂದು ಪ್ರಕಟಪಡಿಸಲಾದ ಅಂತಿಮ ಆಯ್ಕೆ ಪಟ್ಟಿಯಲ್ಲಿನ ಕ್ರಮ ಸಂಖ್ಯೆ: 99 ಮತ್ತು 100ರ ಮಧ್ಯೆ ಇವರ ಹೆಸರನ್ನು ಸೇರಿಸಿದೆ.
2.	ಶ್ರೀ ರಮೇಶ ಬಾಬು c/o ಬಿ.ವಿ. ಆದಿನಾರಾಯಣ, ಬಳಗೇರಿ ರಸ್ತೆ, ವರ್ತೂರು ಅಂಚೆ, ಬೆಂಗಳೂರು ಈಸ್ಟ್, ತಾಲ್ಲೂಕು–560087	ಪುರುಷ	01.07.1961	ಸಾ.ಅ/ಮಾ.ಸೈ.	ದಿನಾಂಕ:30.07.2004 ರಂದು ಪ್ರಕಟಪಡಿಸಲಾದ ಅಂತಿಮ ಆಯ್ಕೆ ಪಟ್ಟಿಯಲ್ಲಿನ ಕ್ರಮಸಂಖ್ಯೆ 233 ಮತ್ತು 234ರ ಮಧ್ಯೆ ಇವರ ಹೆಸರನ್ನು ನಿಗದಿಪಡಿಸಿದೆ.

ಸೂಚನೆ:–

1. ಮೇಲ್ಕಂಡ ಅಂತಿಮ ಆಯ್ಕೆ ಪಟ್ಟಿಯನ್ನು ಕೆ.ಎ.ಟಿ. ಅರ್ಜಿ ಸಂಖ್ಯೆ 12732 ಮತ್ತು 12735, 13914, 13018, 14452, 14065/02 ಮತ್ತು 1499/03ರ ಸಂಬಂಧ ಮಾನ್ಯ ನ್ಯಾಯ ಮಂಡಳಿಯ ದಿನಾಂಕ: 13.03.2008ರ ಅಂತಿಮ ಆದೇಶದ ಮೇರೆಗೆ ಸಿದ್ಧಪಡಿಸಲಾಗಿದೆ.

ವಿ.ಬಿ. ಪಾಟೀಲ್
ಪಿ.ಆರ್. 469 ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ.

FORM - IV
(See Rule 12)
NOTICE

It is hereby notified that the undersigned has changed his/her name from **Smt. SUSHEELA SHANTARAMA BHAT** to **Smt. SUMAIYYA SHABBEERAHMAD TATAGAR.**

P.D. 125 **Smt. SUSHEELA SHANTARAMA BHAT**

FORM - IV
(See Rule 12)
NOTICE

It is hereby notified that the undersigned has changed his/her name from **HOSURAPPA BHARAMAPPA HUCCHODRA** to **HOSURAPPA BHARAMAPPA HOSAMANI.**

P.D. 126 **HOSURAPPA BHARAMAPPA HUCCHODRA**

FORM - IV
(See Rule 12)
NOTICE

It is hereby notified that the undersigned has changed his/her name from **KENCHAPPA LAXMAPPA BHANDENNAVAR** to **KENCHAPPA LAXMAPPA BHANDI.**

P.D. 127 **KENCHAPPA LAXMAPPA BHANDENNAVAR**

ಶಿಕ್ಷಣ ಇಲಾಖೆ
ಡಿ.ಡಿ.ಪಿ.ಐ. ಬಾಗಲಕೋಟೆ
(ನಮೂನೆ–1)
[9ನೇ ನಿಯಮ ನೋಡಿ]
ಅಧಿಸೂಚನೆ

ಶ್ರೀ **ಕರಿಯಪ್ಪ. ಹನಮಪ್ಪ. ಮಾದರ.** ಇವರು ಸಹ ಶಿಕ್ಷಕರಾಗಿ, ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಜಲಗೇರಿ ತಾ॥ ಬದಾಮಿ ಜಿ॥ ಬಾಗಲಕೋಟೆ ಇಲ್ಲಿ ಕೆಲಸ ನಿರ್ವಹಿಸುತ್ತಿದ್ದು ಇವರ ಹೆಸರನ್ನು **ಕರಿಯಪ್ಪ. ಹನಮಪ್ಪ. ಹಲಕುರ್ಕಿ** ಎಂದು ಬದಲಾಯಿಸಿಕೊಳ್ಳಲು ಅನುಮತಿ ನೀಡಲಾಗಿದೆ.

ಪಿ.ಡಿ. 128 ನೇಮಕಾಧಿಕಾರಿಯವರ ಸಹಿ ಮತ್ತು ಪದನಾಮ

FORM - IV
(See Rule 12)
NOTICE

It is hereby notified that the undersigned has changed his/her name from **TUKARAM RAMACHANDRAPPA. MOODI** to **TUKKAPPA. RAMACHANDRAPPA. MOODI.**

P.D. 129 **TUKARAM RAMACHANDRAPPA. MOODI**